ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 128
29–10–2025 ಬುಧವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 128

## ಕ್ಯಾಂಪಸ್ ಸಂದರ್ಶನದಲ್ಲಿ ಬಿಐಇಟಿ ವಿದ್ಯಾರ್ಥಿಗಳು ನೇಮಕಾತಿ

**ದಾವಣಗೆರೆ:** ನಗರದ ಬಾಪೂಜಿ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಪ್ರಸ್ತುತ ಶೈಕ್ಷಣಿಕ ವರ್ಷದ ಕ್ಯಾಂಪಸ್ ನೇಮಕಾತಿಯಲ್ಲಿ ಒಟ್ಟು ಹದಿನಾರು ವಿದ್ಯಾರ್ಥಿಗಳು ಆಯ್ಕೆಯಾಗಿ ಅತ್ಯುತ್ತಮ ಸಾಧನೆಗೈದಿದ್ದಾರೆ.

ಇತ್ತೀಚಿಗೆ ಬಿಐಇಟಿಯ ಕ್ಯಾಂಪಸ್‌ನಲ್ಲಿ ನಡೆದ ಒಸಿಯನ್ ಲಿಂಕ್ ಸೀ ಸರ್ವಿಸಸ್, ನಾಗ್ಪುರ, ಮಹಾರಾಷ್ಟ್ರ, ಸಂಸ್ಥೆಯ ಕ್ಯಾಂಪಸ್ ಸಂದರ್ಶನದಲ್ಲಿ ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯುನಿಕೇಷನ್ ವಿಭಾಗದಿಂದ ಹನ್ನೊಂದು ವಿದ್ಯಾರ್ಥಿಗಳು, ಎಲೆಕ್ಟ್ರಿಲ್ ವಿಭಾಗದಿಂದ ನಾಲ್ಕು ವಿದ್ಯಾರ್ಥಿಗಳು ಟ್ರೈನಿ ಎಲೆಕ್ಟ್ರೋ ಟೆಕ್ನಿಕಲ್ ಆಫೀಸರ್ ಹುದ್ದೆಗೆ ಆಯ್ಕೆಯಾಗಿದ್ದಾರೆ ಹಾಗೂ ಮೆಕ್ಯಾನಿಕಲ್ ವಿಭಾಗದಿಂದ ಒಬ್ಬ ವಿದ್ಯಾರ್ಥಿ ಗ್ರಾಜುಯೇಟ್ ಮೆರೈನ್ ಎಂಜಿನಿಯರ್ ಹುದ್ದೆಗೆ ವಾರ್ಷಿಕ 3.6 ರಿಂದ 6 ಲಕ್ಷ ವೇತನದೊಂದಿಗೆ ಆಯ್ಕೆಯಾಗಿದ್ದಾರೆ.

ವಿದ್ಯಾರ್ಥಿಗಳ ಸಾಧನೆ ಮತ್ತು ಪರಿಶ್ರಮಕ್ಕೆ, ಕಾಲೇಜಿನ ಪ್ರಾಂಶುಪಾಲರಾದ ಡಾ. ಎಚ್ ಬಿ ಅರವಿಂದ್, ನಿರ್ದೇಶಕರಾದ ಪ್ರೊ. ವೈ ವೃಷಭೇಂದ್ರಪ್ಪ, ತರಬೇತಿ ಮತ್ತು ಉದ್ಯೋಗದ ಮುಖ್ಯಸ್ಥೆ ಸಿ. ಆರ್ ನಿರ್ಮಲ ಇವರು ವಿದ್ಯಾರ್ಥಿಗಳಿಗೆ ಶುಭ ಹಾರೈಸಿದ್ದಾರೆ.

## ಅ.29ರಂದು ಉಮ್ಮೀದ್ ಪೋರ್ಟಲ್ ಬಗ್ಗೆ ಜಾಗೃತಿ

**ಚಿತ್ರದುರ್ಗ:** ಚಿತ್ರದುರ್ಗ ನಗರದ ಆಜಾದ್ ಮಿಲ್ ಮುಂಭಾಗವಿರುವ ಎನ್.ಬಿ.ಟಿ.ಫಂಕ್ಷನ್ ಹಾಲ್‌ನಲ್ಲಿ ಇದೇ ಅಕ್ಟೋಬರ್ 29ರಂದು ಬೆಳಿಗ್ಗೆ 10.30ಕ್ಕೆ ಜಿಲ್ಲೆಯ ಎಲ್ಲಾ ವಕ್ಫ್ ಸಂಸ್ಥೆಗಳ ಅಧ್ಯಕ್ಷರು, ಕಾರ್ಯದರ್ಶಿ, ಆಡಳಿತಾಧಿಕಾರಿಗಳಿಗೆ ಉಮ್ಮೀದ್ ಪೋರ್ಟಲ್‌ನಲ್ಲಿ ವಕ್ಫ್ ಆಸ್ತಿಗಳ ದಾಖಲೆಗಳನ್ನು ಅಪ್ಲೋಡ್ ಮಾಡುವ ಬಗ್ಗೆ ಉಮ್ಮೀದ್ ಪೋರ್ಟಲ್ ಬಗ್ಗೆ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಉಮ್ಮೀದ್ ಪೋರ್ಟಲ್ ಬಗ್ಗೆ ಜಾಗೃತಿ ಮೂಡಿಸಲು ಕರ್ನಾಟಕ ರಾಜ್ಯ ಜೌಕಾಫ್ ಮಂಡಳಿಯ ಸದಸ್ಯರಾದ ಕೆ.ಅನ್ವರ್ ಬಾಷಾ ಸಾಹೇಬ್, ರಿಯಾಜ್ ಖಾನ್ ಸಾಹೇಬ್ ಮತ್ತು ಖಾಲಿದ್ ಅಹಮದ್ ಸಾಹೇಬ್ ಅವರು ಆಗಮಿಸುತ್ತಿದ್ದಾರೆ.

ಜಿಲ್ಲೆಯ ಎಲ್ಲಾ ವಕ್ಫ್ ಸಂಸ್ಥೆಗಳ ಅಧ್ಯಕ್ಷರು, ಕಾರ್ಯದರ್ಶಿ, ಆಡಳಿತಾಧಿಕಾರಿಗಳು ಜಾಗೃತಿ ಕಾರ್ಯಕ್ರಮದಲ್ಲಿ ತಪ್ಪದೇ ಪಾಲ್ಗೊಳ್ಳಬೇಕು ಎಂದು ಜಿಲ್ಲಾ ವಕ್ಫ್ ಅಧಿಕಾರಿ ಅಮ್ಜದ್ ಮೋಯಿನ್ ತಿಳಿಸಿದ್ದಾರೆ.

## ರಾಹುಲ್ ಗಾಂಧಿಗೆ ಜನನಾಯಕ ಬಿರುದು, ಮುಗಿಬಿದ್ದ ಬಿಜೆಪಿ, ಬಿಹಾರದಲ್ಲಿ ಗದ್ದಲ!



**ಹೊಸದಿಲ್ಲಿ :** ಕಾಂಗ್ರೆಸ್ ತನ್ನ ನಾಯಕ ರಾಹುಲ್ ಗಾಂಧಿಯನ್ನು 'ಜನ ನಾಯಕ' ಎಂದು ಬಣ್ಣಿಸಿರುವುದು ಬಿಜೆಪಿಯ ಟೀಕೆಗೆ ಗುರಿಯಾಗಿದೆ.

ಸಮಾಜವಾದಿ ಐಕಾನ್ ಮತ್ತು ಬಿಹಾರದ ಮಾಜಿ ಮುಖ್ಯಮಂತ್ರಿ ಕರ್ಪೂರಿ ಠಾಕೂರ್ ಅವರೊಂದಿಗೆ ಐತಿಹಾಸಿಕವಾಗಿ ಬೆಸೆದುಕೊಂಡಿರುವ ಈ ಬಿರುದನ್ನು ರಾಹುಲ್ ಗಾಂಧಿಗೆ ಕೊಟ್ಟಿರುವುದನ್ನು ಬಿಜೆಪಿ ಟೀಕಿಸಿದೆ. ರಾಹುಲ್ ಗಾಂಧಿ ಹಾಗೂ ಮಹಾಘಟಬಂಧನ ಸಿಎಂ ಅಭ್ಯರ್ಥಿ ತೇಜಸ್ವಿ ಯಾದವ್ ಇಬ್ಬರೂ ಲಾಯಕ್ ಇಲ್ಲ ಎಂದು ಬಿಜೆಪಿ ಆರೋಪಿಸಿದೆ. ಕಾಂಗ್ರೆಸ್ ತನ್ನ ಎಕ್ಸ್ ಹ್ಯಾಂಡಲ್‌ನಲ್ಲಿ ರಾಹುಲ್ ಗಾಂಧಿಯವರ ಪೋಸ್ಟ್ ಅನ್ನು ಹಂಚಿಕೊಂಡಿದ್ದು, ಅದಕ್ಕೆ ಜನನಾಯಕ ಅಥವಾ ಜನರ ನಾಯಕ ಎಂಬ ಶೀರ್ಷಿಕೆ ನೀಡಿದೆ. ರಾಹುಲ್ ಗಾಂಧಿಗೆ ಕಾಂಗ್ರೆಸ್ ನೀಡಿದ ಘೋಷಣೆ ಬಿಜೆಪಿಯನ್ನು ಕೆಣಕಿದ್ದಲ್ಲದೆ, ಜನ್ ನಾಯಕ್ ಉಲ್ಲೇಖವು ರಾಷ್ಟ್ರೀಯ ಜನತಾ ದಳದೊಳಗೆ ಭಿನ್ನಾಭಿಪ್ರಾಯಕ್ಕೂ ಕಾರಣವಾಯಿತು. ಇಂಡಿಯಾ ಬ್ಲಾಕ್ ಅಥವಾ ಮಹಾಘಟಬಂಧನ್ ಮೈತ್ರಿಕೂಟದ ಮುಖ್ಯಮಂತ್ರಿ ಅಭ್ಯರ್ಥಿ ತೇಜಸ್ವಿ ಯಾದವ್ 'ಬಿಹಾರ ಕಾ ನಾಯಕ್' ಎಂಬ ಶೀರ್ಷಿಕೆಯೊಂದಿಗೆ ಪೋಸ್ಟರ್‌ಗಳಲ್ಲಿ ಕಾಣಿಸಿಕೊಂಡಿದ್ದಾರೆ.

ರಾಹುಲ್ ಗಾಂಧಿ ಮತ್ತು ತೇಜಸ್ವಿ ಯಾದವ್ ಇಬ್ಬರಿಗೂ ಜನನಾಯಕ ಉಲ್ಲೇಖಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಬಿಜೆಪಿ ನಾಯಕ ಅಜಯ್ ಅಲೋಕ್, ಅವರಿಬ್ಬರೂ "ಲಾಯಕ್ ಅಲ್ಲ, ನಾಲಾಯಕ್ ಎಂದು ಹೇಳಿದರು. ಇನ್ನು ಮುಂದುವರೆದು ರಾಹುಲ್ ಗಾಂಧಿ ನಕ್ಸಲರು, ಭಾರತೀಯ ವಿರೋಧಿಗಳು, ಪಾಕಿಸ್ತಾನಿಗಳ ಜನ ನಾಯಕ ಎಂದು ಲೇವಡಿ ಮಾಡಿದರು.

## ಇಬ್ಬರು ಅಧಿಕಾರಿಗಳನ್ನು ಬದಲಾಯಿಸಿದೆ; ಈಗ ದಕ್ಷಿಣ ಕನ್ನಡ ಜಿಲ್ಲೆ ನಿಯಂತ್ರಣದಲ್ಲಿದೆ



**ಬೆಂಗಳೂರು:** ಮಂಗಳೂರು ಹತೋಟಿಗೆ ಬಂದಿದ್ದು ನಮ್ಮ ಅಧಿಕಾರಿಗಳಿಂದಲೇ ಎಂದು ಪೊಲೀಸರ ಬಗ್ಗೆ ಸಿದ್ದರಾಮಯ್ಯ ಪ್ರಶಂಸೆ ವ್ಯಕ್ತಪಡಿಸಿದ್ದಾರೆ. ಇಬ್ಬರು ಅಧಿಕಾರಿಗಳನ್ನು ಬದಲಾಯಿಸಿ ಆದೇಶ ಹೊರಡಿಸಿದೆ. ಈಗ ದಕ್ಷಿಣ ಕನ್ನಡ ಜಿಲ್ಲೆ ನಿಯಂತ್ರಣದಲ್ಲಿದೆ ಎಂದು ಸಿಎಂ ಹೇಳಿದ್ದಾರೆ.

ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆ ವಿಧಾನಸೌಧದ ಬ್ಯಾಂಕ್ವೆಟ್ ಆಯೋಜಿಸಿದ್ದ ಪೊಲೀಸ್ ಸಿಬ್ಬಂದಿಯ ನೂತನ ಪೀಕ್ ಕ್ಯಾಚ್ ವಿತರಣೆ, ಮಾದಕ ದ್ರವ್ಯ ವಿರೋಧಿ ಕಾರ್ಯಪಡೆ ಉದ್ಘಾಟನೆ ಹಾಗೂ ಸನ್ಮಿತ್ರ ಕಾರ್ಯಯೋಜನೆ ಕೈಪಿಡಿಯನ್ನು ಬಿಡುಗಡೆಗೊಳಿಸಿ ಸಿಎಂ ಮಾತನಾಡಿದರು.

# ಭ್ರಷ್ಟಾಚಾರ ಪ್ರಜಾಪ್ರಭುತ್ವದ ಶತ್ರು

## ಜಾಗೃತಿ ಅರಿವು ಸಪ್ತಾಹ ಕಾರ್ಯಕ್ರಮದಲ್ಲಿ ನ್ಯಾ. ವೇಲಾ ಡಿ.ಕೆ ಹೇಳಿಕೆ




**ದಾವಣಗೆರೆ :** ಭ್ರಷ್ಟಾಚಾರ ಪ್ರಜಾಪ್ರಭುತ್ವದ ಶತ್ರು. ಸಂಸ್ಥೆಗಳ ಶಕ್ತಿಯನ್ನು ಕುಗ್ಗಿಸುತ್ತದೆ. ಜನರ ವಿಶ್ವಾಸವನ್ನು ಆಳುಮಾಡುವುದಲ್ಲದೇ, ನ್ಯಾಯದ ತತ್ವವನ್ನ ದುರ್ಬಲಗೊಳಿಸುತ್ತದೆ ಎಂದು ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ವೇಲಾ ಡಿ.ಕೆ ಹೇಳಿದರು.

ಜಿಲ್ಲಾಡಳಿತ, ಕಾನೂನು ಸೇವಾ ಪ್ರಾಧಿಕಾರ ಮತ್ತು ಲೋಕಯುಕ್ತಾ ಘಟಕ ದಾವಣಗೆರೆ ಇವರ ಸಹಯೋಗದಲ್ಲಿ ಮಂಗಳವಾರ ಜಿಲ್ಲಾಡಳಿತ ಕಚೇರಿಯ ತುಂಗಭದ್ರ ಸಭಾಂಗಣಲ್ಲಿ ಜಾಗೃತಿ ಅರಿವು ಸಪ್ತಾಹ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜಾಗೃತಿ ಅರಿವು ಸಪ್ತಾಹ ಕಾರ್ಯಕ್ರಮ ಕೇವಲ ಭ್ರಷ್ಟಾಚಾರ ವಿರೋಧ ಕ್ರಮಗಳ ವಿಷಯವಲ್ಲ. ಅದು ಪ್ರತಿಯೊಬ್ಬ ಅಧಿಕಾರಿಯ ನೈತಿಕ ಬದ್ಧತೆಯ ವಿಷಯ. ಗ್ರಾಮ ಪಂಚಾಯತಿ ಮಟ್ಟದಿಂದ ಆರಂಭವಾದ ಭ್ರಷ್ಟಾಚಾರವೂ ತಹಶೀಲ್ದಾರ್ ಕಚೇರಿ, ಪೊಲೀಸ್ ಇಲಾಖೆ ಹೀಗೆ ವಿವಿಧ ಇಲಾಖೆಗಳ ಕಚೇರಿಗಳಿಂದ ಹಿಡಿದು ಉಪ ಆಯುಕ್ತರ ಕಚೇರಿವರೆಗೂ ತಲುಪಬಹುದು. ಯಾವುದೇ ಒಬ್ಬ ಅಧಿಕಾರಿ ಒಂದು ಸಣ್ಣ ಪ್ರಮಾಣದ ಕರ್ತವ್ಯವನ್ನು ಸರಿಯಾದ ರೀತಿಯಲ್ಲಿ ಮಾಡದಿದ್ದಲ್ಲಿ, ಅಂತಹ ಕೃತ್ಯವು ಜನರ ಮನಸಲ್ಲಿ ಬಹುದೊಡ್ಡ ಪರಿಣಾಮ ಉಂಟು ಮಾಡುವ ಸಾಧ್ಯತೆ ಹೆಚ್ಚಾಗಿರುತ್ತದೆ. ಪ್ರತಿ ನಾಗರೀಕನಿಗೂ ಸತ್ಯ, ನಿಷ್ಠೆ, ಪ್ರಾಮಾಣಿಕತೆಯಿಂದ ವಿಳಂಬ ಮಾಡದೇ, ಅಕ್ರಮವಾದ ಬೇಡಿಕೆಗಳಿಲ್ಲದೇ ಸೇವೆ ಪಡೆಯುವ ಹಕ್ಕಿದೆ. ಆದ್ದರಿಂದ ಅಧಿಕಾರಿಗಳು ತಮ್ಮ ಹಕ್ಕುಗಳನ್ನು ಮಾರಿಕೊಂಡು ಅವರಿಗೆ ತೊಂದರೆಯಾಗದ ರೀತಿಯಲ್ಲಿ ಪ್ರಾಮಾಣಿಕತೆಯಿಂದ ಕೆಲಸ ಮಾಡಬೇಕು ಎಂದರು.

ಸರ್ಕಾರಿ ಕಚೇರಿಗಳಲ್ಲಿ ವಿವಿಧ ರೀತಿಯ ಕಾರಣಗಳಿಂದ ಸಾರ್ವಜನಿಕರಿಗೆ ಸಿಗಬೇಕಾದ ಸೌಲಭ್ಯ, ಕೆಲಸಗಳು ಸಕಾಲದಲ್ಲಿ ದೊರೆ–ಯದೇ ವಿಳಂಬವಾಗುತ್ತಿವೆ. ಅಧಿಕಾರಿಗಳು ಜನರ ವಿಶ್ವಾಸ, ಜನರನ್ನು ರಕ್ಷಿಸುವ ಕಾರ್ಯ ಮಾಡಬೇಕು. ಸಾರ್ವಜನಿಕರು ಕಚೇರಿಗಳಿಗೆ ಕಡತ, ದಾಖಲೆಗಳು ಇನ್ನಿತರೆ ಸೇವೆಗೆ ಅರಸಿ ಬಂದಾಗ ವಿಳಂಬ ಮಾಡದೇ ಜವಾಬ್ದಾರಿಯುತ ವ್ಯಕ್ತಿಗಳಾಗಿ ಸೇವೆ ನೀಡಬೇಕು. ಆಗ ಮಾತ್ರ ಸಮ ಸಮಾಜ ನಿರ್ಮಾಣ ಸಾಧ್ಯ. ಈ ನಿಟ್ಟಿನಲ್ಲಿ ನಾವೆಲ್ಲರೂ ಭ್ರಷ್ಟಾಚಾರ ಮುಕ್ತ ಜಿಲ್ಲೆಯನ್ನಾಗಿಸಲು ಪಣತೊಡೋಣ ಎಂದರು.

ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರವಾಸ್ವಾಮಿ ಮಾತನಾಡಿ, ಯಾವುದೇ ಇಲಾಖೆ ಅಧಿಕಾರಿಗಳು ಅವತ್ತಿನ ಕೆಲಸ ಅವತ್ತೇ ಮುಗಿಸುವ ಪ್ರಯತ್ನ ಮಾಡಬೇಕು. ಅದಕ್ಕೆ ಸರ್ಕಾರದ ಅಧೀನದಲ್ಲಿ ಸೇವೆ ಸಲ್ಲಿಸುವ ಪ್ರತಿಯೊಬ್ಬರೂ ಕಟಿಬದ್ಧರಾಗಿರಬೇಕು. ಇದರಿಂದ ಕೆಲಸಗಳು ತಂತಾನೆ ಪ್ರಗತಿ ಸಾರ್ವಜನಿಕರು ಕಚೇರಿಗಳಿಗೆ ಬಂದಾಗ ಆರಿಕೆಯ ಉತ್ತರ ನೀಡುವ ಮೂಲಕ ಸರ್ವಾಧಿಕಾರಿಗಂತೆ ವರ್ತಿಸಬಾರದು. ಅವರೊಂದಿಗೆ ಸೌಮ್ಯಯುತವಾಗಿ ಸೌಜನ್ಯದಿಂದ ವರ್ತಿಸಬೇಕು. ಇಲ್ಲಿ ಜನಪ್ರತಿನಿಧಿಗಳು, ಸಚಿವರು, ಶಾಸಕರು ಹಾಗೂ ಅಧಿಕಾರಿಗಳು ಹೀಗೆ ಎಲ್ಲರನ್ನೂ ಒಳಗೊಂಡ ಪ್ರಜಾಪ್ರಭುತ್ವವೇ ಆಡಳಿತ. ಎಲ್ಲರೊಂದಿಗೆ ಸಮನ್ವಯತೆಯಿಂದ ಕಾರ್ಯ ನಿರ್ವಹಿಸಿದಲ್ಲಿ ಯಾವುದೇ ತಪ್ಪುಗಳು ಆಗುವುದಿಲ್ಲ. ಈ ನೆಲೆಗಟ್ಟಿನಲ್ಲಿ ಕಾರ್ಯನಿರ್ವಹಿಸಿದಾಗ ಮಾತ್ರ ಕಾರ್ಯಕ್ರಮಕ್ಕೆ ಅರ್ಥ ಸಿಗಲಿದೆ ಎಂದರು.

ಇದೇ ಸಂದರ್ಭದಲ್ಲಿ ಲೋಕಾಯುಕ್ತ ಪೊಲೀಸರು ಅಧೀಕ್ಷಕ ಎಂ.ಎಸ್.ಕೌಲಾಪುರೆ ಪ್ರತಿಜ್ಞಾವಿಧಿ ಬೋಧಿಸಿದರು.

ಸಭೆಯಲ್ಲಿ ಪೊಲೀಸ್ ವರಿಷ್ಠಾಧಿಕಾರಿ ಉಮಪ್ರಶಾಂತ್, ಜಿ.ಪಂ. ಸಿಇಓ ಗಿತ್ತೆ ಮಾಧವ ವಿಠಲ ರಾವ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಲಯ ಮಹಾವೀರ ಮ ಕರೆಣ್ಣವರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಸರ್ಕಾರಿ ನೌಕರರಿಗೆ ಕೇಂದ್ರದಿಂದ ಗುಡ್‌ನ್ಯೂಸ್; 8ನೇ ವೇತನ ಆಯೋಗಕ್ಕೆ ಸಂಪುಟ ಅನುಮೋದನೆ



**ನವದೆಹಲಿ:** ಕೇಂದ್ರ ಸಚಿವ ಸಂಪುಟ ಮಂಗಳವಾರ 8ನೇ ವೇತನ ಉಲ್ಲೇಖಿತ ನಿಯಮಗಳನ್ನು ಅನುಮೋದಿಸಿದೆ, ಇದು ಸುಮಾರು 50 ಲಕ್ಷ ಕೇಂದ್ರ ಸರ್ಕಾರಿ ನೌಕರರ ವೇತನವನ್ನು ಪರಿಷ್ಕರಿಸುತ್ತದೆ. ಸುಪ್ರೀಂ ಕೋರ್ಟ್‌ನ ಮಾಜಿ ನ್ಯಾಯಾಧೀಶೆ ರಂಜನಾ ಪ್ರಕಾಶ್ ದೇಸಾಯಿ ಅವರು ಆಯೋಗದ ಅಧ್ಯಕ್ಷರಾಗಿ ನೇತೃತ್ವ ವಹಿಸಲಿದ್ದಾರೆ. ಎಂಟನೇ ವೇತನ ಸಮಿತಿಯು 18 ತಿಂಗಳೊಳಗೆ ಶಿಫಾರಸುಗಳನ್ನು ಸಲ್ಲಿಸಲಿದ್ದು, ಇದು ಜನವರಿ 1, 2026 ರಿಂದ ಜಾರಿಗೆ ಬರುವ ಸಾಧ್ಯತೆಯಿದೆ ಎಂದು ಮಾಹಿತಿ ಮತ್ತು ಪ್ರಸಾರ ಸಚಿವೆ ಅಶ್ವಿನಿ ವೈಷ್ಣವ್ ಮಂಗಳವಾರ ಸಂಪುಟ ಸಭೆಯಲ್ಲಿ ತಿಳಿಸಿದ್ದಾರೆ.

ಜನವರಿಯಲ್ಲಿ, ಕೇಂದ್ರ ಸರ್ಕಾರಿ ನೌಕರರ ವೇತನ ಮತ್ತು ಸುಮಾರು 69 ಲಕ್ಷ ಪಿಂಚಣಿದಾರರ ಭತ್ಯೆಗಳನ್ನು ಪರಿಷ್ಕರಿಸಲು 8 ನೇ ವೇತನ ಆಯೋಗವನ್ನು ಸ್ಥಾಪಿಸಲು ಸಚಿವ ಸಂಪುಟ ಅನುಮೋದನೆ ನೀಡಿತು. ನ್ಯಾಯಮೂರ್ತಿ ರಂಜನಾ ಪ್ರಕಾಶ್ ದೇಸಾಯಿ ಆಯೋಗದ ನೇತೃತ್ವ ವಹಿಸಿದ್ದರೆ, ಪ್ರಾಧ್ಯಾಪಕ ಪುಲಕ್ ಘೋಷ್ ಸದಸ್ಯರಾಗಿರುತ್ತಾರೆ ಮತ್ತು ಪಂಕಜ್ ಜೈನ್ ಅದರ ಸದಸ್ಯ–ಕಾರ್ಯದರ್ಶಿಯಾಗಿರುತ್ತಾರೆ.

ನಡೆದ ಸಂಪುಟ ಸಭೆಯಲ್ಲಿ ನಿರ್ಧಾರಗಳನ್ನು ಪ್ರಕಟಿಸಿದ ಅಶ್ವಿನಿ ವೈಷ್ಣವ್, ವಿವಿಧ ಸಚಿವಾಲಯಗಳು, ರಾಜ್ಯ ಸರ್ಕಾರಗಳು ಮತ್ತು ಜಂಟಿ ಸಮಾಲೋಚನಾ ಯಂತ್ರದ ಸಿಬ್ಬಂದಿಯೊಂದಿಗೆ ಸಮಾಲೋಚನೆ ನಡೆಸಿದ ನಂತರ ಟಿಒಆರ್ ಅನ್ನು ಅಂತಿಮಗೊಳಿಸಲಾಗಿದೆ ಎಂದು ಹೇಳಿದರು. 8ನೇ ಕೇಂದ್ರ ವೇತನ ಆಯೋಗವನ್ನು ಸ್ಥಾಪಿಸುವ ಕುರಿತು ರಕ್ಷಣಾ ಮತ್ತು ಗೃಹ ಸಚಿವಾಲಯಗಳು, ಸಿಬ್ಬಂದಿ ಮತ್ತು ತರಬೇತಿ ಇಲಾಖೆ ಹಾಗೂ ರಾಜ್ಯಗಳು ಸೇರಿದಂತೆ ಪ್ರಮುಖ ಪಾಲುದಾರರಿಂದ ಸಲಹೆಗಳನ್ನು ಕೋರಿರುವುದಾಗಿ ಸರ್ಕಾರ ಜುಲೈನಲ್ಲಿ ಸಂಸತ್ತಿನಲ್ಲಿ ತಿಳಿಸಿತ್ತು.

# ಕುಷ್ಠರೋಗ ನಿವಾರಣೆ ಕುರಿತು ತಾಲ್ಲೂಕುವಾರು, ನರೇಗಾ ಕಾಮಗಾರಿ ಸ್ಥಳಗಳಲ್ಲಿ ಜಾಗೃತಿ ಕಾರ್ಯಗಾರ ಆಯೋಜಿಸಲು ಸೂಚನೆ : ಜಿಪಂ ಸಿಇಓ



**ದಾವಣಗೆರೆ :** ನಗರ ಹಾಗೂ ಜಿಲ್ಲಾದ್ಯಂತ ತಾಲ್ಲೂಕುವಾರು ಅತೀ ಹೆಚ್ಚು ಜನನಿಬಿಡ ಪ್ರದೇಶಗಳಲ್ಲಿ ಕುಷ್ಠರೋಗ, ಕ್ಷಯ ಹಾಗೂ ಇನ್ನಿತರೆ ಖಾಯಿಲೆಗಳ ಕುರಿತು ಕಾರ್ಯಗಾರ ಆಯೋಜಿಸಬೇಕು. ಈ ಮೂಲಕ ಸಾರ್ವಜನಿಕರಿಗೆ ಹೆಚ್ಚಿನ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾ ಪಂಚಾಯತ್ ಸಿಇಓ ಗಿತ್ತೆ ಮಾಧವ ವಿಠಲ ರಾವ್ ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್‌ನಲ್ಲಿನ ಜಿಲ್ಲಾ ಪಂಚಾಯತ್ ಸಿಇಓ ಕಚೇರಿಯಲ್ಲಿ ಮಂಗಳವಾರ ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಾದ್ಯಂತ ಕಳೆದ 5 ವರ್ಷಗಳಲ್ಲಿ ಕಂಡು ಬಂದಂತಹ ಪ್ರದೇಶಗಳಾದ ನಗರ, ಕೊಳಗೇರಿ, ಗ್ರಾಮೀಣ ಮತ್ತು ಹಿಂದುಳಿದ ಪ್ರದೇಶಗಳಲ್ಲಿ ನವೆಂಬರ್ 03 ರಿಂದ 14 ದಿನಗಳ ಕಾಲ ಕುಷ್ಠರೋಗಿಗಳನ್ನು ಗುರುತಿಸಿ ಪತ್ತೆ ಹಚ್ಚುವ ಸಮೀಕ್ಷಾ ಕಾರ್ಯ ನಡೆಯಲಿದೆ. ಅಧಿಕಾರಿಗಳು ಸಿಬ್ಬಂದಿ ಅಂತಹ ಸೂಕ್ಷ್ಮ ಪ್ರದೇಶಗಳಲ್ಲಿ ಸಂಶಯಾಸ್ಪದ ವ್ಯಕ್ತಿಗಳನ್ನು ಗುರುತಿಸಿ ಸೂಕ್ತ ಚಿಕಿತ್ಸೆ ನೀಡಬೇಕು.

ಈ ನಿಟ್ಟಿನಲ್ಲಿ ಅಧಿಕಾರಿಗಳು ಜಿಲ್ಲೆ ಹಾಗೂ ತಾಲ್ಲೂಕುವಾರು ಸಾರ್ವಜನಿಕರಿಗೆ ಇನ್ನಷ್ಟು ಪರಿಣಾಮಕಾರಿಯಾಗಿ ಕುಷ್ಠರೋಗ, ಕ್ಷಯ ಮತ್ತು ಇನ್ನಿತರೆ ಖಾಯಿಲೆಗಳ ಬಗ್ಗೆ ಜಾಗೃತಿ ಕಾರ್ಯಗಾರ ಆಯೋಜಿಸಬೇಕು. ಅದರಲ್ಲೂ ಅತೀ ಹೆಚ್ಚು ಜನನಿಬಿಡ ಪ್ರದೇಶ ಮತ್ತು ನರೇಗಾ ಕಾಮಗಾರಿ, ಕೆರೆ ಹೂಳೆತ್ತುವ ಸ್ಥಳ ಅಥವಾ ಹೆಚ್ಚಿನ ಕಾರ್ಮಿಕರು ಇರುವ ಸ್ಥಳಗಳನ್ನು ಗುರುತಿಸಿ ಅವರಿರುವಲ್ಲಿಗೆ ತೆರಳಿ ಕಾರ್ಮಿಕರಿಗೆ ಚಿಕಿತ್ಸೆಗೆ ಒಳಪಪಡಿಸಬೇಕು ಎಂದು ತಿಳಿಸಿದರು. ಕಳೆದ ವರ್ಷದಲ್ಲಿ 6802 ಜನ ಸಂಶಯಾಸ್ಪದ ಕುಷ್ಠರೋಗಿಗಳೆಂದು ಗುರುತಿಸಲಾಗಿದೆ. ಈ ಪೈಕಿ ಎಲ್ಲರನ್ನು ಸಮಗ್ರವಾಗಿ ಪರೀಕ್ಷೆಗೆ ಒಳಪಡಿಸಿದಾಗ ದಾವಣಗೆರೆ, ಹೊನ್ನಾಳಿ, ಚನ್ನಗಿರಿ ಹಾಗೂ ಜಗಳೂರು ತಾಲ್ಲೂಕು ವ್ಯಾಪ್ತಿಯಲ್ಲಿ ತಲಾ 2, ಹರಿಹರ ತಾಲ್ಲೂಕಿನಲ್ಲಿ 3 ಪ್ರಕರಣ ಸೇರಿ ಒಟ್ಟು 11 ಪ್ರಕರಣ ದೃಢಪಟ್ಟಿವೆ. ಪ್ರಸಕ್ತ ವರ್ಷದಲ್ಲಿ 56 ಪ್ರಕರಣ ಕಂಡು ಬಂದಿದ್ದು, ಚಿಕಿತ್ಸೆ ನೀಡಲಾಗುತ್ತಿದೆ ಎಂದು ಸಂಬಂದ ಪಟ್ಟ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

**ಕುಷ್ಠರೋಗ ಸಮೀಕ್ಷೆಗೆ 410 ತಂಡ:** ಜಿಲ್ಲಾದ್ಯಂತ ಸಮೀಕ್ಷ ಕಾರ್ಯಕ್ಕೆ ಒಬ್ಬ ಆಶಾ ಕಾರ್ಯಕರ್ತೆ ಮತ್ತು ಒಬ್ಬ ವಾಲೆಂಟರ್ ಒಳಗೊಂಡಂತೆ ಒಟ್ಟು 410 ತಂಡಗಳನ್ನು ರಚಿಸಲಾಗಿದೆ. ಆ ಒಂದು ತಂಡವು ದಿನಕ್ಕೆ ಗ್ರಾಮೀಣ ಭಾಗದಲ್ಲಿ 20 ಕುಟುಂಬ ಹಾಗೂ ನಗರ ಪ್ರದೇಶಗಳಲ್ಲಿ 25 ಕುಟುಂಬಗಳ ಸಮೀಕ್ಷೆ ನಡೆಸಲಿದ್ದಾರೆ. ಸಮೀಕ್ಷಾ ಕಾರ್ಯ ನಡೆಸಿದ ಒಂದು ತಂಡಕ್ಕೆ ರೂ.150 ಅಂದರೆ ತಲಾ ರೂ.75 ನಂತೆ ಗೌರವ ಧನ ನೀಡಲಾಗುತ್ತದೆ. ಸಂಶಯಾಸ್ಪದ ವ್ಯಕ್ತಿಯನ್ನು ಚಿಕಿತ್ಸೆಗೆ ಒಳಪಡಿಸಿದಾಗ ಅವರಿಗೆ ಖಾಯಿಲೆ ದೃಢಪಟ್ಟಲ್ಲಿ ಆಶಾ ಕಾರ್ಯಕರ್ತೆಯರಿಗೆ ಪ್ರಕರಣ ಒಂದಕ್ಕೆ ರೂ.250 ಪ್ರೋತ್ಸಾಹ ಧನ ನೀಡಲಾಗುತ್ತದೆ ಎಂದು ಅಧಿಕಾರಿಯೊಬ್ಬರು ಮಾಹಿತಿ ನೀಡಿದರು. ಈ ವೇಳೆ ಡಿಹೆಚ್‌ಓ ಷಣ್ಮುಖಪ್ಪ, ಆರೋಗ್ಯ ನಿರೀಕ್ಷಣಾಧಿಕಾರಿ ಸಂದೀಪ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

### ಪರಿಶಿಷ್ಟ ಜಾತಿ, ಪಂಗಡದವರ ಕುಂದುಕೊರತೆ ನಿವಾರಣಾ ಸಭೆ

# ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸುವಾಗಿನ ಉತ್ಸಾಹ ತನಿಖೆಯಲ್ಲಿರಲಿ : ಎಸ್ಪಿ ಉಮಾ ಪ್ರಶಾಂತ



**ದಾವಣಗೆರೆ:** ಸಾರ್ವಜನಿಕರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸುವಾಗ ಇರುವ ಆಸಕ್ತಿ ಪ್ರಕರಣದ ತನಿಖಾ ವೇಳೆಯು ಇರಲಿ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ ಹೇಳಿದರು.

ಮಂಗಳವಾರ(ಅ.28) ರಂದು ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ಆಯೋಜಿಸಲಾಗಿದ್ದ ಎಸ್‌ಸಿಪಿ ಟಿಎಸ್‌ಪಿ ಕುಂದು ಕೊರತೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪೊಲೀಸ್ ಇಲಾಖೆಗೆ ಸಂಬಂಧಿಸಿದ ಸಮಸ್ಯೆ ಶೇ.10 ರಷ್ಟು ಇದ್ದರೆ, ಬೇರೆ ಇಲಾಖೆಗೆ ಸಂಬಂಧಿಸಿದ ಸಮಸ್ಯೆ ಶೇ.90 ಇರುತ್ತದೆ. ನಮ್ಮ ಇಲಾಖೆಗೆ ಸಂಬಂಧಪಟ್ಟಿರುವುದನ್ನು ನಿವಾರಿಸಿ ಸಮಸ್ಯೆಗಳನ್ನು ಶೀಘ್ರವಾಗಿ ಪರಿಹರಿಸುತ್ತೇವೆ. ಮೊಬೈಲ್‌ನಲ್ಲಿ ಯಾವುದೇ ಹೊಸ ಅಪ್ ಡೌನ್ ಲೋಡ್ ಮಾಡಿಕೊಳ್ಳಬಾರದು. ನಿಮಗೆ ಏನು ಅವಶ್ಯಕತೆ ಇದೆಯೋ ಅದನ್ನು ಮಾತ್ರ ಜಾಣ್ಮೆಯಿಂದ ಬಳಕೆ ಮಾಡಿಕೊಳ್ಳಬೇಕು. ಮೈಕ್ರೋ ಫೈನಾನ್ಸ್ ನವರು ಜನರಿಗೆ ನೀಡುತ್ತಿರುವ ಕಿರುಕುಳ ಇದ್ದಲ್ಲಿ ಈ ಬಗ್ಗೆ ಠಾಣೆಯಲ್ಲಿ ಪ್ರಕರಣ ದಾಖಲಿಸಬಹುದು. ಠಾಣೆಗೆ ಬಂದು ಪ್ರಕರಣ ದಾಖಲಿಸಬೇಕಾಗಿಲ್ಲ, ಮನೆ ಮನೆಗೆ ಪೊಲೀಸ್‌ನವರು ವೀಕ್ಷಣೆ ಬಂದಾಗ ಅಲ್ಲೇ ಪ್ರಕರಣ ದಾಖಲಿಸಬಹುದು. ಹಾಗೂ 112 ಕರೆ ಮಾಡಬಹುದು. ಈ ಕುರಿತು ಕಾನೂನು ಅರಿವು ಕಾರ್ಯಕ್ರಮವನ್ನು ಆಯೋಜಿಸಲಾಗುವುದು ಎಂದರು.

ದಲಿತ ಸಮಾಜದ ಮುಖಂಡರ ಕುಂದು ಕೊರತೆ: ಕಡ್ಲೆಗೊಂದಿ ಗ್ರಾಮಕ್ಕೆ ಶೀಘ್ರವೇ ಬಸ್ ವ್ಯವಸ್ಥೆ ಮಾಡುವಂತೆ ಮನವಿ ಮಾಡಿದರು. ಮನೆ ಬಿದ್ದು, ಹೋಗಿದ್ದು ಅದನ್ನ ಕೂಡಲೇ ಪುನರ್ ನಿರ್ಮಾಣ ಮಾಡಬೇಕೆಂದರು.

ಬೂದಾಳ್ ರೋಡ್ ನಿಂದ ಬರುವ ಕೂಲಿ ಕಾರ್ಮಿಕರಿಗೆ ಬಸ್ ವ್ಯವಸ್ಥೆ ಇರುವುದಿಲ್ಲ. ಹಾಗೂ ಬೋರ್ಡ್ ಬರೆಸುವಂತೆ ಮನವಿ ಮಾಡಿದರು. ಶಾದಿ ಮಹಲ್ ರೋಡ್ ನಲ್ಲಿ ನಾಯಿಗಳ ಹಾವಳಿ ತುಂಬಾ ಹೆಚ್ಚಾಗಿದ್ದು ಅದನ್ನು ತಪ್ಪಿಸಬೇಕೆಂದರು.


## ಲಾಡ್ಜ್‌ನಲ್ಲಿ ಪ್ರೇಯಸಿ ಜೊತೆ ಸರಸವಾಡುತ್ತಿದ್ದಾಗ ರೆಡ್‌ಹ್ಯಾಂಡ್ ಆಗಿ ಪತ್ನಿ ಕೈಗೆ ಸಿಕ್ಕಿಬಿದ್ದ ಪತಿ



**ಬೆಳಗಾವಿ:** ಲಾಡ್ಜ್‌ನಲ್ಲಿ ಪ್ರೇಯಸಿ ಜೊತೆ ಸರಸವಾಡುತ್ತಿದ್ದಾಗ ಪತಿಯೊಬ್ಬ ಪತ್ನಿ ಕೈಗೆ ರೆಡ್‌ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾನೆ. ಬೆಳಗಾವಿ ಜಿಲ್ಲೆಯ ಚಿಕ್ಕೋಡಿಯಲ್ಲಿ ಘಟನೆ ನಡೆದಿದ್ದು ಪತಿಯನ್ನು ಕಂಡ ಪತ್ನಿ ಆತನನ್ನು ದರದರನೆ ರಸ್ತೆಗೆ ಎಳೆದು ತಂದು ಚಪ್ಪಲಿಯಿಂದ ಸಾರ್ವಜನಿಕವಾಗಿ ಸ್ಥಳದಲ್ಲೇ ಥಳಿಸಿದ್ದಾಳೆ.

ಚಿಕ್ಕೋಡಿ ಪಟ್ಟಣದ ಬಸ್ ನಿಲ್ದಾಣದ ಎದುರಿನ ಲಾಡ್ಜ್‌ನಲ್ಲಿ ಚಿಕ್ಕೋಡಿ ನಿವಾಸಿ ಅವಿನಾಶ್ ಭೋಸಲೆ ಎಂಬಾತ ರೂಂ ಬುಕ್ ಮಾಡಿ ಪ್ರೇಯಸಿ ಜೊತೆ ತಂಗಿದ್ದನು. ಈ ವಿಷಯ ಗೊತ್ತಾದ ಕೂಡಲೇ ಪತ್ನಿ ಲಾಡ್ಜ್ ಗೆ ಬಂದಿದ್ದು ಪತಿಯನ್ನು ನೋಡಿ ಆಕ್ರೋಶಗೊಂಡಿದ್ದಾಳೆ. ಕೂಡಲೇ ಆತನನ್ನು ಅಲ್ಲಿಂದ ಹೊರಗೆ ಎಳೆದೊಯ್ದು ಚಪ್ಪಲಿಯಿಂದ ಥಳಿಸಿದ್ದಾಳೆ.

# ಮುಂದುವರಿದ ತಂತ್ರಜ್ಞಾನ ಯುಗದಲ್ಲಿ ಯಾರೂ ಕರೆದು ಅವಕಾಶ ಕೊಡಲ್ಲ, ನಾವೇ ಸೃಷ್ಟಿಸಿಕೊಳ್ಳಬೇಕು: ಜಿ. ಬಿ. ವಿನಯ್ ಕುಮಾರ್



**ದಾವಣಗೆರೆ :** ಭಾರತ ದೇಶದಲ್ಲಿ ಯಾರೂ ಕರೆದು ನಮಗೆ ಅವಕಾಶ ಕೊಡುವುದಿಲ್ಲ. ಜ್ಞಾನ ಬೆಳೆಸಿಕೊಳ್ಳುವ ಮೂಲಕ ನಾವೇ ಅವಕಾಶಗಳನ್ನು ಸೃಷ್ಟಿಸಿಕೊಂಡಾಗ ಜೀವನದಲ್ಲಿ ಯಶಸ್ಸು ಸಾಧ್ಯವಾಗುತ್ತದೆ ಎಂದು ಇನ್ ಸೈಟ್ಸ್ ಸಂಸ್ಥೆ ಸಂಸ್ಥಾಪಕ ನಿರ್ದೇಶಕ ಜಿ. ಬಿ. ವಿನಯ್ ಕುಮಾರ್ ಅವರು ಕರೆ ನೀಡಿ–ದರು.

ನಗರದ ಶ್ರೀಶೈಲ ಶಿಕ್ಷಣ ಟ್ರಸ್ಟ್, ಜಿಎಂ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಯಲ್ಲಿನ ಜಿ.ಎಂ. ಅಲ್ಲಮ ಸಭಾಂಗಣದಲ್ಲಿ ಏರ್ಪಡಿಸಿದ್ದ ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆ ವಿಭಾಗ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ಅವರು, ಎಲ್ಲವನ್ನೂ ವಿಶ್ವವಿದ್ಯಾಲಯ, ಕಾಲೇಜುಗಳಿಂದ ಮಾತ್ರ ಹೇಳಿಕೊಡಲು ಸಾಧ್ಯವಿಲ್ಲ. ತಂತ್ರಜ್ಞಾನದಲ್ಲಿ ಉನ್ನತ ಸಾಧನೆ ಮಾಡಬೇಕಾದರೆ ಜ್ಞಾನ ಅತ್ಯವಶ್ಯಕ ಎಂದು ಪ್ರತಿಪಾದಿಸಿದರು.

ಪ್ರಸ್ತುತ ದೇಶ ವಿದೇಶಗಳಲ್ಲಿ ಕೃತಕ ಬುದ್ಧಿಮತ್ತೆಯಿಂದ ಸಾಕಷ್ಟು ಅವಕಾಶಗಳು ಸಿಗುತ್ತವೆ. ಆದರೆ, ಅದೇ ರೀತಿಯಲ್ಲಿ ಉದ್ಯೋಗ ಸೇರಿದಂತೆ ಇತರೆ ಕ್ಷೇತ್ರಗಳಲ್ಲಿ ಗಂಭೀರ ಪರಿಣಾಮ ಬೀರುತ್ತದೆ. ಇನ್ನು 30ರಿಂದ 40 ವರ್ಷಗಳಲ್ಲಿ ಏನೆಲ್ಲಾ ಬದಲಾವಣೆ ಆಗಬಹುದು ಎಂಬುದನ್ನು ಈಗಿನಿಂದಲೇ ಊಹಿಸಲು ಅಸಾಧ್ಯ. ಹಾಗಾಗಿ, ಭಾಷಾ ಪ್ರೌಢಿಮ್ಯ, ಕೌಶಲ್ಯ, ಪುಸ್ತಕ, ಪಠ್ಯೇತರ ಚಟುವಟಿಕೆ ಜ್ಞಾನ, ದೇಶ ಮತ್ತು ವಿದೇಶಗಳಲ್ಲಿನ ಆಗು ಹೋಗುಗಳ ಬಗ್ಗೆ ಪ್ರತಿನಿತ್ಯವೂ ತಿಳಿದುಕೊಳ್ಳುತ್ತಿರಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಕೃಷಿ, ಕೈಗಾರಿಕೆ, ಶೈಕ್ಷಣಿಕ ಕ್ಷೇತ್ರಗಳ ಮೇಲೆ ಕೃತಕ ಬುದ್ಧಿಮತ್ತೆ ಭಾರೀ ಪರಿಣಾಮ ಬೀರಲಿದೆ. ತಂತ್ರಜ್ಞಾನ ಬೆಳೆದಂತೆ ಕೌತುಕವೂ ಹೆಚ್ಚಾಗಬೇಕು. ವಿದ್ಯಾರ್ಥಿಗಳು ತಂತ್ರಜ್ಞಾನದ ಬಗ್ಗೆ ಅರಿಯುವ, ಮಾಹಿತಿ ಪಡೆಯುವ ಅವಶ್ಯಕತೆ ತುಂಬಾನೇ ಇದೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಸಜ್ಜಾಗಬೇಕು ಎಂದು ಹೇಳಿದರು.

ದಾವಣಗೆರೆಯಿಂದ 8 ಕಿಲೋಮೀಟರ್ ದೂರದಲ್ಲಿರುವ ಕಕ್ಕರಗೊಳ್ಳ ಗ್ರಾಮದಲ್ಲಿ ನಾನು ಹುಟ್ಟಿ ಬೆಳೆದಿದ್ದು. ನನ್ನ ತಂದೆ ಸಿರಿಗೆರೆ ಮಠದಲ್ಲಿ ಓದಿದ್ದರು. ಅಲ್ಲಿಂದಲೇ ಸಂಸ್ಕಾರ, ಪುಸ್ತಕ ಹವ್ಯಾಸ ಓದುವ ಬೆಳೆಸಿಕೊಂಡಿದ್ದರು. ಇದನ್ನು ನಮಗೂ ಚಿಕ್ಕಂದಿನಿಂದಲೇ ರೂಢಿಸಿಕೊಳ್ಳುವಂತೆ ಪ್ರೇರೇಪಿಸಿದವರು. ಚಿಕ್ಕವರಿದ್ದಾಗ ಪುಟ್ಟದಾಗಿ ಮನೆಯಲ್ಲಿಟ್ಟಿದ್ದ ಪುಸ್ತಕಗಳನ್ನು ಇಲಿಗಳು ತಿಂದು ಹಾಕುತ್ತಿದ್ದವು. ತಂದೆ ಮನೆಗೆ ಬಂದು ನೋಡಿದಾಗ ಪುಸ್ತಕಗಳು ಹಾಳಾಗಿರುತ್ತಿದ್ದವು. ಆಗ ನಮಗೆ ಪುಸ್ತಕಗಳ ಮಹತ್ವ ಮತ್ತು ಜ್ಞಾನದ ಬಗ್ಗೆ ಅರಿವು ಮೂಡಿಸಿದರು. ಇದರಿಂದ ನಾನೂ ಪುಸ್ತಕ ಓದುವ ಹವ್ಯಾಸ ರೂಢಿಸಿಕೊಂಡೆ. ಇದ–ರಿಂದ ಜ್ಞಾನ ಮತ್ತು ವ್ಯಕ್ತಿತ್ವ ಬೆಳೆಸಿಕೊಳ್ಳಲು ಸಾಧ್ಯವಾಯಿತು. ಸ್ವಲ್ಪ ಮಟ್ಟಿಗೆ ಸಾಧನೆ ಮಾಡಿದ್ದೇನೆಂದರೆ ಅದಕ್ಕೆ ಕಾರಣ ಪುಸ್ತಕ, ಕಾದಂಬರಿ, ಮಹನೀಯರ ಸಾಧನೆ ಬಗ್ಗೆ ಓದುವ ಮೂಲಕ ತಿಳಿದುಕೊಂಡಿದ್ದರಿಂದ. ಹಾಗಾಗಿ, ಎಲ್ಲರೂ ಪುಸ್ತಕ ಓದುವ, ನಿರ್ಭೀತಿಯಿಂದ ಮುನ್ನಡೆಯುವ, ಸಾಧಿಸುತ್ತೇವೆಂಬ ಛಲ ಬೆಳೆಸಿಕೊಳ್ಳಬೇಕು. ಆಗ ಮಾತ್ರ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದು ಜಿ.ಬಿ.ವಿನಯ್ ಕುಮಾರ್ ಅವರು ಅಭಿಪ್ರಾಯಪಟ್ಟರು.

ಐದನೇ ತರಗತಿಯಲ್ಲಿ ನಾನು ಪರೀಕ್ಷೆ ಬರೆದು ಉತ್ತೀರ್ಣನಾಗಿ ಜವಾಹರ ನವೋದಯ ಶಾಲೆಗೆ ಸೇರಿಕೊಂಡೆ. ಹಳ್ಳಿಯಿಂದ ಬಂದರೂ ನಾನು ಅಲ್ಲಿಗೆ ಹೋದಾಗ ಗ್ರಂಥಾಲಯದಲ್ಲಿನ ಎಲ್ಲಾ ಪುಸ್ತಕಗಳನ್ನು ಓದಬೇಕು. ಎಲ್ಲಾ ಕ್ರೀಡೆಗಳಲ್ಲಿಯೂ ಪಾಲ್ಗೊಳ್ಳಬೇಕು ಎಂಬ ನಿರ್ಧಾರ ಮಾಡಿದೆ. ಅದರಂತೆ ದಿನಚರಿ ರೂಢಿಸಿಕೊಂಡೆ. ಇದು ತುಂಬಾನೇ ಸಹಕಾರಿಯಾಯಿತು. ಮೆಡಿಕಲ್, ಐಎಎಸ್ ಪಾಸ್ ಮಾಡಬೇಕೆಂಬ ಕನಸು ಕಂಡಿ–ದ್ದೆ. ಬಡತನ ಇದ್ದ ಕಾರಣ ಸಾಧ್ಯವಾಗಲಿಲ್ಲ. ಹಾಗೆಂದು ಸುಮ್ಮನೆ ಕೂರಲಿಲ್ಲ. ಇನ್ ಸೈಟ್ಸ್ ಎಂಬ ಸಂಸ್ಥೆ ಸ್ಥಾಪಿಸಿ ಸಾವಿರಾರು ವಿದ್ಯಾರ್ಥಿಗಳು ಇಂದು ಐಎಎಸ್, ಐಪಿಎಸ್ ಅಧಿಕಾರಿಗಳಾಗುವಂತೆ ಮಾಡಿದ್ದೇನೆ. ಇದೆಲ್ಲಾ ಸಾಧ್ಯವಾಗಿದ್ದು ಪುಸ್ತಕದಿಂದ ಬಂದ ಜ್ಞಾನದಿಂದ ಎಂದು ತಿಳಿಸಿದರು.

ಜಿಎಂಐಟಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಸಂಜಯ್ ಪಾಂಡೆ ಎಂ.ಬಿ. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆ ವಿಭಾಗದ ಅಧ್ಯಕ್ಷೆ, ಸಹಾಯಕ ಪ್ರಾಧ್ಯಾಪಕಿ ಡಾ. ಆಶಾ, ಎಂಎಲ್ ವಿಭಾಗದ ನಿರ್ದೇಶಕರು ಮತ್ತು ಸಹಾಯಕ ಪ್ರಾಧ್ಯಾಪಕರಾದ ಕೀರ್ತಿ ಪ್ರಸಾದ್, ಫೋರಂ ಸಂಯೋಜಕರು ಮತ್ತು ಸಹಾಯಕ ಪ್ರಾಧ್ಯಾಪಕಿ ಮುಕ್ತಾ ಪೂಜಾರ್, ಕಾಲೇಜಿನ ಬೋಧಕ, ಬೋಧಕೇತರ ವರ್ಗದವರು, ವಿದ್ಯಾರ್ಥಿಗಳು ಹಾಜರಿದ್ದರು.

## ರಾಶಿ ಭವಿಷ್ಯ

### ಮೇಷ ರಾಶಿ

ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ಈ ರಾಶಿಚಕ್ರಕ್ಕೆ ಸಂಬಂಧಿಸಿದ ಕೆಲವರು ಇಂದು ಭೂಮಿಗೆ ಸಂಬಂಧಿಸಿದ ವಿಷಯದ ಬಗ್ಗೆ ಹಣವನ್ನು ಖರ್ಚುಮಾಡಬಹುದು ಒಂದು ವೈವಾಹಿಕ ಸಂಬಂಧವನ್ನು ಹೊಂದಲು ಒಳ್ಳೆಯ ಸಮಯ. ನಿಮ್ಮ ಪ್ರೀತಿಪಾತ್ರರೊಡನೆ ಪ್ರಯಾಣಕ್ಕೆ ಹೋಗುವ ಮೂಲಕ ನಿಮ್ಮ ಅಮೂಲ್ಯ ಕ್ಷಣಗಳನ್ನು ಪುನಃ ಜೀವಿಸಿ.

### ವೃಷಭ ರಾಶಿ

ಮಾನಸಿಕ ಶಾಂತಿಗಾಗಿ ನಿಮ್ಮ ಒತ್ತಡವನ್ನು ಪರಿಹರಿಸಿ. ನಿಮ್ಮ ಸಹೋದರ-ಸಹೋದರಿಯರಲ್ಲಿ ಒಬ್ಬರು ಇಂದು ನಿಮ್ಮಿಂದ ಹಣವನ್ನು ಎರವಲು ಪಡೆಯಬಹುದು, ನೀವು ಅವರಿಗೆ ಹಣವನ್ನು ಸಾಲವಾಗಿ ಕೊಡುತ್ತೀರಿ ಆದರೆ ಇದರಿಂದ ನಿಮ್ಮ ಆರ್ಥಿಕ ಪರಿಸ್ಥಿತಿ ಹದಗೆಡಬಹುದು. ಮಕ್ಕಳು ನಿಮಗೆ ಮನೆಕೆಲಸಗಳನ್ನು ಮಾಡಲು ಸಹಾಯ ಮಾಡುತ್ತಾರೆ.

### ಮಿಥುನ ರಾಶಿ

ಸಂತಸದ ಪ್ರಯಾಣ ಮತ್ತು ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಆರಾಮ ಮತ್ತು ಸಂತೋಷ ತರುತ್ತದೆ. ನಿಮ್ಮ ಪೋಷಕರು ನೀಡಿದ ಬೆಂಬಲದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾದಂತೆನಿಸುತ್ತವೆ. ನಿಮಗೆ ತಕ್ಷಣ ಅವಶ್ಯಕತೆಯಿಲ್ಲದ ವಸ್ತುಗಳ ಮೇಲೆ ಹಣ ವೆಚ್ಚ ಮಾಡಿದಲ್ಲಿ ನೀವು ನಿಮ್ಮ ಸಂಗಾತಿಯನ್ನು ಅಸಮಾಧಾನಪಡಿಸುತ್ತೀರಿ. ಮೊಂಬತ್ತಿ ಬೆಳಕಿನಲ್ಲಿ ಪ್ರೀತಿಪಾತ್ರರ ಜೊತೆ ಆಹಾರ ಹಂಚಿಕೊಳ್ಳುವುದು.

### ಕರ್ಕ ರಾಶಿ

ತೊಂದರೆಯಲ್ಲಿರುವ ಯಾರಿಗಾದರೂ ಸಹಾಯ ಮಾಡಲು ನಿಮ್ಮ ಚೈತನ್ಯವನ್ನು ಬಳಸಿ. ಲೋಕೋಪಕಾರಕ್ಕಾಗಲ್ಲದಿದ್ದಲ್ಲಿ ಈ ನಶ್ವರ ದೇಹದ ಉಪಯೋಗವಾದರೂ ಏನು. ಇಂದು ನೀವು ಸುಲಭವಾಗಿ ಬಂಡವಾಳ ಪಡೆಯಬಹುದು ಬಾಕಿಯಿರುವ ಸಾಲಗಳನ್ನು ಸಂಗ್ರಹಿಸಬಹುದು ಅಥವಾ ಹೊಸ ಯೋಜನೆಗಳಿಗೆ ಕೆಲಸ ಮಾಡಲು ಹಣ ಕೇಳಬಹುದು. ಕುಟುಂಬದ ರಹಸ್ಯ ಸುದ್ದಿ ನಿಮಗೆ ಅಚ್ಚರಿ ನೀಡಬಹುದು. ಪ್ರೀತಿಯ ಸಂಕಟವನ್ನು ಎದುರಿಸುವ ಸಾಧ್ಯತೆಗಳು ಇಂದು ಹೆಚ್ಚಿವೆ.

### ಸಿಂಹ ರಾಶಿ

ಸ್ವಲ್ಪ ಮನರಂಜನೆಗಾಗಿ ನಿಮ್ಮ ಕಚೇರಿಯಿಂದ ಬೇಗನೇ ಹೊರಬರಲು ಪ್ರಯತ್ನಿಸಿ. ನಿಮಗೆ ತಿಳಿದ ಜನರ ಮೂಲಕ ಆದಾಯದ ಹೊಸ ಮೂಲಗಳು ಕಂಡುಬರುತ್ತವೆ. ಅನಿರೀಕ್ಷಿತ ಜವಾಬ್ದಾರಿಗಳು ನಿಮ್ಮ ದಿನದ ಯೋಜನೆಗಳಿಗೆ ಅಡ್ಡಿಪಡಿಸುತ್ತವೆ ನೀವು ಇತರರಿಗೆ ಹೆಚ್ಚು ಮತ್ತು ನಿಮಗಾಗಿ ಕಡಿಮೆ ಮಾಡಿಕೊಳ್ಳುತ್ತೀರಿ. ನಾಳೆ ಬಹಳ ತಡವಾಗುವುದರಿಂದ ನೀವು ನಿಮ್ಮ ಪ್ರಿಯತಮೆಗೆ ನಿಮ್ಮ ಸಂದೇಶವನ್ನು ಕೂಡಲೇ ತಿಳಿಸಬೇಕು.

### ಕನ್ಯಾ ರಾಶಿ

ದೈಹಿಕ ಲಾಭಕ್ಕಾಗಿ ವಿಶೇಷವಾಗಿ ಮಾನಸಿಕ ದೃಢತೆಗಾಗಿ ಧ್ಯಾನ ಮತ್ತು ಯೋಗ ಪ್ರಾರಂಭಿಸಿ. ನೀವು ಪ್ರಯಾಣ ಮಾಡುವ ಮತ್ತು ಹಣ ಖರ್ಚು ಮಾಡುವ ಮನಸ್ಥಿತಿಯಲ್ಲಿರುತ್ತೀರಿ. ಅದರೆ ಹಾಗೆ ಮಾಡಿದಲ್ಲಿ ನೀವು ವಿಷಾದಿಸುತ್ತೀರಿ. ನೀವು ಗುಂಪಿನ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡರೆ ನೀವು ಹೊಸ ಸ್ನೇಹಿತರನ್ನು ಸಂಪಾದಿಸುತ್ತೀರಿ. ಪ್ರೀತಿಯ ವ್ಯವಹಾರಗಳಲ್ಲಿ ಬಲವಂತ ಮಾಡುವುದನ್ನು ತಪ್ಪಿಸಿ.

### ತುಲಾ ರಾಶಿ

ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ನಿಮ್ಮ ಸ್ನೇಹಿತರ ಸಹಾಯದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾಗುತ್ತವೆ. ಮನೆಯಲ್ಲಿ ಯಾವುದೇ ಬದಲಾವಣೆ ಮಾಡುವ ಮುನ್ನ ನಿಮ್ಮ ಹಿರಿಯರ ಸಲಹೆ ತೆಗೆದುಕೊಳ್ಳಿ ಇಲ್ಲವಾದರೆ ಅದು ಅವರಿಗೆ ಕೋಪ ಮತ್ತು ಅಸಮಾಧಾನವನ್ನು ತರಬಹುದು. ನೀವು ಯಾವಾಗಲೂ ಪರಸ್ಪರರ ಪ್ರೀತಿಯಲ್ಲಿದ್ದೀರೆಂದು ಅನಿಸುವುದರಿಂದ ಭೌತಿಕ ಅಸ್ತಿತ್ವಕ್ಕೆ ಯಾವುದೇ ಮಹತ್ವವಿರುವುದಿಲ್ಲ.

### ವೃಶ್ಚಿಕ ರಾಶಿ

ಇಂದು ನೀವು ಆರಾಮವಾಗಿರಬೇಕು ಹಾಗೂ ನಿಕಟ ಸ್ನೇಹಿತರು ಮತ್ತು ಕುಟುಂಬದ ಎಲ್ಲಾ ಸದಸ್ಯರನ್ನು ಸಂತೋಷವಾಗಿರಿಸಲು ಪ್ರಯತ್ನಿಸಬೇಕು. ಹೂಡಿಕೆ ಮಾಡುವುದು ಅನೇಕ ಬಾರಿ ನಿಮಗೆ ಪ್ರಯೋಜನಕಾರಿಯೆಂದು ಸಾಬೀತುಪಡಿಸುತ್ತದೆ, ಇಂದು ನಿಮಗೆ ಈ ಮಾತು ಅರ್ಥವಾಗಬಹುದು ಏಕೆಂದರೆ ಯಾವುದೇ ಹಳೆಯ ಹೂಡಿಕೆಯಿಂದ ನೀವು ಪ್ರಯೋಜನವನ್ನು ಪಡೆಯಬಹುದು ಅತಿಥಿಗಳು ನಿಮ್ಮ ಮನೆಯನ್ನು ಒಂದು ಆಹ್ಲಾದಕರ ಮತ್ತು ಅದ್ಭುತ ಸಂಜೆಗಾಗಿ ಬಳಸಿಕೊಳ್ಳುತ್ತಾರೆ.

### ಧನು ರಾಶಿ

ಸಂತಸದ ಪ್ರಯಾಣ ಮತ್ತು ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಆರಾಮ ಮತ್ತು ಸಂತೋಷ ತರುತ್ತದೆ. ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು. ಸಮಸ್ಯೆಗಳನ್ನು ದೂರ ತಳ್ಳಿ ಹಾಗೂ ಮನೆಯಲ್ಲಿ ಸ್ನೇಹಿತರ ನಡುವೆಯೆರಡೂ ನಿಮ್ಮ ಸ್ಥಾನವನ್ನು ಸುಧಾರಿಸುವಲ್ಲಿ ಮನಸ್ಸು ನೀಡಿ.

### ಮಕರ ರಾಶಿ

ನೀವು ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ಇಂದು ನೀವು ಸ್ನೇಹಿತರೊಂದಿಗೆ ಪಾರ್ಟಿಯಲ್ಲಿ ಸಾಕಷ್ಟು ಹಣವನ್ನು ಖರ್ಚು ಮಾಡಬಹುದು ಆದರೆ ಇದರ ಹೊರತಾಗಿಯೂ ನಿಮ್ಮ ಆರ್ಥಿಕ ಭಾಗವು ಬಲವಾಗಿರುತ್ತದೆ ಶಿಶುವಿನ ಆರೋಗ್ಯ ಸ್ವಲ್ಪ ಚಿಂತೆಗೆ ಕಾರಣವಾಗಬಹುದು.

### ಕುಂಭ ರಾಶಿ

ಮನೋಬಲದ ನಿಮ್ಮ ಕೊರತೆ ನಿಮ್ಮನ್ನು ಭಾವನಾತ್ಮಕ ಮತ್ತು ಮಾನಸಿಕ ವರ್ತನೆಯ ಬಲಿಪಶುವಾಗಿ ಮಾಡಬಹುದು. ಯಾವುದೇ ಸಮಯದಲ್ಲಿ ಹಣದ ಅಗತ್ಯವಿರುತ್ತದೆ ಆದ್ದರಿಂದ ಇಂದು ಸಾಧ್ಯವಾದಷ್ಟು ನಿಮ್ಮ ಹಣವನ್ನು ಸಂಗ್ರಹಿಸುವ ಬಗ್ಗೆ ಆಲೋಚಿಸಿ. ಈ ಅವಧಿ ನಿಮ್ಮ ಹೊಸ ಯೋಜನೆಗಳು ಹಾಗೂ ಆಲೋಚನೆಗಳ ಬಗ್ಗೆ ನಿಮ್ಮ ಪೋಷಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲು ಒಳ್ಳೆಯದಾಗಿದೆ.

### ಮೀನ ರಾಶಿ

ಕೆಲವು ಕುಟುಂಬದ ಸದಸ್ಯರು ತಮ್ಮ ಅಸೂಯೆಯ ವರ್ತನೆಯಿಂದ ನಿಮಗೆ ಕಿರಿಕಿರಿ ಮಾಡಬಹುದು. ಆದರೆ ತಾಳ್ಮೆ ಕಳೆದುಕೊಳ್ಳುವುದು ಬೇಡ. ಇಲ್ಲದಿದ್ದರೆ ಪರಿಸ್ಥಿತಿ ನಿಯಂತ್ರಣ ಮೀರಬಹುದು. ಗುಣಪಡಿಸಲಾರದ್ದನ್ನು ತಡೆದುಕೊಳ್ಳಬೇಕು ಎಂದು ನೆನಪಿಡಿ. ರಾತ್ರಿಯ ವೇಳೆಯಲ್ಲಿ ಇಂದು ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ ಏಕೆಂದರೆ ನಿಮ್ಮ ಮೂಲಕ ಕೊಟ್ಟಿರುವ ಹಣ ಇಂದು ನಿಮಗೆ ಮರಳಿ ಸಿಗಬಹುದು.

# ಶಾಂತಿ, ಸೌಹಾರ್ದ ಸಭೆ ನಡೆಸಲು ಸೂಚನೆ



**ಹಾಸನ :** ಗ್ರಾಮಗಳಲ್ಲಿ ಶಾಂತಿ ಮತ್ತು ಸೌಹಾರ್ದಸಭೆ ನಡೆಸಲುನಿಗದಿತ ವೇಳಾಪಟ್ಟಿ ಸಿದ್ಧಪಡಿಸುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಅವರುಸಮಾಜಕಲ್ಯಾಣ ಇಲಾಖೆ ಉಪ ನಿರ್ದೇಶಕರಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು ಅನುಸೂಚಿತ ಜಾತಿ ಮತ್ತುಅನುಸೂಚಿತ ಪಂಗಡಗಳ (ದೌರ್ಜನ್ಯ ನಿಯಂತ್ರಣ) ನಿಯಮಗಳಡಿ ನಡೆದಜಿಲ್ಲಾ ಮಟ್ಟದಜಾಗೃತಿ ಮತ್ತುಉಸ್ತುವಾರಿ ಸಮಿತಿ ತ್ರೈಮಾಸಿಕ ಸಭೆಯಲ್ಲಿ ಭಾಗವಹಿಸಿ ಮಾತನಾಡಿದಅವರು ವಿವಿಧ ಇಲಾಖೆಗಳುಜಂಟಿಯಾಗಿಸಭೆ ನಡೆಸುವುದರಿಂದಸ್ಥಳೀಯ ಸಮಸ್ಯೆ ಪರಿಹಾರಕ್ಕೆ ಅನುಕೂಲವಾಗಲಿದೆಎಂದು ತಿಳಿಸಿದರು.

ಅಪರಜಿಲ್ಲಾಧಿಕಾರಿ ಮಂಜುನಾಥ್ಅವರು ಮಾತನಾಡಿಕಾಡಾಂಚಿನಲ್ಲಿ ವಾಸವಿರುವ ಹಲಸರು, ಮಲೆರು, ಮಲ್ಯೆಕುಡಿಜನಾಂಗದವರುಅರಣ್ಯ ಪ್ರದೇಶದಲ್ಲಿಕಿರುಉತ್ಪನ್ನ ಸಂಗ್ರಹಿಸಲು ಅವಕಾಶ ಕಲ್ಪಿಸಲುಅರಣ್ಯ ಇಲಾಖೆ ಅಧಿಕಾರಿಗಳು ಕ್ರಮವಹಿಸುವಂತೆ ತಿಳಿಸಿದರು.


ಶೆಟ್ಟಿಹಳ್ಳಿ ರಸ್ತೆ ಬದಿಗಳಲ್ಲಿ ಹಳೆಯ ಮರಗಳನ್ನು ತೆರವುಗೊಳಿಸಲು ಕ್ರಮಕೈಗೊಳ್ಳುವಂತೆ ಅರಣ್ಯಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು. ಅಕ್ರಮವಾಗಿ ದಿನಸಿ ಅಂಗಡಿಗಳಲ್ಲಿಯೂ ಮದ್ಯ ಮಾರಾಟ ಮಾಡುವುದುಹಾಗೂ ಮದ್ಯದ ಅಂಗಡಿಗಳನ್ನು ನಿಗಧಿತ ಸಮಯಕ್ಕಿಂತ ಮೊದಲುತೆರೆದು ಮಾರಾಟಮಾಡುವುದುಕಂಡು ಬರುತ್ತಿದೆಎಂದು ಸಮಿತಿಯ ಸದಸ್ಯರು ಸಭೆಯ ಗಮನಕ್ಕೆ ತಂದ ಹಿನ್ನೆಲೆಯಲ್ಲಿಅಪರಜಿಲ್ಲಾಧಿಕಾರಿ ಅವರುಕ್ರಮ ಕೈಗೊಳ್ಳುವಂತೆ ಅಬಕಾರಿಇಲಾಖೆಯ ಅಧಿಕಾರಿಗಳಿಗೆಸೂಚಿಸಿದರು.

ಸಣ್ಣ ನೀರಾವರಿಇಲಾಖೆಯಿಂದ ಈಗಾಗಲೇ ಕೊರೆದಿರುವಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕಕಲ್ಪಿಸುವಂತೆ, ಈಗಾಗಲೇ ಭೂ ಮಂಜೂರಾಗಿರುವುದಕ್ಕೆಖಾತೆ ಮಾಡಿಕೊಡುವುದು, ಪೌರಕಾರ್ಮಿಕರಿಗೆ ಮನೆ ನಿರ್ಮಿಸಿಕೊಡುವುದು, ಸಿಟಿ ಬಸ್‌ಸ್ಟಾಂಡ್ ಬಳಿ ನಗರಸಭೆಯಿಂದ ನಿರ್ಮಾಣ ಮಾಡಿರುವಅಂಗಡಿ ಮಳಿಗೆಗಳಲ್ಲಿ ಪರಿಶಿಷ್ಟ ಜಾತಿಗೆಮೀಸಲಿಡುವಂತೆ, ಆದರ್ಶಗ್ರಾಮಯೋಜನೆಯಡಿ ವಿದ್ಯುತ್ ದೀಪ ಅಳವಡಿಕೆ, ಕಾಫಿ ಲೈನ್ ಮನೆಗಳಲ್ಲಿ ವಾಸಮಾಡುವ ಕಾರ್ಮಿಕರಿಗೆಗಿರಿಜನಉಪಯೋಜನೆಯಡಿ

ನಿವೇಶನ ಒದಗಿಸುವುದು, ಗುಡ್ಡೆನಹಳ್ಳಿ ಗ್ರಾಮದ 'ಲ್ಲಿಕುಲುವಾಡಿಕೆಜಮೀನನ್ನುಇತರೆವರ್ಗದವರಿಗೆಖಾತೆ ಮಾಡಿಕೊಡದಂತೆಕ್ರಮವಹಿಸಲು, ಕಾರ್ಲೆಗ್ರಾಮದಲ್ಲಿ ಸ್ಮಶಾನಒತ್ತುವರಿತೆರವುಮತ್ತಿತರ ವಿಷಯಗಳ ಕುರಿತು ಸಮಿತಿ ಸದಸ್ಯರಾದಮಲ್ಲೇಶ್, ಮರಿಜೋಸೆಫ್, ಶಿವಮ್ಮ, ನವೀನ್ ಸದಾ, ಶಿವಪ್ಪ ನಾಯಕ್ಅವರು ಮಾತನಾಡಿಸಭೆಯಲ್ಲಿ ಚರ್ಚಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕಅಧಿಕಾರಿಬಿ.ಆರ್. ಪೂರ್ಣಿಮಾ, ಸಕಲೇಶಪುರ ಉಪ ವಿಭಾಗದ ಉಪ ವಿಭಾಗಾಧಿಕಾರಿರಾಜೇಶ್, ಡಿವೈಎಸ್ಪಿ ಗಂಗಾಧರಪ್ಪ, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರಾದ ದೂದ್ ಫೀರ್‌ಮತ್ತಿತರ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

# ಹಿರಿಯ ನಾಗರಿಕರ ಕ್ರೀಡಾಕೂಟ ಸ್ಪರ್ಧೆಗಳಲ್ಲಿ ಹಿರಿಯ ಪತ್ರಕರ್ತ ಕೆ. ಜೈಮುನಿ ಅವರಿಗೆ ಸ್ವರ್ಣ ಪದಕ, ಪ್ರಥಮ ಸ್ಥಾನ



**ದಾವಣಗೆರೆ :** ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯ ಮತ್ತು ಕರ್ನಾಟಕ ಸರ್ಕಾರದ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಜಿಲ್ಲಾ ಆಡಳಿತ ಮತ್ತು ಜಿಲ್ಲಾ ಪಂಚಾಯತ್ ಹಾಗೂ ಹಿರಿಯ ನಾಗರಿಕರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಒಂದು ದಿನದ ಅಂತರ ಪೀಳಿಗೆಯ ಬಾಂಧವ್ಯ ಮೇಳದ ಅಂಗವಾಗಿ ನಿನ್ನೆ ಅ. 26ರ ಭಾನುವಾರದಂದು ಬಾಪೂಜಿ ಸ್ಕೂಲ್ ಆಟದ ಮೈದಾನದಲ್ಲಿ ಹಿರಿಯ ನಾಗರಿಕರಿಗಾಗಿ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಯನ್ನು ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಈ ಸ್ಪರ್ಧೆಗಳನ್ನು ಡಾಕ್ಟರೇಟ್ ಪುರಸ್ಕೃತರೂ ಹಾಗೂ ಮಾಧ್ಯಮ ಅಕಾಡೆಮಿ ಪ್ರಶಸ್ತಿ ಪುರಸ್ಕೃತರೂ ಆದ ಹಿರಿಯ ಪತ್ರಕರ್ತ ಕೆ. ಜೈಮುನಿ ಅವರಿಗೆ ಮ್ಯೂಸಿಕಲ್ ಚೇರ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಮತ್ತು ವೇಗದ ನಡಿಗೆಯಲ್ಲಿ ಪ್ರಥಮ ಸ್ಥಾನ ಹಾಗೂ ಜಾನಪದ ಗೀತೆ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನಗಳನ್ನು ಪಡೆಯುವುದರ ಮೂಲಕ ಸ್ವರ್ಣ ಪದಕ ಮತ್ತು ಪ್ರಶಸ್ತಿ ಪತ್ರಗಳನ್ನು ನೀಡಲಾಯಿತು.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಅಧಿಕಾರಿ ಡಾ. ಕೆ.ಕೆ. ಪ್ರಕಾಶ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

ಉಪನಿರ್ದೇಶಕ ರಾಜನಾಯಕ್ ಹಾಗೂ ಕೆ.ಎಸ್. ಮಹಾವೀರ್. ಮ. ಕರೆಣ್ಣನವರ್. ಮಾನ್ಯ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿ

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ದಾವಣಗೆರೆ. ಎಸ್. ಲಿಂಗಾರೆಡ್ಡಿ. ನಿವೃತ್ತ ಪೊಲೀಸ್ ಅಧೀಕ್ಷಕರು ಹಾಗೂ ಅಧ್ಯಕ್ಷರು ಪೊಲೀಸ್ ಅಧಿಕಾರಿಗಳ ಕ್ಷೇಮ ಅಭಿವೃದ್ಧಿ ಸಂಘ ದಾವಣಗೆರೆ. ಎಸ್. ಗುರುಮೂರ್ತಿ, ಅಧ್ಯಕ್ಷರು ದಾವಣಗೆರೆ ಜಿಲ್ಲಾ ಹಿರಿಯ ನಾಗರಿಕರ ಸಂಘ ದಾವಣಗೆರೆ. ಡಾಕ್ಟರ್ ವೀರಯ್ಯ ಜಿಲ್ಲಾ ಸರ್ಕಾರಿ ನಿವೃತ್ತ ಸರ್ಕಾರಿ ನೌಕರರ ಸಂಘ. ಹಿರಿಯ ನಾಗರಿಕರು ಮುತ್ತು ಮಕ್ಕಳು ಸ್ಪರ್ಧೆಗಳಲ್ಲಿಯೂ ಸಹ ಭಾಗವಹಿಸಿದ್ದರು.

# ಹಸಿದವರಿಗೆ ಅನ್ನ ನೀಡುವುದು ಪುಣ್ಯದ ಕೆಲಸ



**ಗದಗ :** ಸಕಲ ದಾನಗಳಲ್ಲಿ ಅನ್ನದಾನ ಶ್ರೇಷ್ಠವಾಗಿದೆ. ನಾವೆಷ್ಟೆ ಸಿರಿವಂತರಾದರೂ ಹಸಿದು ಬಂದವರಿಗೆ ಒಂದು ತುತ್ತು ಅನ್ನ ನೀಡದಿದ್ದರೆ ನಾವು ಗಳಿಸಿದ ಸಂಪತ್ತು ಶೂನ್ಯಕ್ಕೆ ಸಮಾನ ಎಂದು ಜಿಲ್ಲಾ ವಾಣಿಜ್ಯೋಧ್ಯಮ ಸಂಸ್ಥೆಯ ನೂತನ ಅಧ್ಯಕ್ಷ ರಾಜು ಗುಡಿಮನಿ ಅವರು ಹೇಳಿದರು.

ನಗರದ ಮಹಾತ್ಮಾಗಾಂಧಿ ವೃತ್ತದ ಬಳಿಯ ಹಳೇ ಜಿಲ್ಲಾಸ್ಪತ್ರೆಯ ಆವರಣದಲ್ಲಿರುವ (5 ರೂ.ಗೆ ಹೊಟ್ಟೆ ತುಂಬಾ ಊಟ ಖ್ಯಾತಿಯ) ಶ್ರೀ ಅನ್ನಪೂರ್ಣೇಶ್ವರಿ ಪ್ರಸಾದ ನಿಲಯದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿ, ಜೀವನದಲ್ಲಿ ದುಡ್ಡು ಗಳಿಸುವುದು ಮುಖ್ಯವಲ್ಲ ಗಳಿಸಿದ ಹಣದಲ್ಲಿ ನಾವೆಷ್ಟು ಜನರಿಗೆ ಒಳ್ಳೆಯದನ್ನು ಮಾಡಿದ್ದವೆ ಎನ್ನುವುದು ಮುಖ್ಯವಾಗಿದೆ. ನಗರದಲ್ಲಿ ಹಸಿದವರಿಗೆ ಅನ್ನ ನೀಡುವ ಮೂಲಕ ಪುಣ್ಯದ ಕೆಲಸ ಮಾಡುತ್ತಿರುವ ಶ್ರೀ ಅನ್ನಪೂರ್ಣೇಶ್ವರಿ ಪ್ರಸಾದ ನಿಲಯದ ಕಾರ್ಯ ಶ್ಲಾಘನೀಯವಾಗಿದೆ. ಮುಂದಿನ ದಿನಗಳಲ್ಲಿ ನಾವೆಲ್ಲ ಪದಾಧಿಕಾರಿಗಳು ಕೂಡ ಈ ಕಾರ್ಯಕ್ಕೆ ತನು-ಮನ-ಧನ ಸೇವೆ ಸಲ್ಲಿಸುತ್ತಿವೆ ಎಂದು ಹೇಳಿದರು.

ರಾಷ್ಟ್ರಪತಿ ಪದಕ ಪುರಸ್ಕೃತ ರಾಜೀವಗಾಂಧಿ ನಗರ ಬಡಾವಣೆಯ ಪಿಎಸ್‌ಐ ಮಾರುತಿ ಜೋಗದಂಡಕರ ಅವರು ಸನ್ಮಾನ ಸ್ವೀಕರಿಸಿ ಮಾತನಾಡಿ, ಗದಗ ನಗರದಲ್ಲಿ ಹಸಿದು ಬಂದವರಿಗೆ ಬರಿ 5 ರೂ.ಗಳಲ್ಲಿ ಹೊಟ್ಟೆ ತುಂಬಾ ಊಟ ನೀಡುತ್ತಿರುವುದು ನಿಜವಾಗಿಯೂ ಹೆಮ್ಮೆಯ ವಿಷಯವಾಗಿದೆ. ಈ ಕಾರ್ಯವನ್ನು ನಿರಂತರವಾಗಿ ನಡೆಸುತ ಬಂದಿರುವ ಆಡಳಿತ ಮಂಡಳಿ ಸೇವೆಗೆ ನಾವೆಲ್ಲರೂ ಕೈಜೋಡಿಸಬೇಕಾಗಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ವಾಣಿಜ್ಯೋಧ್ಯಮ ಸಂಸ್ಥೆಗೆ ನೂತನ ಉಪಾಧ್ಯಕ್ಷರಾಗಿ ಆಯ್ಕೆಯಾದ ಜಯದೇವ ಮೆಣಸಗಿ, ಪ್ರಕಾಶ ಉಗಲಾಟದ, ಸಹ ಗೌರವ ಕಾರ್ಯದರ್ಶಿಯಾಗಿ ಆಯ್ಕೆಯಾದ ಅಶೋಕ ಸಂಕಣ್ಣವರ ಅವರನ್ನು ಸನ್ಮಾನಿಸಲಾಯಿತು.

ವೇದಿಕೆ ಮೇಲೆ ಅನ್ನಪೂರ್ಣೇಶ್ವರಿ ಪ್ರಸಾದ ನಿಲಯದ ಗೌರವಾಧ್ಯಕ್ಷರಾದ ಎಸ್. ಎಸ್. ಕಳಸಾಪೂರ, ಉಪಾಧ್ಯಕ್ಷರಾದ ಉಮೇಶ ಪೂಜಾರ, ಹಿರಿಯರಾದ ಮರಿಗುದ್ದಿ, ಪತ್ರಿಮಠ, ಸದಸ್ಯರಾದ ರಾಜಣ್ಣ ಮಲ್ಲಾಡದ, ಮುತ್ತು ಜಡಿ,

ಸಮಾಜ ಸೇವಕ ಎಚ್.ಬಿ.ಸಿಂಗ್ರಿ, ನಿಲಯದ ಮೇಲ್ವಿಚಾರಕಿ ಶ್ರೀಮತಿ ವಿಶಾಲಾಕ್ಷಿ ಬಡಿಗೇರ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು. ಪ್ರಸಾದ ನಿಲಯದ ಖಜಾಂಚಿ ವೆಂಕಟೇಶ ಇಮರಾಪೂರ ಅವರು ಕಾರ್ಯಕ್ರಮ ನಿರೂಪಿಸಿದರು.

# ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

**ಹಾಸನ :** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಲ್ಲಿನ ಖಾಲಿಯಿರುವ ಸೀಟುಗಳಿಗೆ ಹಾಗೂ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಎಲ್ಲಾ ಮೆಟ್ರಿಕ್ ನಂತರದ ಕೋರ್ಸುಗಳ ವಿದ್ಯಾರ್ಥಿಗಳಿಗೆ (ಪದವಿ, ಸ್ನಾತಕೋತ್ತರ ಪದವಿ, ವೃತ್ತಿಪರ ಕೋರ್ಸ್‌ಹಾಗೂ ಇತರೆ ಕೋರ್ಸ್‌ಗಳಿಗೆ) 2025-26ನೇ ಶೈಕ್ಷಣಿಕ ಸಾಲಿಗೆ ಪ್ರವೇಶಾತಿಗಾಗಿ ಮುಸ್ಲಿಂ,ಕ್ರಿಶ್ಚಿಯನ್,ಜೈನ್, ಬೌದ್ಧ, ಸಿಖ್, ಮತ್ತು ಪಾರ್ಸಿ 75% ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಇತರೆ ಹಿಂದುಳಿದ ವರ್ಗದವರಿಗೆ (ಓಬಿಸಿ) 25%) ಅರ್ಜಿಗಳನ್ನು ರಾಜ್ಯ ವಿದ್ಯಾರ್ಥಿನಿಲಯ ತಂತ್ರಾಂಶದ SHP (State Hostel Portal) , https://shp.karnataka.gov.in/ ಮೂಲಕ ನ.07ರವರೆಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿ,ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಆಕಾಶವಾಣಿ ಹಿಂಭಾಗ, ಹಾಸನ, ದೂರವಾಣಿ ಸಂಖ್ಯೆ : 08172-268373/08172-267373 ಅಥವಾ ತಾಲ್ಲೂಕು ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

# ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

**ರಾಮನಗರ:** ಸಾರಿಗೆ ಮತ್ತು ಮುಜರಾಯಿ ಸಚಿವರು ಹಾಗೂ ಬೆಂಗಳೂರು ದಕ್ಷಿಣ ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗಾರೆಡ್ಡಿ ಅವರು ಅ.29ರ ಬುಧವಾರ ಬೆಂಗಳೂರು ದಕ್ಷಿಣ ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಅವರು ಅ.29ರ ಬುಧವಾರ ಬೆಳಿಗ್ಗೆ 8.30ಕ್ಕೆ ಬೆಂಗಳೂರಿನಿಂದ ನಿರ್ಗಮಿಸಿ ರಸ್ತೆ ಮೂಲಕ ಬೆಳಿಗ್ಗೆ 10 ಗಂಟೆಗೆ ರಾಮನಗರಕ್ಕೆ ಆಗಮಿಸುವರು ನಂತರ ಬೆಂಗಳೂರು ದಕ್ಷಿಣ ಜಿಲ್ಲಾ ಪಂಚಾಯತ್‌ನಲ್ಲಿ ಆಯೋಜಿಸಲಾಗಿರುವ ಬೆಂಗಳೂರು ದಕ್ಷಿಣ ಜಿಲ್ಲಾ ಕೆ.ಡಿ.ಪಿ ತ್ರೈಮಾಸಿಕ ಸಭೆಯಲ್ಲಿ ಭಾಗವಹಿಸುವರು.

ತದನಂತರ ಮಧ್ಯಾಹ್ನ 3 ಗಂಟೆಗೆ ರಾಮನಗರದಿಂದ ನಿರ್ಗಮಿಸಿ ರಸ್ತೆ ಮೂಲಕ ಬೆಂಗಳೂರು ತಲುಪುವರು ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬ್ಯೂಟಿ ಪಾರ್ಲರ್ ಉಚಿತ ತರಬೇತಿ

**ಚಿಕ್ಕಮಗಳೂರು:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಬ್ಯೂಟಿ ಪಾರ್ಲರ್ ಕುರಿತ 35 ದಿನಗಳ ಉಚಿತ ತರಬೇತಿಯು ನವೆಂಬರ್ 4 ರಿಂದ ಪ್ರಾರಂಭವಾಗಲಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವತಿಯರು ಅರ್ಜಿ ಸಲ್ಲಿಸಬಹುದು.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್ ಅಥವಾ ಜಾಬ್ ಕಾರ್ಡ್ ಹಾಗೂ ಆಧಾರ್ ಕಾರ್ಡ್ ಅನ್ನು ಕಡ್ಡಾಯವಾಗಿ ಹೊಂದಿರುವ ಗ್ರಾಮೀಣ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು.

ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗೆ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9380162042, 9481506564, 9740982585 ಅನ್ನು ಸಂಪರ್ಕಿಸಬಹುದು ಎಂದು ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹುಲ್ಲೂರ ಗ್ರಾಮದಲ್ಲಿ ಇ-ಕೆವೈಸಿ ಜಾಗೃತಿ ಕಾರ್ಯಕ್ರಮ

# ಇ-ಕೆವೈಸಿ ಪ್ರಕಿಯೆ ಮಾಡಿದ ತಾಪಂ ಇಓ ಚಂದ್ರಶೇಖರ ಬಿ ಕಂದಕೂರ



**ರೋಣ :** ಕೇಂದ್ರ ಸರ್ಕಾರದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (ನರೇಗಾ) ಯಡಿ ಕೂಲಿಕಾರರಿಗೆ ಇ-ಕೆವೈಸಿ ಪ್ರಕ್ರಿಯೆಯನ್ನು ಕಡ್ಡಾಯಗೊಳಿಸಲಾಗಿದೆ. ಈ ಹಿನ್ನೆಲೆಯಲ್ಲಿ ರೋಣ ತಾಲೂಕಿನ ಹುಲ್ಲೂರ ಗ್ರಾಮ ಪಂಚಾಯತಿಯಲ್ಲಿ ಇ-ಕೆವೈಸಿ ಕಾರ್ಯಕ್ಕೆ ತಾಲೂಕು ಕಾರ್ಯ ನಿರ್ವಾಹಕ ಅಧಿಕಾರಿಗಳಾದ ಚಂದ್ರಶೇಖರ ಬಿ. ಕಂದಕೂರ ಅವರು ಭೇಟಿ ನೀಡಿ, ಖುದ್ದು ಫೋಟೋ ತೆಗೆದು ಇ-ಕೆವೈಸಿ ಪ್ರಕ್ರಿಯೆಯನ್ನು ನಡೆಸಿ ಜಾಗೃತಿ ಮೂಡಿಸಿದರು.

ಹುಲ್ಲೂರ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ಅವರು, ನರೇಗಾ ಕೂಲಿಕಾರರೊಂದಿಗೆ ಸಮಾಲೋಚನೆ ನಡೆಸಿ, ಇ-ಕೆವೈಸಿ ಪ್ರಕ್ರಿಯೆಯನ್ನು ಅಕ್ಟೋಬರ್ 31, 2025 ರೊಳಗಾಗಿ ಪೂರ್ಣಗೊಳಿಸುವಂತೆ ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಸೂಚಿಸಿದರು.

"ಇ-ಕೆವೈಸಿ ಮಾಡಿಸದಿದ್ದರೆ ನರೇಗಾ ಉದ್ಯೋಗ ಚೀಟಿಗಳು ರದ್ದಾಗುವ ಸಾಧ್ಯತೆ ಇದೆ. ಇದರಿಂದ ಕೂಲಿಕಾರರಿಗೆ ಉದ್ಯೋಗ ಖಾತ್ರಿ ಯೋಜನೆಯಡಿ ಕೆಲಸದ ಅವಕಾಶ ಕಳೆದುಕೊಳ್ಳುವ ಆತಂಕವಿದೆ. ಆದ್ದರಿಂದ ಎಲ್ಲರೂ ತಕ್ಷಣವೇ ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕು," ಎಂದು ಅವರು ಗ್ರಾಮಸ್ಥರಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಅವರು ಗ್ರಾಮದ ಸಾರ್ವಜನಿಕ ಸ್ಥಳಗಳಲ್ಲಿ ಕೂಲಿಕಾರರನ್ನು

ಒಟ್ಟುಗೂಡಿಸಿ, ಇ-ಕೆವೈಸಿ ಕಾರ್ಯಕ್ಕೆ ಸಂಬಂಧಿಸಿದಂತೆ

ಮಾಹಿತಿ ನೀಡಿದರು. ಬೆಳಿಗ್ಗೆ ಮತ್ತು ಸಾಯಂಕಾಲದ ವೇಳೆಯಲ್ಲಿ ನೆಟ್‌ವರ್ಕ್ ಸಮಸ್ಯೆ ಕಡಿಮೆ ಇರುವುದರಿಂದ ಈ ಸಮಯದಲ್ಲಿ ಇ-ಕೆವೈಸಿ ಪ್ರಕ್ರಿಯೆಯನ್ನು ವೇಗವಾಗಿ ನಡೆಸಲು ಸಿಬ್ಬಂದಿಗೆ ಸಲಹೆ ನೀಡಿದರು.

ರೋಣ ತಾಲೂಕಿನಲ್ಲಿ ಒಟ್ಟು 50090 ನರೇಗಾ ಕೂಲಿಕಾರರಿದ್ದು, ಈ ಪೈಕಿ ಸುಮಾರು 20758 ಇ-ಕೆವೈಸಿ ಪ್ರಕ್ರಿಯೆಯನ್ನು ಈಗಾಗಲೇ ಪೂರ್ಣಗೊಳಿಸಿದ್ದಾರೆ.

ಉಳಿದ ಕೂಲಿಕಾರರಿಗೆ ಮುಂದಿನ ನಾಲ್ಕು ದಿನಗಳಲ್ಲಿ ಈ ಕಾರ್ಯವನ್ನು ಮುಗಿಸಲು ಗ್ರಾಮ ಪಂಚಾಯತಿಗಳ ಸಿಬ್ಬಂದಿಗಳಿಗೆ ಚಂದ್ರಶೇಖರ ಅವರು ತಾಕೀತು ಮಾಡಿದರು.

ಈ ಕಾರ್ಯಕ್ರಮದಲ್ಲಿ ತಾಲೂಕ ಪಂಚಾಯತಿ ವ್ಯವಸ್ಥಾಪಕರಾದ ದೇವರಾಜ ಸಜ್ಜನಶೆಟ್ಟರ, ಹುಲ್ಲೂರ ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ಗಣಕಯಂತ್ರ ನಿರ್ವಾಹಕರು, ನರೇಗಾ ಯೋಜನೆಯ ತಾಂತ್ರಿಕ ಸಂಯೋಜಕರು, ತಾಂತ್ರಿಕ ಸಹಾಯಕರು, ಎಂಐಎಸ್ ಸಂಯೋಜಕರು, ಬಿಎಫ್‌ಟಿ, ಮತ್ತು ಗ್ರಾಮ ಕಾಯಕ ಮಿತ್ರರು ಉಪಸ್ಥಿತರಿದ್ದರು.

## ಮಾಸಡಿ ಗ್ರಾಪಂ ಅಕ್ರಮ ಖಂಡಿಸಿ ಪ್ರತಿಭಟನೆ




**ದಾವಣಗೆರೆ:** ಜಿಲ್ಲೆಯ ಹೊನ್ನಾಳಿ ತಾಲ್ಲೂಕಿನ ಮಾಸಡಿ ಗ್ರಾಮ ಪಂಚಾಯತಿಯಲ್ಲಿ 14–15 ನೇ ಹಣಕಾಸಿನಲ್ಲಿ ಬಂದಿರುವ ಎಲ್ಲಾ ಅನುದಾನವನ್ನು ಬೊಗಸ್ ಬಿಲ್ಲು ಬರೆಸಿ ಕಬಳಿಸಿರುವುದನ್ನು ಖಂಡಿಸಿ ಗ್ರಾಮಸ್ಥರು ಗ್ರಾಮಪಂಚಾಯತಿಯ ಮುಂದೆ ಧರಣಿ ಕೂತು ಪ್ರತಿಭಟನೆ ನಡೆಸಿದರು.

ಈ ಸ್ವತ್ತು, ಶೌಚಾಲಯ ನಿರ್ಮಾಣ, ದನದಕೊಟ್ಟಿಗೆ, ಇಂಗು ಗುಂಡಿ ನಿರ್ಮಾಣ, ವಸತಿ ನಿರ್ಮಾಣಕ್ಕೆ ಅನುದಾನವನ್ನು ಬಳಸದೇ, ಫಲಾನುಭವಿಗಳಿಗೆ ಅನುದಾನ ನೀಡದೆ ಸತಾಯಿಸಿ ನೇರವಾಗಿ ತಮ್ಮ ಖಾತೆಗೆ ಜಮಾ ಮಾಡಿದ್ದಾರೆ ಎಂದು ಗ್ರಾಮಸ್ಥರು ಆರೋಪಿಸಿ, ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಯುವ ಮುಖಂಡರಾದ ಸಿದ್ದೇಶ್ ಮಾಸಡಿ, ಬೆಟಗೇರಿ ರುದ್ರಪ್ಪ, ಮಾದಪ್ಪ, ನವೀನ್,ಅಣ್ಣಪ್ಪ, ಯುವರಾಜ್, ಕೆ. ಹರೀಶ್, ಕೆ.ಡಿ. ಶಾಂತರಜ್ ಹಾಗೂ ಗ್ರಾಮಸ್ಥರು ಇದ್ದರು.

## ಸ್ಪಂದನ ಬಳಗದ 18ನೇ ಸ್ಪಂದನೆ



**ಚಿಕ್ಕಮಗಳೂರು:** ಚಿಕ್ಕಮಗಳೂರು ನಗರದ ನಗರಸಭೆಯಲ್ಲಿ ದಿನಗೂಲಿ ಕೆಲಸ ಮಾಡುತ್ತಿರುವಗೀತಾಎಂಬುವವರಿಗೆಇಬ್ಬರು ಹೆಣ್ಣು ಮಕ್ಕಳಿದ್ದು, ಹಿರಿಯ ಮಗಳು ಬಿಸಿಎ, ಕಿರಿಯ ಮಗಳು ಪಿಯುಸಿ ವ್ಯಾಸ'ಂಗಮಾಡುತ್ತಿದ್ದಾರೆ,ಗಂಡನನ್ನು ಕಳೆದುಕೊಂಡಿರುವ ಗೀತಾರವರು ಈ ಎರಡು ಮಕ್ಕಳ ಕಾಲೇಜು ಶುಲ್ಕವನ್ನು ಭರಿಸಲುಅಸಹಾಯಕರಾಗಿರುತ್ತಾರೆ, ಹಾಗಾಗಿ ಸ್ಪಂದನ ಬಳಗದ ಗೆಳತಿಯರು ಅವರ ಓದಿಗೆ ಸಹಾಯವಾಗಲೆಂದು ಚಿಕ್ಕಮಗಳ ಎರಡನೇಕಂತಿನ

ಶುಲ್ಕವನ್ನುಕಟ್ಟುವುದರ ಮೂಲಕ ಈ ತಿಂಗಳ ಕಾರ್ಯವನ್ನು ಮುಗಿಸಲಾಗಿದೆಎಂದು ಸಂಘದಅಧ್ಯಕ್ಷೆರೀನಾ ಸುಜೇಂದ್ರ ತಿಳಿಸಿದರು. ಈ ಸಂದರ್ಭದಲ್ಲಿಸ್ಪಂದನ ಬಳಗದ ಗೆಳತಿಯರಾದ ನೇತ್ರಾ ವೆಂಕಟೇಶ್, ರತಿ ಪ್ರವೀಣ್, ಕಲಾವತಿಉಡುಪ, ಹರಿಣಾಕ್ಷಿ ನಾಗರಾಜ್ ಉಪಸ್ಥಿತರಿದ್ದರು.

## ಅಪೂರ್ಣ ಅರ್ಜಿಗಳನ್ನು ಸರಿಪಡಿಸಲು ಸೂಚನೆ

**ಚಿಕ್ಕಮಗಳೂರು:** ಜಿಲ್ಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಕಾರ್ಯ ನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ 43 ಅಂಗನವಾಡಿ ಕಾರ್ಯಕರ್ತೆಯರು ಮತ್ತು 289 ಅಂಗನವಾಡಿ ಸಹಾಯಕಿಯರ ಹುದ್ದೆಗಳನ್ನು ಗೌರವಧನ ಆಧಾರದ ಮೇಲೆ ನೇಮಕ ಮಾಡಲು ನವೆಂಬರ್ 4 ರವರೆಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಆದರೆ ಆನ್‌ಲೈನ್ ಮೂಲಕ ಸಲ್ಲಿಕೆಯಾಗುತ್ತಿರುವ ಹಲವಾರು ಅರ್ಜಿಗಳು, ಅರ್ಜಿ ಸಲ್ಲಿಕೆಯ ಎಲ್ಲಾ 4 ಹಂತಗಳನ್ನು ಸರಿಯಾಗಿ ಪೂರ್ಣಗೊಳಿಸದೇ ಅಪೂರ್ಣ ಅರ್ಜಿಗಳಾಗಿರುವುದನ್ನು ಗಮನಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಸೂಕ್ತ ದಾಖಲೆಗಳೊಂದಿಗೆ ಈ ಕೆಳಗಿನ 4 ಹಂತಗಳನ್ನು ಪೂರ್ಣಗೊಳಿಸಿ ಅರ್ಜಿ ಸಲ್ಲಿಸಲು ತಿಳಿಯಪಡಿಸಿದೆ.

ಒಂದನೇ ಹಂತದಲ್ಲಿ ಆನ್‌ಲೈನ್ ತಂತ್ರಾಂಶದಲ್ಲಿ ನಿಗದಿತ ಅರ್ಜಿ ನಮೂನೆಯಲ್ಲಿ ಮಾಹಿತಿ ತುಂಬುವುದು. ಎರಡನೇ ಹಂತದಲ್ಲಿ ತಮ್ಮ ಭಾವಚಿತ್ರ ಮತ್ತು ಸಹಿಯನ್ನು ಅಪ್ಲೋಡ್ ಮಾಡುವುದು.

ಮೂರನೇ ಹಂತದಲ್ಲಿ ತಮ್ಮ ದಾಖಲಾತಿಗಳನ್ನು ಅಪ್ ಲೋಡ್ ಮಾಡುವುದು. ನಾಲ್ಕನೇ ಹಂತದಲ್ಲಿ ತಮ್ಮ ಆಧಾರ ಸಂಖ್ಯೆ ನಮೂದಿಸಿ, ಇ– ಹಸ್ತಾಕ್ಷರದೊಂದೊದಿಗೆ ಅರ್ಜಿಯನ್ನು ಪೂರ್ಣಗೊಳಿಸುವುದು.

ಈಗಾಗಲೇ ಅರ್ಜಿ ಸಲ್ಲಿಸಿರುವವರು ತಮ್ಮ ಅರ್ಜಿ ಸಂಖ್ಯೆ ಮತ್ತು ಜನ್ಮ ದಿನಾಂಕದ ಮಾಹಿತಿಯನ್ನು <https://karnemakaone.kar.nic.in/abcd/home.aspx> ಪೋರ್ಟಲ್‌ನಲ್ಲಿ ನಮೂದಿಸಿ ತಮ್ಮ ಅರ್ಜಿಗಳು ಸಂಪೂರ್ಣವಾಗಿ ಎಲ್ಲ 4 ಹಂತಗಳನ್ನು ಪೂರ್ಣಗೊಳಿಸಿರುವ ಬಗ್ಗೆ ನವೆಂಬರ್ 4 ರೊಳಗೆ ಖಚಿತಪಡಿಸಿಕೊಳ್ಳಲು ತಿಳಿಸಿದೆ.

ಹೆಚ್ಚಿನ ಮಾಹಿತಿಗೆ ಆಯಾ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗಳಿಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನವೆಂಬರ್ 2ರಂದು ಕನ್ನಡ ರಾಜ್ಯೋತ್ಸವ ಮತ್ತು ಕನ್ನಡ ಗೀತೆಗಳ ಸಮೂಹ ನೃತ್ಯ ಸ್ಪರ್ಧೆ

**ದಾವಣಗೆರೆ:** ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಶಾಖೆ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಸಹಯೋಗದೊಂದಿಗೆ ಕನ್ನಡ ರಾಜ್ಯೋತ್ಸವ ಮತ್ತು ಕನ್ನಡ ಗೀತೆಗಳ ಸಮೂಹ ನೃತ್ಯ ಸ್ಪರ್ಧೆಯ ಉದ್ಘಾಟನೆ ಕಾರ್ಯಕ್ರಮ ನವೆಂಬರ್ 2ರಂದು ಸಂಜೆ 4 ಗಂಟೆಗೆ ನಗರದ ಕುವೆಂಪು ಕನ್ನಡ ಭವನದಲ್ಲಿ ನಡೆಯಲಿದೆ.ಸುದ್ದಿಗೋಷ್ಠಿಯಲ್ಲಿ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ವೀರೇಶ ಎಸ್. ಒಡೇನಪುರ ಮಾತನಾಡಿ, ತಮ್ಮ ಅಧ್ಯಕ್ಷತೆಯ ಕಾರ್ಯಕ್ರಮವನ್ನು ಸಂಘದ ರಾಜ್ಯಾಧ್ಯಕ್ಷ ಸಿ.ಎಸ್.ಷಡಾಕ್ಷರಿ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿತ್ತೆ ಮಾಧವ್ ವಿಠಲರಾವ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಕಸಾಪ ಜಿಲ್ಲಾಧ್ಯಕ್ಷ ಬಿ.ವಾಮದೇವಪ್ಪ ಪಾಲ್ಗೊಳ್ಳಲಿದ್ದಾರೆ ಎಂದರು.

ಕನ್ನಡ ರಾಜ್ಯೋತ್ಸವ ಅಂಗವಾಗಿ ಜಿಲ್ಲೆಯ ರಾಜ್ಯ ಸರ್ಕಾರಿ ನೌಕರರು, ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಕನ್ನಡ ನಾಡಿನ ಹಿರಿಮೆ, ಭಾಷಾಭಿಮಾನ ಪ್ರತಿಬಿಂಬಿಸುವ ಗೀತೆಗಳ ಸಮೂಹ ನೃತ್ಯ ಸ್ಪರ್ಧೆಯನ್ನು ಆಯೋಜಿಸಲಾಗಿದೆ. 16 ವರ್ಷ ಮೇಲ್ಪಟ್ಟವರು ಸ್ಪರ್ಧೆಯಲ್ಲಿ ಭಾಗವಹಿಸಬಹುದಾಗಿದ್ದು, ಹೆಸರು ನೋಂದಾಯಿಸಲು ಅ.31 ಕೊನೆಯ ದಿನವಾಗಿದೆ. ವಿಜೇತ ತಂಡಗಳಿಗೆ ಪ್ರಥಮ ಬಹುಮಾನ 25,000 ರೂ., ದ್ವಿತೀಯ ಬಹುಮಾನ 15,000 ರೂ., ತೃತೀಯ ಬಹುಮಾನವಾಗಿ 10,000 ರೂ. ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮೊ:97405 04646 ಸಂಪರ್ಕಿಸುವಂತೆ ಅವರು ಮನವಿ ಮಾಡಿದರು.

ಸಾಹಿತ್ಯ ಪರಿಷತ್ತಿನ ಬಿ.ವಾಮದೇವಪ್ಪ, ಬಿ.ದಿಳ್ಳೆಪ್ಪ, ರಾಜ್ಯ ಸರ್ಕಾರಿ ನೌಕರರ ಸಂಘದ ಬಿ.ಪಾಲಾಕ್ಷಿ, ತಿಪ್ಪೇಸ್ವಾಮಿ, ಓಬಳಪ್ಪ ಸುದ್ದಿಗೋಷ್ಠಿಯಲ್ಲಿ ಹಾಜರಿದ್ದರು.

## ವಿಶ್ವ ಪಾರ್ಶ್ವವಾಯು ದಿನ, ಸಹ್ಯಾದ್ರಿ ನಾರಾಯಣ ಆಸ್ಪತ್ರೆಯಿಂದ ವಾಕಾಥಾನ್

**ಶಿವಮೊಗ್ಗ:** ವಿಶ್ವ ಪಾರ್ಶ್ವವಾಯು ದಿನದ ಅಂಗವಾಗಿ ನಗರದ ಪ್ರತಿಷ್ಠಿತ ಸಹ್ಯಾದ್ರಿ ನಾರಾಯಣ ಆಸ್ಪತ್ರೆಯು ಪಾರ್ಶ್ವವಾಯು ಕುರಿತು ಜನರಲ್ಲಿ ಅರಿವು ಮೂಡಿಸಲು ಅ.29 ರಂದು ವಾಕಾಥಾನ್ ಹಮ್ಮಿಕೊಂಡಿದೆ.

ನಗರದ ಕುವೆಂಪು ರಸ್ತೆಯಲ್ಲಿರುವ ನಾರಾಯಣ ಮಲ್ಟಿಸ್ಪೆಷಾಲಿಟಿ ಕ್ಲಿನಿಕ್ ನಿಂದ ಬೆಳಿಗ್ಗೆ 6.15 ಕ್ಕೆ ಪ್ರಾರಂಭವಾಗುವ ವಾಕಾಥಾನ್ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ನಾರಾಯಣ ಮಲ್ಟಿಸ್ಪೆಷಾಲಿಟಿ ಕ್ಲಿನಿಕ್ ಆವರಣದಲ್ಲಿಯೇ

ಮುಕ್ತಾಯಗೊಳ್ಳಲಿದೆ. ನರರೋಗ ಶಾಸ್ತ್ರಜ್ಞ ಡಾ. ಶಿವರಾಮ ಕ್ರಿಷ್ಣಾ ಜಾಥಾವನ್ನು ಉದ್ಘಾಟಿಸಲಿದ್ದಾರೆ.

ಸಾರ್ವಜನಿಕರು ಬೃಹತ ಪ್ರಮಾಣದಲ್ಲಿ ಈ ಜಾಗೃತಿ ನಡಿಗೆಯಲ್ಲಿ ಪಾಲ್ಗೊಂಡು ಇದನ್ನು ಯಶಸ್ವಿಗೊಳಿಸುವಂತೆ

ಆಸ್ಪತ್ರೆ ವ್ಯವಸ್ಥಾಪಕ ನಿರ್ದೇಶಕ ಶ್ರೀ ವರ್ಗಿಸ್ ಪಿ ಜಾನ್ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ: 08884492830

## ಕ್ಷುಲ್ಲಕ ವಿಚಾರಕ್ಕೆ ಬಸ್ ನಿಲ್ದಾಣದಲ್ಲಿ ಪ್ರಯಾಣಿಕರೆದುರೇ ಯುವಕನ ಭೀಕರ ಹತ್ಯೆ




**ಬೇಲೂರು:** ಕ್ಷುಲ್ಲಕ ವಿಚಾರಕ್ಕೆ ಬಸ್ ನಿಲ್ದಾಣದಲ್ಲಿ ಪ್ರಯಾಣಿಕರ ಸಮುಖದಲ್ಲೆ ಮಚ್ಚಿನಿಂದ ಕೊಚ್ಚಿ ಯುವಕನನ್ನು ಭೀಕರವಾಗಿ ಹತ್ಯೆ ಮಾಡಿರುವ ಘಟನೆ ಪಟ್ಟಣದಲ್ಲಿ ನಡೆದಿದೆ.

ಗುರಪ್ಪಗೌಡರ ಬೀದಿಯ ನಿವಾಸಿ ಗಿರೀಶ್ (28) ಕೊಲೆಯಾದ ಯುವಕ.

ಬಲ್ಲ ಮೂಲಗಳ ಪ್ರಕಾರ ಕೆಲವರ ನಡುವೆ ಯುವತಿಯೊಬ್ಬಳ ವಿಚಾರಕ್ಕೆ ಸಂಬಂಧಿಸಿದಂತೆ ಮಾತಿಗೆ ಮಾತು ಬೆಳೆದು ಕೈ ಕೈ ಮಿಲಾಯಿಸಿದ ಘಟನೆ ನಡೆದಿದೆ.ಈ ಸಂದರ್ಭದಲ್ಲಿ ಎಸ್.ಸೂರಾಪುರ ಗ್ರಾಮದ ಶ್ರೀನಿವಾಸನನ್ನುಅವಾಚ್ಯ ಶಬ್ದಗಳಿಂದ ಗಿರೀಶ ನಿಂದಿಸಿ ಹೊಡೆದಿದ್ದನೆಂಬ ಮಾತು ಕೇಳಿ ಬಂದಿದೆ.

ನಿನ್ನೆ ಬೆಳಗ್ಗೆ ಶ್ರೀನಿವಾಸ ಬೇಲೂರಿಗೆ ಬಂದ ಸಂದರ್ಭದಲ್ಲೂ ಗಿರೀಶ್‌ಅವಾಚ್ಯ ಶಬ್ದಗಳಿಂದ ನಿಂದಿಸಿದ್ದರಿಂದ ರೊಚ್ಚಿಗೆದ್ದ ಶ್ರೀನಿವಾಸ್‌ಅಲಿಯಾಸ್ ಕೋಳಿ ಸೀನ ಬಸ್ ನಿಲ್ದಾಣದ ಶೌಚಗೃಹಕ್ಕೆ ಗಿರೀಶ್ ಹೋಗಿರುವುದನ್ನು ಗಮನಿಸಿ ಆತ ಬರುವುದನ್ನೆ ಕಾದು ನಿಂತು ಬಸ್ ನಿಲ್ದಾಣದಲ್ಲಿ ಪ್ರಯಾಣಿಕರ ಸಮುಖದಲ್ಲೆ ಮಚ್ಚಿನಿಂದಕೊಚ್ಚಿ ಬರ್ಬರವಾಗಿ ಆತನನ್ನು ಹತ್ಯೆ ಮಾಡಿ ಪರಾರಿಯಾಗಿದ್ದಾನೆ.

ರಕ್ತದ ಮಡುವಿನಲ್ಲಿ ಬಿದ್ದಿದ್ದಗಿರೀಶ್‌ನನ್ನುಸ್ಥಳೀಯರು ಅಂಬ್ಯುಲೆನ್ಸ್ ನಲ್ಲಿ ಆಸ್ಪತ್ರೆಗೆ ಕರೆದೊಯ್ದು ಪ್ರಾಥಮಿಕ ಚಿಕಿತ್ಸೆ ಕೊಡಿಸಿದ್ದಾರೆ.

ನಂತರ ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾಸ್ಪತ್ರೆಗೆ ಕರೆದೊಯ್ಯುತ್ತಿದ್ದಾಗ ಮಾರ್ಗಮಧ್ಯೆ ಆತ ಮೃತಪಟ್ಟಿದ್ದಾನೆ.

ಘಟನಾ ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಹಮದ್ ಸುಜೀತಾ ಹಾಗೂ ಇನ್‌ಪೆಕ್ಟರ್ ರೇವಣ್ಣ ಮತ್ತು ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿ ಬೇಲೂರು ಪೊಲೀಸ್‌ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ಕೆಲವೇ ಗಂಟೆಗಳಲ್ಲಿ ಆರೋಪಿಯ ಜಾಡುಹಿಡಿದು ಬಂಧಿಸಿ ಕ್ರಮಕೈಗೊಂಡಿದ್ದಾರೆ.

## ಬ್ಯಾಂಕ್ ಖಾತೆಗಳು ಹ್ಯಾಕ್ ಮಾಡಿ 48 ಕೋಟಿ ವಂಚಿಸಿದ ಇಬ್ಬರು ಖತರ್‌ನಾಕ್ ವಂಚಕರ ಬಂಧನ



**ಬೆಂಗಳೂರು:** ವಿದೇಶಿ ಹ್ಯಾಕರ್‌ಗಳ ಸಹಾಯದೊಂದಿಗೆ ಖಾಸಗಿ ಫೈನಾನ್ಸ್ ಸಂಸ್ಥೆಯೊಂದರ ಬ್ಯಾಂಕ್ ಖಾತೆಗಳನ್ನು ಹ್ಯಾಕ್ ಮಾಡಿ 48 ಕೋಟಿ ಹಣವನ್ನು ಲಪಟಾಯಿಸಿದ್ದ ಇಬ್ಬರು ಖತರ್‌ನಾಕ್ ವಂಚಕರನ್ನು ಬಂಧಿಸುವಲ್ಲಿ ಸಿಸಿಬಿಯ ಸೈಬರ್ ಕ್ರೈಂ ಪೊಲೀಸರು ಯಶಸ್ವಿ ಯಾಗಿದ್ದಾರೆ.

ಬಂಧಿತ ವಂಚಕರನ್ನು ರಾಜಸ್ತಾನ ಮೂಲದ ಸಂಜಯ್ ಪಟೇಲ್ (43) ಹಾಗೂ ಬೆಳಗಾವಿಯ ಇಸಾಯಿಲ್ ರಶೀದ್ ಅತ್ತರ್(27) ಎಂದು ಗುರುತಿಸಲಾಗಿದೆ.ಸಂಜಯ್ ಪಟೇಲ್ ಕೇವಲ 8ನೇ ತರಗತಿ ವ್ಯಾಸಂಗ ಮಾಡಿದ್ದು, ವೃತ್ತಿಯಲ್ಲಿ ಪ್ಲಂಬರ್. ಮತ್ತೊಬ್ಬ ಆರೋಪಿ 10ನೇ ತರಗತಿ ವ್ಯಾಸಂಗ ಮಾಡಿದ್ದು, ಡಿಜಿಟಲ್ ಮಾರ್ಕೆಟಿಂಗ್ ವೃತ್ತಿ ಮಾಡುತ್ತಿದ್ದನು. ಇವರಿಬ್ಬರು ಕಡಿಮೆ ವ್ಯಾಸಂಗ ಮಾಡಿದ್ದರೂ ಸೈಬರ್ ವಂಚನೆಯಲ್ಲಿ ಪ್ರವೀಣರು.

ನಗರದ ವಿಜ್ಡಮ್ ನೋಡಲ್ ಫೈನಾನ್ಸ್ ಕಂಪನಿಯ ಬ್ಯಾಂಕ್‌ನ ಹಲವು ಖಾತೆಗಳಲ್ಲಿ ಅನುಮಾನಾಸ್ಪದ ಹಣ ವರ್ಗಾವಣೆ ಕುರಿತಂತೆ ಸಂಸ್ಥೆಯ ಸೀನಿಯರ್ ಮ್ಯಾನೇಜರ್ ನೀಡಿದ ದೂರಿನ ಮೇರೆಗೆ ಕಾರ್ಯಾಚರಣೆಗೆ ಇಳಿದ ಸೈಬರ್ ಕ್ರೈಂ ಪೊಲೀಸರು ಆರೋಪಿಗಳ ಹೆಡೆಮುರಿ ಕಟ್ಟಿದ್ದಾರೆ.ಆರೋಪಿಗಳು ಹಾಂಗ್‌ಕಾಂಗ್ ಮೂಲದ ಹ್ಯಾಕರ್‌ಗಳನ್ನು ನೇಮಿಸಿಕೊಂಡು ವಿಜ್ಡಮ್ ಸಂಸ್ಥೆಯ ಬ್ಯಾಂಕ್ ಖಾತೆಗಳ ಎಪಿಐಗಳನ್ನು ಬದಲಾಯಿಸಿ ನಕಲಿ ಐಪಿ ವಿಳಾಸಗಳ ಮೂಲಕ ಕೋಟಿ ಕೋಟಿ ಹಣ ಲೂಟಿ ಮಾಡಿದ್ದರು.

ಈ ಹಣದ ವ್ಯವಹಾರಗಳು ಕಂಪನಿಯ ಅಧಿಕೃತ ಸಿಸ್ಟಂ ಅಥವಾ ವೈಟ್‌ಲಿಸ್ಟೆಡ್ ಐಪಿ ವಿಳಾಸಗಳ ಮೂಲಕ ನಡೆದಿಲ್ಲ. ಬದಲಾಗಿ ಭಾರತದ ಹೊರಗಿನ ಐಪಿ ಅಡ್ರೆಸ್‌ಗಳ ಮೂಲಕ ನಡೆದಿರುವುದನ್ನು ಪತ್ತೆ ಹಚ್ಚಿ ಸುಮಾರು 47 ಕೋಟಿ ಹಣವನ್ನು ಕಂಪನಿಯ ಖಾತೆಗಳಿಂದ ಅನಧಿಕೃತವಾಗಿ ಇತರೆ ಖಾತೆಗಳಿಗೆ ವರ್ಗಾಯಿಸಿರುವುದು ತನಿಖೆಯಿಂದ ಬೆಳಕಿಗೆ ಬಂದಿದೆ ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್ ರವರು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

## ಬಡ ಮಕ್ಕಳಿಗೂ ಪ್ರತಿಭಾ ಪುರಸ್ಕಾರ ಮಾಡಬೇಕು ಶಾಸಕ ಸ್ವರೂಪ್ ಪ್ರಕಾಶ್

**ಹಾಸನ :** ಶಿಕ್ಷಣ ಕ್ಷೇತ್ರದಲ್ಲಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸುವುದರಜೊತೆಗೆ, ಉನ್ನತ ವಿದ್ಯಾಭ್ಯಾಸ ಮಾಡುತ್ತಿರುವಬಡ ಮಕ್ಕಳಿಗೂ ಸಹ ಪ್ರತಿಭಾ ಪುರಸ್ಕಾರವನ್ನುಮಾಡಬೇಕುಎಂದು ಶಾಸಕರಾದ ಸ್ವರೂಪ್ ಪ್ರಕಾಶ್ ತಿಳಿಸಿದ್ದಾರೆ.

ಕರ್ನಾಟಕರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘ (ನೋಂ) ಇವರ ವತಿಯಿಂದ ನಗರದಜಿಲ್ಲಾ ನಿವೃತ್ತ ನೌಕರರ ಸಮುದಾಯ ಭವನದಲ್ಲಿಂದುಆಯೋಜಿಸಿದ್ದ ಶಿಕ್ಷಕರ ದಿನಾಚರಣೆ, ಪ್ರತಿಭಾ ಪುರಸ್ಕಾರ ಮತ್ತು ಮಾಜಿ ಶಾಸಕರಾದ ದಿ॥ ಹೆಚ್. ಎಸ್ ಪ್ರಕಾಶ್‌ರವರ ಭಾವಚಿತ್ರಅನಾವರಣಕಾರ್ಯಕ್ರಮಉದ್ಘಾಟಿಸಿ ಮಾತನಾಡಿದಅವರುನನ್ನತಂದೆಯ ನೆನೆಸಿಕೊಂಡು ಅವರ ಭಾವಚಿತ್ರವನ್ನು ಅನಾವರಣಗೊಳಿಸಿರುವುದು ಮಗನಾಗಿ ನನಗೆ ಬಹಳ ಸಂತೋಷವಾಗುತ್ತಿದೆಎಂದು ತಿಳಿಸಿದ್ದಾರೆ. ಕಳೆದ ಎರಡು ವರ್ಷಗಳ ಹಿಂದೆ ಶಾಸಕನಾಗಿ ಪ್ರತಿಭಾ ಪುರಸ್ಕಾರಕಾರ್ಯಕ್ರಮಕ್ಕೆ ಬಂದಾಗಕಟ್ಟಡದುಸ್ಥಿತಿಯಲ್ಲಿದೆ ಅದನ್ನು ಸರಿಪಡಿಸಿಕೊಡಬೇಕುಎಂದುಕೆಲವು ಬೇಡಿಕೆಗಳನ್ನು ಇಟ್ಟಿದ್ದರು.


## ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಸಾಧಕರ ಸನ್ಮಾನಕ್ಕೆಅರ್ಜಿಆಹ್ವಾನ

**ಹಾಸನ :** ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಸಾಧಕರುಗಳಿಗೆ 2025 ನೇ ನವೆಂಬರ್ 01 ರಂದುಕನ್ನಡ 'ರಾಜ್ಯೋತ್ಸವಕಾರ್ಯಕ್ರಮದಲ್ಲಿಸನ್ಮಾನಿಸಲು ಜಿಲ್ಲಾಡಳಿತದ ವತಿಯಿಂದತೀರ್ಮಾನಿಸಲಾಗಿರುತ್ತದೆ. ನಾಡು ನುಡಿ, ಕಲೆ ಸಾಹಿತ್ಯ, ಸಾಂಸ್ಕೃತಿಕಕ್ಷೇತ್ರ, ಪತ್ರಿಕಾಕ್ಷೇತ್ರ, ಕ್ರೀಡಾಕ್ಷೇತ್ರ ಮತ್ತುಗ್ರಾಮೀಣ ಕಲೆ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಸಾಧಕರುಅಥವಾ ಸಾಧಕರಬಗ್ಗೆ ಮಾಹಿತಿ ಹೊಂದಿರುವ ವ್ಯಕ್ತಿಗಳು ಸಾಧಕರ ಮಾಹಿತಿಯನ್ನುಕರಾರುವಕ್ಕಾದ ವಿಳಾಸ, ದೂರವಾಣಿ ಸಂಖ್ಯೆ ಹಾಗೂ ಅರ್ಜಿ ಸಲ್ಲಿಸುತ್ತಿರುವಕ್ಷೇತ್ರದ ಬಗ್ಗೆ ಸ್ಪಷ್ಟವಾಗಿ ನಮೂದಿಸಿ ಅಗತ್ಯದೃಢೀಕೃತ ದಾಖಲೆಗಳನ್ನು ದಿನಾಂಕ ಅ.30ರಂದು ಮದ್ಯಾಹ್ನ 12 ಗಂಟೆಯೊಳಗೆ ಸಹಾಯಕಆಯುಕ್ತರು ಹಾಸನ ಉಪ ವಿಭಾಗ ಹಾಸನ ಇವರಕಚೇರಿಗೆ ಸಲ್ಲಿಸಬಹುದಾಗಿದೆ. ಈ ಹಿಂದೆ ಸನ್ಮಾನ ಪಡೆದುಕೊಂಡಿರುವ ಸಾಧಕರು ಮರುಅರ್ಜಿ ಸಲ್ಲಿಸಲುಅವಕಾಶವಿರುವುದಿಲ್ಲ ಎಂದುಹಾಸನ ಉಪವಿಭಾಗಾಧಿಕಾರಿ ತಿಳಿಸಿದ್ದಾರೆ.

## ಪ್ಲಾಸ್ಟಿಕ್ ಧ್ವಜ ನಿಷೇಧ

**ದಾವಣಗೆರೆ :** ನವಂಬರ್ 1 ರಂದು ಆಚರಿಸಲಿರುವ ಕನ್ನಡ ರಾಜ್ಯೋತ್ಸವದ ಸಂದರ್ಭದಲ್ಲಿ ಪರಿಸರ ಸಂರಕ್ಷಣೆಗಾಗಿ ಹಾಗೂ ಪರಿಸರ ಸ್ನೇಹಿಯಾಗಿ ಆಚರಿಸಲು ಸಾರ್ವಜನಿಕರಲ್ಲಿ ಮನವಿ ಮಾಡಿ ಜಿಲ್ಲೆಯಾದ್ಯಂತ ಪ್ಲಾಸ್ಟಿಕ್ ಧ್ವಜಗಳ ಮಾರಾಟ ಮತ್ತು ಬಳಸದಂತೆ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಪರಿಸರ ಅಧಿಕಾರಿ ತಿಳಿಸಿದ್ದಾರೆ.ಕೈಯಿಂದ ನೂಲುವ ಮತ್ತು ಕೈಯಿಂದ ನೇಯ್ದ ಅಥವಾ ಯಂತ್ರದಿಂದ ಮಾಡಿರುವ ಹಾಗೂ ಹತ್ತಿ ಪಾಲಿಸ್ಟರ್, ಉಣ್ಣೆ, ರೇಷ್ಮೆ ಖಾದಿಯಿಂದ ಮಾಡಿರುವ ಧ್ವಜಗಳನ್ನು ಬಳಸಬೇಕು. ಪ್ಲಾಸ್ಟಿಕ್ ಧ್ವಜ ಮಾರಾಟ ಮಾಡುವಂತಹ ಅಂಗಡಿ ಮಾಲಿಕರುಗಳ ವಿರುದ್ಧ ಪರಿಸರ ಸಂರಕ್ಷಣಾ ಕಾಯ್ದೆ ಪರಿಸರ ಸಂರಕ್ಷಣಾ ಕಾಯ್ದೆಯಡಿ ಕ್ರಮಕೈಗೊಳ್ಳಲಾಗುವುದು. ಕನ್ನಡ ರಾಜ್ಯೋತ್ಸವ ದಿನಾಚರಣೆಯ ಪ್ರಯುಕ್ತ ಪ್ಲಾಸ್ಟಿಕ್ ಧ್ವಜಗಳ ಮಾರಾಟ ಮತ್ತು ಉಪಯೋಗ ಮಾಡಬಾರದು.

## ಧರ್ಮಸ್ಥಳ ಪ್ರಕರಣ ಷಡ್ಯಂತ್ರದ ರೂವಾರಿಗಳಿಗೆ ಬಂಧನದ ಭೀತಿ



**ಬೆಂಗಳೂರು:** ಕರ್ನಾಟಕ ಮಾತ್ರವಲ್ಲದೆ ಅಂತಾರಾಷ್ಟ್ರಿಯ ಮಟ್ಟದಲ್ಲೂ ಭಾರೀ ಕುತೂಹಲಕ್ಕೆ ಎಡೆ ಮಾಡಿಕೊಟ್ಟಿದ್ದ ಧರ್ಮಸ್ಥಳ ಕೊಲೆ, ಅತ್ಯಾಚಾರ ಪ್ರಕರಣ ಸಂಬಂಧ ವಿಶೇಷ ತನಿಖಾ ತಂಡ (ಎಸ್‌ಐಟಿ) ಷಡ್ಯಂತ್ರ ರೂಪಿಸಿದವರಿಗೆ ಬಲೆ ಬೀಸಿದೆ.

ಎಲ್ಲಾ ಆಯಾಮಗಳಲ್ಲೂ ಎಸ್‌ಐಟಿ ತನಿಖೆ ನಡೆಸಿದ್ದು, ಧರ್ಮಸ್ಥಳದಲ್ಲಿ ಸಾಮೂಹಿಕ ಅತ್ಯಾಚಾರ,

ಕೊಲೆ ಮತ್ತು ಶವ ಹೂತಿಟ್ಟ ಪ್ರಕರಣಕ್ಕೆ ಸೂಕ್ತವಾದ ಸಾಕ್ಷ್ಯಾಧಾರಗಳು ಲಭ್ಯವಿಲ್ಲ ಎಂಬ ಅಂತಿಮ ನಿರ್ಧಾರಕ್ಕೆ ಬಂದಿದೆ. ಈಗ ಎಸ್‌ಐಟಿ ಈ ಪ್ರಕರಣವನ್ನು ಮುನ್ನಲೆಗೆ ತಂದ ಷಡ್ಯಂತ್ರದ ರೂವಾರಿಗಳನ್ನು ಹೆಡೆಮುರಿ ಕಟ್ಟಲು ಸಜ್ಜಾಗಿದ್ದು,ಕೆಲವರಿಗೆ ಬಂಧನದ ಭೀತಿ ಕಾಡುತ್ತಿದೆ.

ಹಲವಾರು ವರ್ಷಗಳಿಂದ ನಾನು ಶವವನ್ನು ಹೂತಿಟ್ಟಿದ್ದೇನೆ ಎಂದು ಹೇಳಿ ಜೈಲುಪಾಲಾಗಿರುವ ಚಿನ್ನಯ್ಯ ಪ್ರಕರಣದ ಹಿಂದಿನ ರೂವಾರಿಗಳಾದ ಮಹೇಶ್ ಶೆಟ್ಟಿ ತಿಮರೋಡಿ, ಗಿರೀಶ್ ಮಟ್ಟಣ್ಣನವರ್, ಜಯಂತ್.ಟಿ ಹಾಗೂ ವಿಠಲಗೌಡರಿಗೆ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ನೀಡಿದೆ. ಒಂದು ವೇಳೆ ಗೈರುಹಾಜರಾದರೆ ಬಂಧಿಸುವ ಎಚ್ಚರಿಕೆಯನ್ನು ಸಹ ಕೊಡಲಾಗಿದೆ.

ಇವರು ಮಾತ್ರವಲ್ಲದೆ ಪ್ರಕರಣದ ಹಿಂದೆ ಇನ್ನು ಕೆಲವು ಕಾಣದ ಕೈಗಳಿರುವುದರಿಂದ ತೆರೆಮರೆಯಲ್ಲಿ ಕುಳಿತು ಶ್ರೀಕ್ಷೇತ್ರ ಧರ್ಮಸ್ಥಳದ ಕೀರ್ತಿಗೆ ಹಾಗೂ ಭಕ್ತರ ಭಾವನೆಗಳಿಗೆ ಧಕ್ಕೆ ತಂದ ಹಿನ್ನೆಲೆಯಲ್ಲಿ

ಷಡ್ಯಂತ್ರ ರೂಪಿಸಿದವರಿಗೆ ಬಲೆ ಬೀಸಿದೆ ಎಂದು ತಿಳಿದುಬಂದಿದೆ. ಶವ ಹೂತಿಟ್ಟಿದ್ದೇನೆ ಎಂದು ಹೇಳಿದ್ದ ಚಿನ್ನಯ್ಯನ ಮಾತು ನಂಬಿ ಎಸ್‌ಐಟಿ ಧರ್ಮಸ್ಥಳದ ಸುತ್ತಮುತ್ತ ಉತ್ಖನನ ನಡೆಸಿದರು. ಪ್ರಕರಣಕ್ಕೆ ಸಂಬಂಧಿಸಿದ ಯಾವುದೇ ಸಾಕ್ಷ್ಯಾಧಾರಗಳು ಹಾಗೂ ಪುರಾವೆಗಳು ಸಿಗಲಿಲ್ಲ.

ಒಂದೆರಡು ಕಡೆ ಶವಗಳು ಪತ್ತೆಯಾದರೂ ಅವುಗಳು ಪುರುಷರ ಮೃತದೇಹಗಳಾಗಿದ್ದವು. ಅಲ್ಲದೆ ಅನ್ಯ ಕಾರಣಗಳಿಂದ ಆತಹತ್ಯೆ ಹಾಗೂ ಧರ್ಮಸ್ಥಳದಲ್ಲಿ ಸತ್ತರೆ ಮೋಕ್ಷ ಸಿಗುತ್ತದೆ ಎಂಬ ನಂಬಿಕೆಯಿಂದ ಸಾವನ್ನಪ್ಪಿದ ಪ್ರಕರಣಗಳಾಗಿದ್ದವು. ಆರೋಪಿಯು ಆರೋಪಿಸಿದಂತೆ ಉತ್ಖನನದ ವೇಳೆ ಸಿಕ್ಕ ಮೃತದೇಹಕ್ಕೂ ಪ್ರಕರಣಕ್ಕೂ ಒಂದಕ್ಕೊಂದು ಸಂಬಂಧವೇ ಇರಲಿಲ್ಲ. ಈಗ ಧರ್ಮಸ್ಥಳ ಹಾಗೂ ಅದರ ಆಡಳಿತ ಮಂಡಳಿಯನ್ನು ಗುರಿಯಾಗಿಟ್ಟುಕೊಂಡು ಸಂಚು ರೂಪಿಸಲಾಗಿದೆಯೇ ಎಂಬುದರತ್ತ ಎಸ್‌ಐಟಿ ತನಿಖೆ ನಡೆಸುತ್ತಿದೆ.ಹದಿಹರೆಯದ ಯುವತಿಯರು,

ಮಹಿಳೆಯರು ಸೇರಿದಂತೆ 100ಕ್ಕೂ ಹೆಚ್ಚು ಶವಗಳನ್ನು ನನ್ನಿಂದ ಹೂತು ಹಾಕಿಸಲಾಗಿತ್ತು ಎಂದು ಸುಳ್ಳು ಹೇಳಿಕೆ ಆರೋಪದ ಮೇಲೆ ಬಂಧನಕ್ಕೊಳಗಾಗಿರುವ ದೂರುದಾರ ಸಿ.ಎನ್. ಚಿನ್ನಯ್ಯ ನ್ಯಾಯಾಲಯದ ಮುಂದೆ ಸತ್ಯ ಒಪ್ಪಿಕೊಂಡದ್ದು ಯಾಕೆ? ಇಂತಹ ಗಂಭೀರ ಆರೋಪಗಳನ್ನು ಮಾಡಲು ಅವರನ್ನು ಪ್ರಚೋದಿಸಿದವರು ಯಾರು? ಎಂಬಿತ್ಯಾದಿ ಮಾಹಿತಿ ತಿಳಿಯಲು ಎಸ್ ಐಟಿ ಮುಂದಾಗಿದೆ.

1995ರಿಂದ 2014ರವರೆಗೆ ದೇವಸ್ಥಾನದಲ್ಲಿ ಮಾಜಿ ಸ್ವಚ್ಛತ ಕೆಲಸಗಾರನಾಗಿದ್ದ ಚಿನ್ನಯ್ಯ 2002 ಮತ್ತು 2014ರ ನಡುವೆ ದೇವಾಲಯದ ಆವರಣದಲ್ಲಿ 200ಕ್ಕೂ ಹೆಚ್ಚು ಅಪರಿಚಿತ ಶವಗಳನ್ನು ರಹಸ್ಯವಾಗಿ ಹೂತ್ತಿಟ್ಟಿರುವುದಾಗಿ ಆರೋಪಿಸಿ 2025 ಆಗಸ್ಟ್‌ನಲ್ಲಿ ದೂರು ದಾಖಲಿಸಿದ್ದರು.

ಅಪಘಾತಗಳು, ಕೊಲೆ ಮತ್ತು ಅನುಮಾಸ್ಪದವಾಗಿ ಮೃತಪಟ್ಟವರನ್ನು ಮರಣೋತ್ತರ ಪರೀಕ್ಷೆ ಇಲ್ಲದೆ ಅಥವಾ ಪೊಲೀಸರ ವರದಿಯಿಲ್ಲದೆ ಹೂತು ಹಾಕಲಾಗಿದೆ ಎಂದು ಹೇಳಿದ್ದರು. ಬಳಿಕ ನ್ಯಾಯಾಲಯದಲ್ಲಿ ಸ್ವಯಂಪ್ರೇರಿತ ಹೇಳಿಕೆ ನೀಡಿದ್ದ ಚಿನ್ನಯ್ಯ, ತಾನು ಈ ಹಿಂದೆ ನೀಡಿದ್ದ ಹೇಳಿಕೆ ಹಾಗೂ ಸಾಕ್ಷ್ಯಸುಳ್ಳಾಗಿದ್ದು, ಕೆಲವರ ಆಜ್ಞೆಯಿಂದ ಆ ರೀತಿ ಮಾಡಿರುವುದಾಗಿ ಹೇಳಿದ್ದರು.

18 ಕಡೆಗಳಲ್ಲಿ ಎಸ್ ಐಟಿ ಉತ್ಖನನ

ತಾನೂ ಹೂತಿಟ್ಟಿದ್ದ ಸ್ಥಳದಿಂದ ತರಲಾದ ತಲೆಬುರಡೆ ಎಂದು ಹೇಳಿ ದಕ್ಷಿಣಕನ್ನಡ ಪೊಲೀಸರಿಗೆ ನೀಡಿದ್ದ ಚಿನ್ನಯ್ಯ, ತದನಂತರ ತನ್ನ ಹೇಳಿಕೆ ಹಿಂಪಡೆದಿದ್ದರು.

ಅಕ್ಟೋಬರ್ 2012ರಲ್ಲಿ ದಕ್ಷಿಣ ಕನ್ನಡದಲ್ಲಿ ಅತ್ಯಾಚಾರ ಮತ್ತು ಕೊಲೆಯಾದ ಸೌಜನ್ಯ ಅವರ ಚಿಕ್ಕಪ್ಪ ವಿಠ್ಠಲ ಗೌಡ ತಲೆಬುರುಡೆಯನ್ನು ತನಗೆ ನೀಡಿದ್ದರು ಎಂದು ಹೇಳಿದ್ದರು.

ಚಿನ್ನಯ್ಯ ಗುರುತಿಸಿದ ಸುಮಾರು 18 ಕಡೆಗಳಲ್ಲಿ ಎಸ್‌ಐಟಿ ಅಗೆದು ಪರಿಶೀಲಿಸಿದೆ. ಬಂಗ್ಲೆಗುಡ್ಡೆ ಸೇರಿದಂತೆ ಕೆಲವೆಡೆ ಮಾನವನ ಅಸ್ಥಿಪಂಜರದ ಅವಶೇಷಗಳು ಪತ್ತೆಯಾಗಿವೆ. ಅವುಗಳನ್ನು ಡಿಎನ್‌ಎ ವಿಶ್ಲೇಷಣೆ ಮತ್ತು ಫೋರೆನ್ಸಿಕ್ ಪರೀಕ್ಷೆಗೆ ಕಳುಹಿಸಲಾಗಿದೆ.

## ಬೆಂಗಳೂರು : 2ನೇ ಮಹಡಿಯಿಂದ ಬಿದ್ದು ಮಗು ಸಾವು

**ಬೆಂಗಳೂರು:** ಎರಡನೇ ಮಹಡಿಯಿಂದ ಬಿದ್ದು ಮೂರು ವರ್ಷದ ಮಗು ಮೃತಪಟ್ಟಿರುವ ಘಟನೆ ಕೋಣನಕುಂಟೆ ಪೊಲೀಸ್ ಠಾಣೆ ವ್ಯಾಪ್ತಿಯ ಗೊಟ್ಟಿಗೆರೆ ವೀವರ್‌ಸ ಕಾಲೋನಿಯಲ್ಲಿ ನಡೆದಿದೆ.

ವೇಹಾಂತ್ ಮೃತಪಟ್ಟಿರುವ ಗಂಡು ಮಗು. ವೀವರ್‌ಸ ಕಾಲೋನಿಯ 10ನೇ ಕ್ರಾಸ್‌ನಲ್ಲಿರುವ ಅಪಾರ್ಟ್‌ಮೆಂಟ್‌ವೊಂದರ 2ನೇ ಮಹಡಿಯಲ್ಲಿ ವಾಸವಾಗಿರುವ ವಿನೋದ್ ಮತ್ತು ಕಾವ್ಯ ದಂಪತಿಯ ಪುತ್ರ ವೇಹಾಂತ್ ಕಳೆದ ಶನಿವಾರ ಸಂಜೆ 6 ಗಂಟೆ ಸಂದರ್ಭದಲ್ಲಿ ಆಟವಾಡುವಾಗ ಆಯತಪ್ಪಿ ಮಹಡಿಯಿಂದ ಕೆಳಗೆ ಬಿದ್ದಿದ್ದಾನೆ.ತಲೆಗೆ ತೀವ್ರ ಪೆಟ್ಟು ಬಿದ್ದ ಹಿನ್ನಲೆಯಲ್ಲಿ ಮಗುವನ್ನು ಬನ್ನೆರುಘಟ್ಟ ರಸ್ತೆಯಲ್ಲಿರುವ ಮೆಡಾಕ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ತಲೆಯಲ್ಲಿ ರಕ್ತ ಹೆಪ್ಪುಗಟ್ಟಿದ್ದು, ಪರಿಸ್ಥಿತಿ ಗಂಭೀರವಾಗಿದೆ ಎಂದು ವೈದ್ಯರು ತಿಳಿಸಿದ್ದರು. ಆದರೆ ನಿನ್ನೆ ಬೆಳಗ್ಗೆ ಚಿಕಿತ್ಸೆ ಫಲಿಸದೆ ವೇಹಾಂತ್ ಮೃತಪಟ್ಟಿದ್ದಾನೆ. ಕೋಣನಕುಂಟೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

## ಸಾರ್ವಜನಿಕರಲ್ಲಿ ಅರಿವುಕಾರ್ಯಕ್ರಮಕ್ಕೆ ಚಾಲನೆ

**ಹಾಸನ :** ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು, ಸ್ವಚ್ಛ ಭಾರತ್ ಮಿಷನ್ (ನಗರ),ಜಿಲ್ಲಾಡಳಿತ, ಜಿಲ್ಲಾ ನಗರಾಭಿವೃದ್ಧಿ ಕೋಶ ಹಾಸನ ಮಹಾನಗರ ಪಾಲಿಕೆ ವತಿಯಿಂದ ಸ್ವಚ್ಛತಾ ಹೀ ಸೇವಾ ಅಭಿಯಾನ ಅಂಗವಾಗಿ ನಗರದಲ್ಲಿ ವಿವಿಧ 95 ಕಡೆರಸ್ತೆ ಬದಿಯಲ್ಲಿತ್ಯಾಜ್ಯ ಹಾಕಲಾಗುತ್ತಿರುವ ಹಿನ್ನೆಲೆ ಹಾಸನ ರಿಂಗ್‌ರಸ್ತೆಯಲ್ಲಿತ್ಯಾಜ್ಯವನ್ನು ತೆರವುಗೊಳಿಸಿ ಆ ಜಾಗದಲ್ಲಿ ಶಾಸಕರಾದ ಸ್ವರೂಪ್ ಪ್ರಕಾಶ್ ಚಾಲನೆ ನೀಡಿದ್ದಾರೆ.ಈ ವೇಳೆಯಲ್ಲಿ ಮಹಾನಗರಪಾಲಿಕೆ ಮಹಾಪೌರರಾದಗಿರೀಶ್‌ಚನ್ನವೀರಪ್ಪ, ರಾಷ್ಟ್ರ ಪ್ರಶಸ್ತಿ ವಿಜೇತರಾದ ಬಿ. ಟಿ ಮಾನವ ಹಾಗೂ ಮಹಾ ನಗರ ಪಾಲಿಕೆ ಆರೋಗ್ಯ ನಿರೀಕ್ಷಕರಾದ ತುಳಸಿ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ದುದ್ದ ಗ್ರಾಮದ ಸಾರ್ವಜನಿಕರಿಗೆಎಚ್ಚರಿಕೆ

**ಹಾಸನ :** ದುದ್ದಗ್ರಾಮದಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ 220 ಕೆ.ವಿ ದುದ್ದ ವಿದ್ಯುತ್ ಸ್ವೀಕರಣಾ ಕೇಂದ್ರ ಹಾಗೂ 220ಕೆ.ವಿ ಮತ್ತು 66 ಕೆ.ವಿ ವಿದ್ಯುತ್ ಮಾರ್ಗಗಳಾದ 1. ಹಾಲಿ ಇರುವ 220ಕೆ.ವಿ ಎಮ್1 & ಎಮ್2 ವಿದ್ಯುತ್ ಮಾರ್ಗದಿಂದ ಉದ್ದೇಶಿತ ದುದ್ದ 220ಕೆ.ವಿ ಸ್ವೀಕರಣಾ ಕೇಂದ್ರಕ್ಕೆ 3.57 ಕಿ.ಮೀ ವಿದ್ಯುತ್ ಮಾರ್ಗವನ್ನು ಸಂಪರ್ಕಿಸುವಕಾಮಗಾರಿ, 2. 220 ಕೆ.ವಿ ವಿದ್ಯುತ್ ಸ್ವೀಕರಣಾ ಕೇಂದ್ರದಿಂದ 66 ಕೆ.ವಿ ದುದ್ದ ವಿದ್ಯುತ್ ವಿತರಣಾಕೇಂದ್ರಕ್ಕೆ ಸಂಪರ್ಕಿಸುವ ವಿದ್ಯುತ್ ಮಾರ್ಗವನ್ನು ಸುಮಾರು 0.216 ಕಿ.ಮೀ ನಿರ್ಮಿಸುವಕಾಮಗಾರಿ, 3. 220 ಕೆ.ವಿ ದುದ್ದ ಸ್ವೀಕರಣಾ ಕೇಂದ್ರದಿಂದ ಹಾಲಿ ದುದ್ದ, ಬಸವಘಟ್ಟ 66 ಕೆ.ವಿ ವಿದ್ಯುತ್ ಮಾರ್ಗಕ್ಕೆ ಸಂಪರ್ಕಿಸುವ 0.150 ಕಿ.ಮೀ ವಿದ್ಯುತ್ ಮಾರ್ಗದಕಾಮಗಾರಿಯು ಮುಕ್ತಾಯಗೊಂಡಿದ್ದುಅ.27 ರಂದುಅಥವಾ ನಂತರದದಿನಗಳಲ್ಲಿ 66 ಕೆ.ವಿ ವಿದ್ಯುತ್‌ನ್ನು ಹರಿಸಲಾಗುವುದು.

ಆದ್ದರಿಂದ ಸಾರ್ವಜನಿಕರು ಈ ಮಾರ್ಗದ ವಿದ್ಯುತ್‌ಗೋಪುರವನ್ನು ಹತ್ತುವುದಾಗಲಿ, ಅವುಗಳಿಗೆ ದನ–ಕರುಗಳನ್ನು ಕಟ್ಟುವುದಾಗಲಿ, ಹಸಿರು ಬಳ್ಳಿ ಅಥವಾ ಲೋಹದ ತಂತಿಗಳನ್ನು ಎಸೆಯುವುದಾಗಲಿ ಮಾಡಬಾರದು. ಇದರಿಂದ ಸಾರ್ವಜನಿಕರ ಆಸ್ತಿ–ಪಾಸ್ತಿ ಮತ್ತು ಪ್ರಾಣಕ್ಕೆ ಹಾನಿಯಾಗುವಸಂಭವವಿರುತ್ತದೆ. ಮೇಲೆ ತಿಳಿಸಿರುವ ಯಾವುದೇತರಹದ ದುಷ್ಕೃತ್ಯಗಳಿಗೆ ಒಳಗೊಂಡ ಅಪಘಾತಅಥವಾ ಹಾನಿ ಸಂಭವಿಸಿದರೆ ಅವರೇಜವಾಬ್ದಾರರಾಗಿರುತ್ತಾರೆ ಹಾಗೂ ವಿದ್ಯುತ್ ಮಾರ್ಗದ 18 ಮೀಟರ್‌ಕಾರಿಡಾರ್‌ಅಡಿಯಲ್ಲಿಂ ಮಾವುದೇರೀತಿಯ ಕಟ್ಟಡಗಳನ್ನು ಕಟ್ಟುವುದಾಗಲಿ ಅಥವಾ ಮರಗಳನ್ನು ಬೆಳೆಸುವುದಾಗಲಿ ಮಾಡಬಾರದುಎಂದು ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುತ್ತಿದ್ದೇವೆ. ಸಾರ್ವಜನಿಕರ ಬೇಜವಾಬ್ದಾರಿಯಿಂದ ಆಗುವ ಅನಾಹುತಗಳಿಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವುಜವಾಬ್ದಾರಿಯಾಗಿರುವುದಿಲ್ಲಎಂದು ಕವಿಪ್ರನಿನಿ, ಹಾಸನ ಯೋಜನೆಗಳ ವಿಭಾಗದಕಾರ್ಯನಿರ್ವಾಹಕಇಂಜಿನಿಯರ್(ವಿ) ತಿಳಿಸಿದ್ದಾರೆ.

# ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆ

**ಚಿಕ್ಕಮಗಳೂರು:** ಜಿಲ್ಲೆಯ ಚಿಕ್ಕಮಗಳೂರು ತರೀಕೆರೆ ಮತ್ತು ನ.ರಾ.ಪುರ ತಾಲ್ಲೂಕುಗಳಲ್ಲಿರುವ ಗ್ರಾಮ ಪಂಚಾಯಿತಿಗಳಲ್ಲಿ ಗೌರವಧನದ ಆಧಾರದ ಮೇಲೆ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆಗೆ ವಿಕಲಚೇತನರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಯನ್ನು ಸಲ್ಲಿಸಬಯಸುವವರು ಆಯಾ ತಾಲ್ಲೂಕಿನ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರಿಂದ ಪಡೆದ ಅರ್ಜಿಯನ್ನು ಭರ್ತಿ ಮಾಡಿ ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಪ್ರತಿ, ವಾಸಸ್ಥಳ ದೃಢೀಕರಣ ಪತ್ರ, ವಿಶಿಷ್ಟ ಗುರುತಿನ ಚೀಟಿ (ಯು.ಡಿ.ಐ.ಡಿ ಕಾರ್ಡ್), ಆಧಾರ್ ಕಾರ್ಡ್ ಪ್ರತಿ, ಜಾತಿ ಮತ್ತು ಆದಾಯ ದೃಢೀಕರಣ ಪತ್ರ, ಪಡಿತರ ಚೀಟಿಗಳ ಜೆರಾಕ್ಸ್ ಪ್ರತಿ ಮತ್ತು ಪಾಸ್ ಪೋರ್ಟ್ ಅಳತೆಯ ಎರಡು ಭಾವಚಿತ್ರಗಳನ್ನು ಲಗತ್ತಿಸಿ ನವೆಂಬರ್ 27 ರೊಳಗೆ ಸಲ್ಲಿಸುವಂತೆ ಕೋರಲಾಗಿದೆ.

ಚಿಕ್ಕಮಗಳೂರು ತಾಲ್ಲೂಕಿನಲ್ಲಿ ಮುಗುಳವಳ್ಳಿ, ಹಿರೇಕೊಳಲೆ ಹಾಗೂ ದಾಸರಹಳ್ಳಿ ಗ್ರಾಮ ಪಂಚಾಯಿತಿಗಳಿಗೆ ಮೂರು, ತರೀಕೆರೆ ತಾಲ್ಲೂಕಿನ ಧೋರನಾಳು ಗ್ರಾಮ ಪಂಚಾಯಿತಿಯಲ್ಲಿ ಎರಡು ಹಾಗೂ ನ.ರಾ.ಪುರ ತಾಲ್ಲೂಕಿನ ಕಾನೂರು ಗ್ರಾಮ ಪಂಚಾಯಿತಿಯಲ್ಲಿ ಒಂದು ಹುದ್ದೆ ಖಾಲಿ ಇದೆ.

ಹೆಚ್ಚಿನ ಮಾಹಿತಿಗೆ ನಗರದ ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳ ಕಚೇರಿ (ದೂರವಾಣಿ ಸಂಖ್ಯೆ: 08262–228171) ಅಥವಾ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರಾದ ಚಿಕ್ಕಮಗಳೂರಿನ ಕೆ.ಎಸ್.ಮೋಹನ್ ಗೌಡ (81059898820), ಎನ್.ಆರ್.ಪುರ ತಾಲ್ಲೂಕಿನ ಜೆಸ್ಮಿನ್ ಫ್ರಾನ್ಸಿಸ್, (7899778903) ಹಾಗೂ ತರೀಕೆರೆ ತಾಲ್ಲೂಕಿನ ಅಕ್ರಂಬಾಷಾ (9632503867) ಇವರುಗಳಿಗೆ ಅರ್ಜಿಯನ್ನು ಸಲ್ಲಿಸಲು ಜಿಲ್ಲಾ ವಿಕಲ ಚೇತನರ ಕಲ್ಯಾಣಾಧಿಕಾರಿಗಳು ಕೋರಿದ್ದಾರೆ.

# ಬೋಧಕರ ತರಬೇತಿ ಕಾರ್ಯಾಗಾರ

**ಚಿಕ್ಕಬಳ್ಳಾಪುರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತ ಮತ್ತು ಜೀವನೋಪಾಯ ಇಲಾಖೆ, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ಮತ್ತು ಭಾರತ ರತ್ನ ಸರ್.ಎಂ. ವಿಶ್ವೇಶ್ವರಯ್ಯ ಸರ್ವರ ರಾಷ್ಟ್ರೀಯ ಕೌಶಲ್ಯ ತರಬೇತಿ ಸೌಕರ್ಯ ಸಂಸ್ಥೆ, ಚಿಕ್ಕಬಳ್ಳಾಪುರ ಜಿಲ್ಲೆ ಇವರ ಸಂಯುಕ್ತ ಆಶ್ರಯದಲ್ಲಿ "ಬೋಧಕರ ತರಬೇತಿ ಕಾರ್ಯಗಾರ"ವನ್ನು ಅಕ್ಟೋಬರ್ 29 ರಂದು ಬೆಳಿಗ್ಗೆ 10:30 ಗಂಟೆಗೆ ಚಿಕ್ಕಬಳ್ಳಾಪುರ ತಾಲ್ಲೂಕಿನ ಅಂಗಟ್ಟ ಗ್ರಾಮದ ಭಾರತ ರತ್ನ ಸರ್.ಎಂ. ವಿಶ್ವೇಶ್ವರಯ್ಯ ಸರ್ವರ ರಾಷ್ಟ್ರೀಯ ಕೌಶಲ್ಯ ತರಬೇತಿ ಸೌಕರ್ಯ ಸಂಸ್ಥೆಯಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮದ ಘನ ಉಪಸ್ಥಿತಿ ಉನ್ನತ ಶಿಕ್ಷಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ.ಸಿ. ಸುಧಾಕರ್ ರವರು ನೆರವೇರಿಸಲಿದ್ದಾರೆ.

ಕಾರ್ಯಕ್ರಮದ ಉದ್ಘಾಟನೆಯನ್ನು ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವ ಡಾ॥ ಶರಣ ಪ್ರಕಾಶ ರುದ್ರಪ್ಪ ಪಾಟೀಲ್ ರವರು ನೆರವೇರಿಸಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಶಾಸಕರಾದ ಪ್ರದೀಪ್ ಈಶ್ವರ್ ರವರು ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಕೆ.ಸುಧಾಕರ್, ಕೋಲಾರ ಲೋಕಸಭಾ ಕ್ಷೇತ್ರದ ಸಂಸದರಾದ ಎಂ.ಮಲ್ಲೇಶ್ ಬಾಬು, ಶಾಸಕರುಗಳಾದ ಎಸ್.ಎನ್. ಸುಬ್ಬಾರೆಡ್ಡಿ, ಬಿ.ಎನ್. ರವಿಕುಮಾರ್, ಕೆ.ಹೆಚ್. ಪುಟ್ಟಸ್ವಾಮಿಗೌಡ, ವಿಧಾನ ಪರಿಷತ್ತು ಶಾಸಕರಾದ ಚಿದಾನಂದ ಎಂ. ಗೌಡ, ಎಂ.ಎಲ್.ಅನಿಲ್ ಕುಮಾರ್, ಡಿ.ಟಿ. ಶ್ರೀನಿವಾಸ, ಡಾ. ಹೆಚ್.ನರಸಿಂಹಯ್ಯ ವಿಜ್ಞಾನ ಶೈಕ್ಷಣಿಕ ಸಾಂಸ್ಕೃತಿಕ ಮತ್ತು ಪ್ರವಾಸೋದ್ಯಮ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎನ್.ಹೆಚ್ ಶಿವಶಂಕರರೆಡ್ಡಿ, ಕೌಶಲ್ಯಾಭಿವೃದ್ಧಿ ನಿಗಮದ ಅಧ್ಯಕ್ಷ ಶಿವಕಾಂತಮ್ಮ (ಕಾಂತಾ) ನಾಯಕ್, ಚಿಕ್ಕಬಳ್ಳಾಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೆ.ಎನ್. ಕೇಶವರೆಡ್ಡಿ, ಕರ್ನಾಟಕ ಜಾನಪದ ಅಕಾಡೆಮಿಯ ಅಧ್ಯಕ್ಷ ಗೊಲ್ಲಹಳ್ಳಿ ಶಿವಪ್ರಸಾದ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎನ್. ರಮೇಶ್, ಕುಪ್ಪಹಳ್ಳಿ ಗ್ರಾಮ ಪಂಚಾಯಿತಿಯ ಅಧ್ಯಕ್ಷ ಬಾಲಮ್ಮ ರವರು ಭಾಗವಹಿಸಲಿದ್ದಾರೆ.

ಅತಿಥಿಗಳಾಗಿ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಶಾಲಿನಿ ರಜನೀಶ್, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರಾದ ಉಮಾ ಮಹಾದೇವನ್, ವಿದ್ಯುನ್ಮಾನ ಮಾಹಿತಿ ತಂತ್ರಜ್ಞಾನ ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಮತ್ತು ಜಿಲ್ಲಾ ಪಂಚಾಯತ್ ಆಡಳಿತಾಧಿಕಾರಿಗಳಾದ ಡಾ. ಎನ್.ಮಂಜುಳ, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಮನೋಜ ಕುಮಾರ ಮೀನಾ, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಆಯುಕ್ತರಾದ ಡಾ. ರಾಗಪ್ರಿಯ .ಆರ್ ರವರು ಭಾಗವಹಿಸುವರು.

ಜಿಲ್ಲೆಯ ಎಲ್ಲಾ ಚುನಾಯಿತ ಪ್ರತಿನಿಧಿಗಳು, ಸರ್ಕಾರಿ ನೌಕರರ ಸಂಘ ಹಾಗೂ ಇತರೆ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಮತ್ತು ಸಮಸ್ತ ನಾಗರಿಕರು ಭಾಗವಹಿಸಲಿದ್ದಾರೆ.

# ಪೌರ ಕಾರ್ಮಿಕರ ಆರೋಗ್ಯ ತಪಾಸಣೆಗೆ ಕ್ರಮವಹಿಸುವಂತೆ ಸೂಚನೆ

**ಹಾಸನ :** ಪೌರಕಾರ್ಮಿಕರಿಗೆ ವಿಶ್ರಾಂತಿ ಗೃಹ ಸೌಲಭ್ಯ ಕಲ್ಪಿಸುವುದರ ಜೊತೆಗೆ ಆರೋಗ್ಯ ತಪಾಸಣೆಗೆ ಕ್ರಮವಹಿಸುವಂತೆ ಅಪರ ಜಿಲ್ಲಾಧಿಕಾರಿ ಮಂಜುನಾಥ್ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.




ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ನಡೆದ ಮ್ಯಾನ್ಯುವಲ್ ಸ್ಕ್ಯಾವೆಂಜರ್ ಗಳ ನಿಯೋಜನೆ ನಿಷೇಧ ಮತ್ತು ಅದರ ಪುನರ್ವಸತಿ ಅಧಿನಿಯಮ 2013 ರನ್ವಯ ಜಿಲ್ಲಾ ಮಟ್ಟದ ಜಾಗೃತಿ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಪೌರಕಾರ್ಮಿಕರಿಗೆ ಬೆಳಗಿನ ಉಪಹಾರ ಮತ್ತು ಸುರಕ್ಷತಾ ಪರಿಕರಗಳನ್ನು ಒದಗಿಸಲು ಕ್ರಮ ಕೈಗೊಳ್ಳುವಂತೆ ತಿಳಿಸಿದರು.

ಪೌರಕಾರ್ಮಿಕರಿಗೆಗೃಹ ಭಾಗ್ಯ ಯೋಜನೆಯಡಿ ನಿವೇಶನ ಹಂಚಿಕೆಗೆ ಸಂಬಂಧಿಸಿದಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.ಪೌರ ಕಾರ್ಮಿಕರಿಗೆ ಇ.ಪಿ.ಎಫ್ ಮತ್ತು ಪಿ.ಎಫ್. ಹಣ ಪಾವತಿ ಆಗುತ್ತಿರುವ ಬಗ್ಗೆ ಪರಿಶೀಲನೆ ಮಾಡುವಂತೆ ಸೂಚಿಸಿದರು.

ಪೌರ ಕಾರ್ಮಿಕರಿಗೆ ಸುರಕ್ಷಾ ಪರಿಕರಗಳನ್ನು ನೀಡಲಾಗಿದೆಯಾ ಅವುಗಳ ಬಳಕೆ ಮಾಡುತ್ತಿರುವ ಬಗ್ಗೆ ಪರಿಶೀಲನೆ ಮಾಡಲು ಸೂಚಿಸಿದರಲ್ಲದೆ, ವರ್ಷಕ್ಕೆ ಮೂರು ಬಾರಿ ಸುರಕ್ಷಾ ಪರಿಕರಗಳನ್ನು ನೀಡುವಂತೆ ತಿಳಿಸಿದರು. ನಗರಗಳಲ್ಲಿ ಸ್ವಚ್ಚತೆ ಕಾಪಾಡಲು ನಿಗಾವಹಿಸುವಂತೆ ಅಧಿಕಾರಿಗಳಿಗೆ ಸ್ರಚಿಸಿದರು.

ಸಭೆಯಲ್ಲಿ ಸಮಿತಿ ಸದಸ್ಯರಾದ ಶ್ರೀನಿವಾಸ್, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರಾದ ದೂದ್ ಫೀರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಅನಿಲ್, ಮತ್ತಿತರರು ಹಾಜರಿದ್ದರು.

# ಜಿಲ್ಲಾಡಳಿತದಿಂದ ಯುವ ಜನೋತ್ಸವ ಕಾರ್ಯಕ್ರಮ

**ಚಿಕ್ಕಬಳ್ಳಾಪುರ:** ಯುವ ಜನರಲ್ಲಿ ಯೋಜನಾ ಸಹಿತ ಉತ್ತಮ ಗುರಿ ಇರಬೇಕು. ಅದಕ್ಕೆ ತಕ್ಕಂತೆ ಕಾರ್ಯನಿರ್ವಹಿಸಿದರೆ ಬದುಕಿನಲ್ಲಿ ತಮ್ಮ ಕನಸನ್ನು ನನಸು ಮಾಡಿಕೊಳ್ಳಬಹುದು ಎಂದು ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ ಅವರು ತಿಳಿಸಿದರು.




ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಮೇರಾ ಯುವ ಭಾರತ್, ಚಿಕ್ಕಬಳ್ಳಾಪುರ, ರಾಷ್ಟ್ರೀಯ ಸೇವಾ ಯೋಜನೆ, ಭಾರತ್ ಸೌಟ್ಸ್ & ಗೈಡ್ಸ್ ಚಿಕ್ಕಬಳ್ಳಾಪುರ ಇವರ ಸಂಯುಕ್ತಾಶ್ರಯದಲ್ಲಿ ಸರ್. ಎಂ. ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಯುವ ಜನೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ಯುವ ಸಮೂಹ ತಮ್ಮ ಬದುಕಿಗೆ ಒಳಿತಾಗುವಂತಹ ವಿದ್ಯಾಭ್ಯಾಸ ಪಡೆಯುವ ಜೊತೆಗೆ ಕ್ರೀಡೆ, ಜಾನಪದ, ಗಾಯನ, ನೃತ್ಯ,ಕಥೆ ವಿಮರ್ಶೆ ಸೇರಿದಂತೆ ಇತರ ಸ್ಪರ್ಧೆಗಳಲ್ಲಿ ಭಾಗವಹಿಸಬೇಕು. ಇವು ನಮ್ಮ ಒತ್ತಡವನ್ನು ತಗ್ಗಿಸುವ ಜೊತೆಗೆ ಮಾನಸಿಕವಾಗಿ ಮತ್ತಷ್ಟು ಸದೃಢಗೊಳಿಸುತ್ತವೆ, ಪ್ರಪಂಚದಾದ್ಯಂತ ಅಭಿವೃದ್ಧಿ ಹೊಂದುತ್ತಿರುವ ದೇಶಗಳಲ್ಲಿ ಭಾರತವು ಹೆಚ್ಚು ಯುವಜನತೆಯನ್ನು ಹೊಂದಿದೆ.ಇಂತಹ ಬೃಹತ್ ಸಮೂಹ ತಮ್ಮ ಕಲಾ ಪ್ರತಿಭೆಗಳನ್ನು ಪ್ರದರ್ಶಿಸಲು ಸರ್ಕಾರ ರೂಪಿಸಿರುವ ಯುವ ಜನೋತ್ಸವ ಅತ್ಯಂತ ಅನುಕೂಲವಾಗಿವೆ. ಯುವ ಜನಾಂಗ ಉತ್ಸಾಹದಿಂದ ಇದರಲ್ಲಿ ಭಾಗವಹಿಸಬೇಕು. ತಮ್ಮ ಪ್ರತಿಭೆ ಪ್ರದರ್ಶಿಸಿ ಇತರರಿಗೂ ಪ್ರೇರಣಾದಾಯಕರಾಗಬೇಕು. ರಾಷ್ಟ್ರ ನಿರ್ಮಾಣದಲ್ಲಿ ಯುವ ಸಮೂಹ ತೊಡಗಿಸಿಕೊಳ್ಳುವುದಲ್ಲದೆ, ಮಾದಕ ಪದಾರ್ಥಗಳ ಸೇವನೆಗೆ ಮಾರುಹೋಗದೆ ಬದುಕಿನಲ್ಲಿ ಉತ್ತಮ ಸಾಧನೆ ಮಾಡಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಸಹಾಯಕ ಕಾರ್ಯದರ್ಶಿ ಮುನಿರಾಜು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕಿ ಕೆ.ಆರ್. ಜಯಲಕ್ಷ್ಮೀಬಾಯಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ಜುಂಜಣ್ಣ, ಕ್ರೀಡಾ ಪಟು ಮಂಚನಬೆಲೆ ಶ್ರೀನಿವಾಸ್ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಆಳಂದ ಕ್ಷೇತ್ರದಲ್ಲಿ ನಡೆದಿದೆ ಎನ್ನಲಾದ ಮತಗಳವು ಪ್ರಕರಣ ತನಿಖೆ ಚುರುಕು

**ಬೆಂಗಳೂರು:** ಕಲಬುರಗಿ ಜಿಲ್ಲೆಯ ಆಳಂದ ಕ್ಷೇತ್ರದಲ್ಲಿ ನಡೆದಿದೆ ಎನ್ನಲಾದ ಮತಗಳ್ಳತನ ಆರೋಪ ಕುರಿತ ತನಿಖೆ ವೇಗ ಪಡೆದುಕೊಂಡಿದೆ.ಪ್ರಕರಣದ ಆರೋಪಿಗಳೆಂದು ಗುರುತಿಸಲಾಗಿರುವ ಅಕ್ರಮ್, ಅಶ್ಫಾಕ್, ನದೀಮ್ ಮತ್ತು ಮುಷ್ತಾಕ್ ಮತಗಳ್ಳತನ ಕ್ಕಂದೇ ಕಾಲ್ ಸೆಂಟರ್ ಸ್ಥಾಪಿಸಿದ್ದು, ಈ ಸೆಂಟರ್‌ನಲ್ಲಿ ಐದು ಕಂಪ್ಯೂಟರ್ ಇರಿಸಿಕೊಂಡು 6,018 ಫಾರ್ಮ್ 7 ಅರ್ಜಿಗಳನ್ನು ಸ್ವೀಕರಿಸಿದ್ದರು.

ಈ ನಾಲ್ವರಲ್ಲಿ ಒಬ್ಬ ಆನ್‌ಲೈನ್ ರಾಜಕೀಯ ಸರ್ವೇಯರ್/ಮ್ಯಾನಿಪ್ಯುಲೇಟರ್, ಒಬ್ಬ ಡೇಟಾ ಆಪರೇಟರ್ ಮತ್ತು ಮತ್ತಿಬ್ಬರು ಆನ್‌ಲೈನ್ ಅರ್ಜಿಗಳನ್ನು ಸಲ್ಲಿಸುವಲ್ಲಿ ಪರಿಣತರಾಗಿದ್ದರು. ಆರೋಪಿಗಳು 6,018 ಅರ್ಜಿಗಳಿಗೆ ಲಾಗಿನ್ ಐಡಿಗಳನ್ನು ರಚಿಸಲು ದುರ್ಬಲ ವರ್ಗಗಳ 75 ಮಂದಿ ಮೊಬೈಲ್ ಸಂಖ್ಯೆಗಳನ್ನು ಬಳಸಿದ್ದಾರೆಂದು ಎಸ್‌ಐಟಿ ಮೂಲಗಳು ಮಾಹಿತಿ ನೀಡಿದೆ.

ಒಟಿಪಿ ಮೂಲಕ ಲಾಗಿನ್ ಐಡಿ ರಚಿಸಲಾಗಿದೆ. ಆರೋಪಿಗಳು 75 ಮೊಬೈಲ್ ಫೋನ್ ಸಂಖ್ಯೆಗಳನ್ನು ಹೇಗೆ ಪಡೆದರು? ಮೊಬೈಲ್ ಸಂಖ್ಯೆಗಳನ್ನು ಹ್ಯಾಕ್ ಮಾಡಿದ್ದರೇ? ಎಂಬುದರ ಕುರಿತು ವಿಚಾರಣೆ ನಡೆಸುತ್ತಿದೆ.ಪ್ರಕರಣದ ತನಿಖೆ ನಡೆಸುತ್ತಿರುವ ಎಸ್‌ಐಟಿ ಈಗಾಗಲೇ ಅಕ್ರಮ್, ನದೀಮ್ ಹಾಗೂ ಮುಷ್ತಾಕ್‌ನನ್ನು ವಿಚಾರಣೆ ನಡೆಸಿದ್ದು, ಮತ್ತೊಬ್ಬ ಆರೋಪಿಯ ಪತ್ತೆಗೆ ದುಬೈಗೆ ತೆರಳಲು ಸಿದ್ಧತೆ ನಡೆಸಿದೆ.

ಈ ವಂಚನೆ ಪ್ರಕರಣದಲ್ಲಿ ನಾಲ್ವರು ಆರೋಪಿಗಳು ಪ್ರಮುಖ ಪಾತ್ರ ವಹಿಸಿದ್ದಾರೆ. ಅರ್ಜಿಗಳ ಸಲ್ಲಿಕೆಗೆ ಡೇಟಾ ಆಪರೇಟರ್ ಅನ್ನು ಬಳಸಲಾಗಿದೆ. ನಂತರ ಈತ ನಾಲ್ವರ ಸಹಾಯ ಪಡೆದುಕೊಂಡಿದ್ದಾನೆ. ಈ ನಾಲ್ವರು ನಿರುದ್ಯೋಗಿಗಳಾಗಿದ್ದು, 25–30 ವರ್ಷ ವಯಸ್ಸಿನವರಾಗಿದ್ದಾರೆ. ನಾಲ್ವರು ಆರೋಪಿಗಳಿಗೆ ಪ್ರತಿ ಅರ್ಜಿಗೆ 80 ರೂ. ಪಾವತಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

2023ರ ಚುನಾವಣೆಗೂ ಮುನ್ನ ಆಳಂದ ವಿಧಾನಸಭಾ ಕ್ಷೇತ್ರದ ಮತದಾರರ ಪಟ್ಟಿಯಿಂದ ಅಕ್ರಮವಾಗಿ ಹೆಸರುಗಳನ್ನು ಅಳಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಶೇಷ ತನಿಖಾ ತಂಡ (ಎಸ್‌ಐಟಿ). ನಾಲ್ವರು ಡೇಟಾ ಸೆಂಟರ್ ನಿರ್ವಾಹಕರನ್ನು ಬಂಧನಕ್ಕೊಳಪಡಿಸಿದ್ದು, ವಿಚಾರಣೆಗೊಳಪಡಿಸಿತ್ತು.

ಒಂದು ವಾರದ ಹಿಂದೆ ಎಸ್‌ಐಟಿ ಅಧಿಕಾರಿಗಳು ಈ ನಾಲ್ವರ ಮನೆಗಳ ಮೇಲೆ ದಾಳಿ ನಡೆಸಿ, ಏಳು ಲ್ಯಾಪ್‌ಟಾಪ್‌ಗಳು ಮತ್ತು 15 ಮೊಬೈಲ್ ಫೋನ್‌ಗಳನ್ನು ವಶಪಡಿಸಿಕೊಂಡಿತ್ತು.

ಡೇಟಾ ಸೆಂಟರ್ ನಿರ್ವಾಹಕರಿಗೆ ಪ್ರತಿ ಫಾರ್ಮ್ 7 ಅರ್ಜಿಗೆ (ಮತದಾರರ ಪಟ್ಟಿಯಿಂದ ಮತದಾರರ ಹೆಸರುಗಳನ್ನು ಅಳಿಸಲು) 80 ರೂ. ಪಾವತಿಸಲಾಗಿದೆ ಎಂಬ ಆರೋಪಗಳ ಕುರಿತು ಎಸ್‌ಐಟಿ ತನಿಖೆ ನಡೆಸುತ್ತಿದೆ.

ಡಿಸೆಂಬರ್ 2022 ಮತ್ತು ಫೆಬ್ರವರಿ 2023ರ ನಡುವೆ ಒಟ್ಟು 6,018 ಅರ್ಜಿಗಳನ್ನು ಸಲ್ಲಿಸಲಾಗಿದ್ದು, ಒಟ್ಟು 4.8 ಲಕ್ಷ ರೂ. ಪಾವತಿಯಾಗಿದೆ ಎಂದು ತಿಳಿದುಬಂದಿದೆ. ಆಳಂದ ಶಾಸಕ ಮತ್ತು ರಾಜ್ಯ ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್.ಪಾಟೀಲ್ ಅವರು 2023ರಲ್ಲಿ ದೂರು ನೀಡಿದ ನಂತರ ರಾಜ್ಯ ಪೊಲೀಸರು ಈ ಸಂಬಂಧ ಎಫ್‌ಐಆರ್ ದಾಖಲಿಸಿಕೊಂಡಿದ್ದರು. ಸೆಪ್ಟೆಂಬರ್‌ನಲ್ಲಿ ಸಿಐಡಿ(ಅಪರಾಧ ತನಿಖಾ ಇಲಾಖೆ) ತನಿಖೆ ವಹಿಸಿಕೊಂಡಿತ್ತು.

ಈ ನಡುವೆ ಎಸ್‌ಐಟಿ ತನಿಖೆಯನ್ನು ವಹಿಸಿಕೊಂಡ ಕೆಲವೇ ದಿನಗಳಲ್ಲಿ ಮಾಜಿ ಶಾಸಕ ಸುಭಾಷ್ ಗುತ್ತೇದಾರ್ ಅವರ ನಿವಾಸದ ಬಳಿ ಮತದಾರರ ಸುಟ್ಟ ದಾಖಲೆಗಳ ರಾಶಿ ಪತ್ತೆಯಾಗಿತ್ತು. ಅಶ್ಫಾಕ್ ತನ್ನ ಸಹಚರರಾದ ಮೊಹಮದ್ ಅಕ್ರಂ ಮತ್ತು ಇತರ ಮೂವರೊಂದಿಗೆ ಸಂಪರ್ಕದಲ್ಲಿದ್ದಾನೆ ಎಂಬುದನ್ನು ಎಸ್‌ಐಟಿ ಪತ್ತೆ ಮಾಡಿದ್ದು, ಈ ಕುರಿತು ತನಿಖೆ ನಡೆಸಲು ಎಸ್‌ಐಟಿ ಸಿಐಡಿ ಸಹಾಯವನ್ನು ಪಡೆಯುತ್ತಿದೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಜನರನ್ನು ಎಸ್‌ಐಟಿ ವಿಚಾರಣೆ ನಡೆಸುವ ಸಾಧ್ಯತೆಯಿದೆ ಎಂದು ಮೂಲಗಳುತಿಳಿಸಿವೆ.

# ನ.4 ರಿಂದ ಭಾರತದ ಬಳಕೆದಾರರಿಗೆ ಒಂದು ವರ್ಷ ChatGPT Go ಉಚಿತ

**ನವದೆಹಲಿ:** ಇದೇ ನವೆಂಬರ್ 4 ರಿಂದ ಪ್ರಾರಂಭವಾಗುವ ಸೀಮಿತ ಸಮಯದ ಪ್ರಚಾರ ಅವಧಿಯಲ್ಲಿ ಸೈನ್ ಅಪ್ ಮಾಡುವ ಭಾರತದ ಬಳಕೆದಾರರಿಗೆ ಒಂದು ವರ್ಷದವರೆಗೆ ಉಚಿತವಾಗಿ ಚಾಟ್‌ಜಿಪಿಟಿ ಗೋ ಅನ್ನು ನೀಡುವುದಾಗಿ ಓಪನ್‌ಎಐ ಸಂಸ್ಥೆ ತಿಳಿಸಿದೆ.

ಚಾಟ್‌ಜಿಪಿಟಿ ಗೋ ಅನ್ನುವುದನ್ನು ಓಪನ್ ಎಐ ಇತ್ತೀಚೆಗೆ ಬಿಡುಗಡೆ ಮಾಡಿದ ಚಂದಾದಾರಿಕೆ ಶ್ರೇಣಿಯಾಗಿದ್ದು, ಇದು ಭಾರತದಲ್ಲಿ ಬಳಕೆದಾರರಿಗೆ ಹೆಚ್ಚಿದ ಸಂದೇಶ ಮಿತಿಗಳು, ಇಮೇಜ್ ಉತ್ಪಾದನೆ ಮತ್ತು ಫೈಲ್ ಅಪ್‌ಲೋಡ್‌ಗಳನ್ನು ನೀಡುತ್ತದೆ, ಈ ಮಾರುಕಟ್ಟೆ

ಚಾಟ್‌ಜಿಪಿಟಿಯನ್ನು ಅದರ ಎರಡನೇ ಅತಿದೊಡ್ಡ ಮತ್ತು ವೇಗವಾಗಿ ಬೆಳೆಯುತ್ತಿರುವ ಮಾರುಕಟ್ಟೆಗಳಲ್ಲಿ ಒಂದಾಗಿದೆ.

ನವೆಂಬರ್ 4 ರಂದು ಬೆಂಗಳೂರಿನಲ್ಲಿ ನಡೆಯಲಿರುವ ಓಪನ್ ಎಐನ ಡೇವ್ ಡೇ ಎಕ್ಸ್‌ಚೆಂಜ್ ಕಾರ್ಯಕ್ರಮವನ್ನು ಆಚರಿಸುತ್ತಿರುವುದು ಭಾರತದಲ್ಲಿ ಇದು ಮೊದಲನೆಯದು.ಚಾಟ್‌ಜಿಪಿಟಿ ನವೆಂಬರ್ 4 ರಿಂದ ಪ್ರಾರಂಭವಾಗುವ ಸೀಮಿತ ಸಮಯದ ಪ್ರಚಾರ ಅವಧಿಯಲ್ಲಿ ಸೈನ್ ಅಪ್ ಮಾಡುವ ಭಾರತದ ಎಲ್ಲಾ ಬಳಕೆದಾರರಿಗೆ ಚಾಟ್‌ಜಿಪಿಟಿ ಗೋ ಅನ್ನು ಒಂದು ಪೂರ್ಣ ವರ್ಷ ಉಚಿತವಾಗಿ ಲಭ್ಯವಾಗುವಂತೆ ಮಾಡುತ್ತಿದೆ ಎಂದು ಕಂಪನಿ ತಿಳಿಸಿದೆ.

ಚಾಟ್‌ಜಿಪಿಟಿ ಗೋ ಅನ್ನು ಆಗಸ್ಟ್‌ನಲ್ಲಿ ಭಾರತದಲ್ಲಿ ಪ್ರಾರಂಭಿಸಲಾಯಿತು, ಇದು ಅತ್ಯಂತ ಸುಧಾರಿತ ವೈಶಿಷ್ಟ್ಯಗಳಿಗೆ ಹೆಚ್ಚು ಕೈಗೆಟುಕುವ ಪ್ರವೇಶವನ್ನು ಕೋರುವ ಬಳಕೆದಾರರ ಪ್ರತಿಕ್ರಿಯೆಗೆ ಪ್ರತಿಕ್ರಿಯೆಯಾಗಿ ವಿನ್ಯಾಸಗೊಳಿಸಲಾಗಿದೆ.ಪ್ರಾರಂಭವಾದ ಮೊದಲ ತಿಂಗಳಲ್ಲಿ, ಭಾರತದಲ್ಲಿ ಪಾವತಿಸಿದ ಚಂದಾದಾರರ ಸಂಖ್ಯೆ ದ್ವಿಗುಣಗೊಂಡಿದೆ.

ಈ ಬಲವಾದ ಬೇಡಿಕೆಯ ಹಿನ್ನೆಲೆಯಲ್ಲಿ, ಓಪನ್‌ಎಐ ಅಂದಿನಿಂದ ಚಾಟ್‌ಜಿಪಿಟಿ ಗೋವನ್ನು ವಿಶ್ವಾದ್ಯಂತ ಸುಮಾರು 90 ಮಾರುಕಟ್ಟೆಗಳಿಗೆ ವಿಸ್ತರಿಸಿದೆ.ಭಾರತದಲ್ಲಿ ಲಕ್ಷಾಂತರ ಜನರು ಪ್ರತಿದಿನ ಚಾಟ್‌ಜಿಪಿಟಿಯನ್ನು ಬಳಸುತ್ತಾರೆ, ಈ ಬಲವಾದ ಬೇಡಿಕೆಯ ಹಿನ್ನೆಲೆಯಲ್ಲಿ, ಓಪನ್‌ಎಐ ಅಂದಿನಿಂದ ಚಾಟ್‌ಜಿಪಿಟಿ .ಭಾರತದಲ್ಲಿ ಲಕ್ಷಾಂತರ ಜನರು ಪ್ರತಿದಿನ ಚಾಟ್‌ಜಿಪಿಟಿಯನ್ನು ಬಳಸುತ್ತಾರೆ, ಈ ಬಲವಾದ ಬೇಡಿಕೆಯ ಹಿನ್ನೆಲೆಯಲ್ಲಿ, ಓಪನ್‌ಎಐ ಅಂದಿನಿಂದ ಚಾಟ್‌ಜಿಪಿಟಿ ಗೋವನ್ನು ವಿಶ್ವಾದ್ಯಂತ ಸುಮಾರು 90 ಮಾರುಕಟ್ಟೆಗಳಿಗೆ ವಿಸ್ತರಿಸಿದೆ.ಭಾರತದಲ್ಲಿ ಲಕ್ಷಾಂತರ ಜನರು ಪ್ರತಿದಿನ ಚಾಟ್‌ಜಿಪಿಟಿಯನ್ನು ಬಳಸುತ್ತಾರೆ, ಇದರಲ್ಲಿ ಓಪನ್‌ಎಐನ ಸುಧಾರಿತ ಪರಿಕರಗಳನ್ನು ಬಳಸಿಕೊಳ್ಳುತ್ತಿರುವ ಡೆವಲಪರ್‌ಗಳು, ವಿದ್ಯಾರ್ಥಿಗಳು ಮತ್ತು ವೃತ್ತಿಪರರ ವೇಗವಾಗಿ ಬೆಳೆಯುತ್ತಿರುವ ಸಮುದಾಯವೂ ಸೇರಿದೆ.

ಈ ಪ್ರಚಾರವು ಓಪನ್‌ಎಐನ ಇಂಡಿಯಾಫಸ್ಟ್ ಬದ್ಧತೆಯ ಮುಂದುವರಿಕೆಯಾಗಿದೆ ಮತ್ತು ಇಂಡಿಯಾಎಐ ಮಿಷನ್ ಅನ್ನು ಬೆಂಬಲಿಸುತ್ತದೆ,

ಮುಂದಿನ ವರ್ಷ ದೇಶವು ಇಂಪ್ಯಾಕ್ಟ್ ಶೃಂಗಸಭೆಯನ್ನು ಆಯೋಜಿಸಲು ತಯಾರಿ ನಡೆಸುತ್ತಿರುವಾಗ ಭಾರತದಲ್ಲಿ ಸುತ್ತ ಬೆಳೆಯುತ್ತಿರುವ ಆವೇಗವನ್ನು ಬಲಪಡಿಸುತ್ತದೆ ಎಂದು ಓಪನ್‌ಎಐ ಹೇಳಿಕೆಯಲ್ಲಿ ತಿಳಿಸಿದೆ.

ಭಾರತದಲ್ಲಿ ಅಸ್ತಿತ್ವದಲ್ಲಿರುವ ಚಾಟ್‌ಜಿಪಿಟಿ ಗೋ ಚಂದಾದಾರರು 12 ತಿಂಗಳ ಉಚಿತ ಪ್ರಚಾರಕ್ಕೆ ಅರ್ಹರಾಗಿರುತ್ತಾರೆ.ಕೆಲವು ತಿಂಗಳ ಹಿಂದೆ ಭಾರತದಲ್ಲಿ ಚಾಟ್‌ಜಿಪಿಟಿ ಗೋವನ್ನು

ಪ್ರಾರಂಭಿಸಿದಾಗಿನಿಂದ, ನಮ್ಮ ಬಳಕೆದಾರರಿಂದ ನಾವು ನೋಡಿದ ಅಳವಡಿಕೆ ಮತ್ತು ಸೃಜನಶೀಲತೆ ಸ್ಫೂರ್ತಿದಾಯಕವಾಗಿದೆ ಎಂದು ಚಾಟ್‌ಜಿಪಿಟಿಯ ಉಪಾಧ್ಯಕ್ಷ ಮತ್ತು ಮುಖ್ಯಸ್ಥ ನಿಕ್ ಟರ್ಲಿ ಹೇಳಿದರು.

ಭಾರತದಲ್ಲಿ ನಮ್ಮ ಮೊದಲ ಡೆವ್‌ಡೇ ಎಕ್ಸ್‌ಚೇಂಜ್ ಈವೆಂಟ್‌ಗೆ ಮುಂಚಿತವಾಗಿ, ಭಾರತದಾದ್ಯಂತ ಹೆಚ್ಚಿನ ಜನರು ಸುಧಾರಿತ ಅನ್ನು ಸುಲಭವಾಗಿ ಪ್ರವೇಶಿಸಲು ಮತ್ತು ಪ್ರಯೋಜನ ಪಡೆಯಲು ಸಹಾಯ ಮಾಡಲು ನಾವು ಒಂದು ವರ್ಷದವರೆಗೆ ಚಾಟ್‌ಜಿಪಿಟಿ ಗೋವನ್ನು ಉಚಿತವಾಗಿ ಲಭ್ಯವಾಗುವಂತೆ ಮಾಡುತ್ತಿದ್ದೇವೆ ಎಂದಿದ್ದಾರೆ.

# ಬೀದಿ ನಾಟಕ ಕಲಾ ತಂಡಗಳಿಗಾಗಿ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿ 2025–26ನೇ ಸಾಲಿನ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮ, ಯೋಜನೆಗಳ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಸಾಂಗ್ ಮತ್ತು ಡ್ರಾಮಾ ಡಿವಿಜನ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಜಿಲ್ಲಾ ನೋಂದಣಿ ಇಲಾಖೆಯಲ್ಲಿ ಹಾಗೂ ಯಾವುದಾದರೂ ಒಂದು ಇಲಾಖೆಯಲ್ಲಿ ನೊಂದಣಿಯಾಗಿರುವ ಮತ್ತು ಅನುಭವ ಪಡೆದಿರುವ ಕಲಾ ತಂಡಗಳ ಆಯ್ಕೆಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಕಲಾ ತಂಡದಲ್ಲಿ ಕನಿಷ್ಠ 8 ರಿಂದ 10 ಜನ ಕಲಾವಿದರು ಇರಬೇಕು. ಈ ಪೈಕಿ ಇಬ್ಬರು ಮಹಿಳಾ ಕಲಾವಿದರು ಕಡ್ಡಾಯ, ಕಲಾ ತಂಡದವರು ಜಿಲ್ಲೆಯವರಾಗಿದ್ದು, ಸಂಗೀತ ಸಲಕರಣೆ ಹಾಗೂ ಸಮವಸ್ತ್ರ ಹೊಂದಿರಬೇಕು. ಜಿಲ್ಲೆಗೆ ಒಟ್ಟು 6 ಕಲಾ ತಂಡ ಮಾತ್ರ ಆಯ್ಕೆ ಮಾಡಲಾಗುವುದು.

ಆಸಕ್ತ ಕಲಾ ತಂಡಗಳ ಸ್ವಯಂ ವಿವರವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯ ಐ.ಇ.ಸಿ ವಿಭಾಗಕ್ಕೆ ನವೆಂಬರ್ 6 ರಂದು ಸಂಜೆ 5 ಗಂಟೆಯೊಳಗೆ ಕಲಾ ತಂಡಗಳ ಸದಸ್ಯರ ವಿವರ, ಭಾವಚಿತ್ರ ಹಾಗೂ ಸಹಿಯೊಂದಿಗೆ ಸಲ್ಲಿಸುವುದು. ಅರ್ಜಿ ಸಲ್ಲಿಸಿದ ಕಲಾ ತಂಡಗಳಿಗೆ ನವೆಂಬರ್ 10 ರಂದು ಬೆಳಿಗ್ಗೆ 10:30 ಗಂಟೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಆವರಣದಲ್ಲಿ ಆಯ್ಕೆ ಪ್ರಕ್ರಿಯೆಯನ್ನು ಏರ್ಪಡಿಸಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮಹೇಶ್ ಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಯಂತಿಗಳ ಪೂರ್ವಭಾವಿ ಸಭೆ

**ಚಿಕ್ಕಬಳ್ಳಾಪುರ:** 2025–26ನೇ ಸಾಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನವೆಂಬರ್ 8 ರಂದು ಶ್ರೀ ಕನಕ ಜಯಂತಿ ಮತ್ತು ನವೆಂಬರ್ 11 ರಂದು ವೀರವನಿತೆ ಒನಕೆ ಓಬವ್ವ ಜಯಂತಿಯನ್ನು ಆಚರಿಸಲುವ ಸಲುವಾಗಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 28 ರಂದು ಸಂಜೆ 4 ಗಂಟೆಗೆ ಶ್ರೀ ಕನಕ ಜಯಂತಿಯ ಪೂರ್ವಭಾವಿ ಸಭೆಯನ್ನು ಹಾಗೂ 4:30 ಗಂಟೆಗೆ ವೀರವನಿತೆ ಒನಕೆ ಓಬವ್ವ ಜಯಂತಿಯ ಪೂರ್ವಭಾವಿ ಸಭೆಯನ್ನು ಜಿಲ್ಲಾಧಿಕಾರಿಗಳ ಕಚೇರಿಯ 2ನೇ ಮಹಡಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಸದರಿ ಸಭೆಗೆ ಎಲ್ಲಾ ಸಮುದಾಯದ ಸಂಘ–ಸಂಸ್ಥೆಗಳ ಮುಖಂಡರು, ಪದಾಧಿಕಾರಿಗಳು, ಸಾರ್ವಜನಿಕರು ಹಾಜರಾಗಿ ಸಲಹೆ ಮತ್ತು ಸೂಚನೆಗಳನ್ನು ನೀಡಬಹುದೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಿ.ಎಂ.ರವಿಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಪುಟ ಪುನಾರಚನೆಗೆ ಸಮ್ಮತಿಸಲಿದೆಯೇ 'ಕೈ'ಕಮಾಂಡ್..?

**ಬೆಂಗಳೂರು:** ರಾಜ್ಯ ರಾಜಕೀಯದಲ್ಲಿ ಯಾವುದೇ ರೀತಿಯ ಕ್ರಾಂತಿ ಇಲ್ಲವೆಂದು ಹೇಳು ತ್ತಿರುವ ನಡುವೆಯೇ ಮುಂದಿನ ಮುಖ್ಯಮಂತ್ರಿ ಹೆಸರಿನಲ್ಲಿ ಪರಸ್ಪರ ಘೋಷಣೆಗಳು ಕೇಳಿ ಬರುತ್ತಿವೆ.

ನಿನ್ನೆ ಆಹಾರ ನಾಗರಿಕ ಪೂರೈಕೆ ಸಚಿವ ಕೆ.ಎಚ್.ಮುನಿಯಪ್ಪ ಅವರನ್ನು ಭೇಟಿ ಮಾಡಿದ ಕಾರ್ಯಕರ್ತರು ಮುಂದಿನ ದಲಿತ ಮುಖ್ಯಮಂತ್ರಿ ಮುನಿಯಪ್ಪ ಎಂದು ಘೋಷಣೆ ಕೂಗಿದ್ದಾರೆ. ಇಂದು ಗೃಹ ಸಚಿವ ಡಾ.ಜಿ. ಪರಮೇಶ್ವರ್ ಅವರ ಬೆಂಬಲಿಗರು ಇದೇ ರೀತಿಯ ಘೋಷಣೆ ಮೊಳಗಿಸಿದ್ದಾರೆ. ಡಿ.ಕೆ.ಶಿವಕುಮಾರ್ ಅವರು ಹೋದ ಕಡೆಯಲೆಲ್ಲಾ ಮುಂದಿನ ಮುಖ್ಯಮಂತ್ರಿ

ಎಂದು ಘೋಷಣೆ ಕೂಗುವುದು ಸಾಮಾನ್ಯ.

ಈಗ ಸಂಪುಟದ ಇತರ ಸಚಿವರ ಹೆಸರಿನಲ್ಲೂ ಘೋಷಣೆಗಳು ಕೇಳಿಬರುತ್ತಿವೆ.

ಕಾಂಗ್ರೆಸ್‌ನಲ್ಲಿ ಎಲ್ಲವೂ ಸರಿಯಿದೆ. ಯಾವ ಕ್ರಾಂತಿಯೂ ಇಲ್ಲ ಎಂದು ಮುಖ್ಯಮಂತ್ರಿಯಾದಿಯಾಗಿ ಎಲ್ಲರೂ ಹೇಳಿಕೆ ನೀಡುತ್ತಿದ್ದಾರೆ. ಅದರ ನಡುವೆಯೂ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಸಿದ್ದರಾಮಯ್ಯ ಅವರ ಉತ್ತರಾಧಿಕಾರಿಯೆಂದು ಯತೀಂದ್ರ ಸಿದ್ದರಾಮಯ್ಯ ಹೇಳಿಕೆ ನೀಡಿದ್ದರು. ಅದು ಸಾಕಷ್ಟು ಚರ್ಚೆಗೆ ಗ್ರಾಸವಾಗಿತ್ತು.

ನವೆಂಬರ್‌ನಲ್ಲಿ ರಾಜಕೀಯ ಕ್ರಾಂತಿಯಾಗಲಿದೆ. ಸಚಿವ ಸಂಪುಟ ಪುನರ್‌ರಚನೆಯಾಗಿ 12 ಮಂದಿ ಅಧಿಕಾರ ಕಳೆದುಕೊಳ್ಳುತ್ತಾರೆ. ಹೊಸದಾಗಿ 12 ಮಂದಿ ಸಂಪುಟ ಸೇರುತ್ತಾರೆ ಎಂಬ ಚರ್ಚೆಗಳು ವ್ಯಾಪಕವಾಗಿವೆ. ಮತ್ತೊಂದೆಡೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಾಯಕತ್ವ ಬದಲಾಗಲಿದೆ. ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗುತ್ತಾರೆ ಎಂಬ ಚರ್ಚೆಗಳು ನಡೆಯುತ್ತಿವೆ.

ಈ ನಡುವೆ ಸಿದ್ದರಾಮಯ್ಯ ಅವರು ಸಚಿವರ ಜೊತೆ ನಡೆಸಿದ ಭೋಜನ ಕೂಟ ವ್ಯಾಪಕ ಚರ್ಚೆಗೆ ಗ್ರಾಸವಾಗಿತ್ತು. ಕನ್ನಡ ರಾಜ್ಯೋತ್ಸವದ ಅಂಗವಾಗಿ ನವೆಂಬರ್ 1 ರಂದು ಕರೆದಿರುವ ಔತಣ ಕೂಟವು ಕೂಡ ಕುತೂಹಲ ಕೆರಳಿಸಿದೆ.

ನವೆಂಬರ್ 5 ಮತ್ತು 6ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ದೆಹಲಿಗೆ ಭೇಟಿ ನೀಡಲಿದ್ದಾರೆ. ಅಲ್ಲಿ ವರಿಷ್ಠರ ಜೊತೆ ಮಹತ್ವದ ಚರ್ಚೆಗಳಾಗಿದ್ದು, ಸಂಪುಟ ಪುನರ್‌ರಚನೆ ಅಥವಾ ನಾಯಕತ್ವದ ಬದಲಾವಣೆ ಬಗ್ಗೆ ಹೈಕಮಾಂಡ್ ಸ್ಪಷ್ಟ ನಿಲುವು ತಿಳಿಸಲಿದೆ ಎಂದು ಹೇಳಲಾಗಿದೆ.

ಸಂಪುಟಕ್ಕೆ ಸೇರಲು ಹಲವಾರು ಮಂದಿ ಶಾಸಕರು ತುದಿಗಾಲ ಮೇಲೆ ನಿಂತಿದ್ದಾರೆ. ಸಿದ್ದರಾಮಯ್ಯ ಕೂಡ ಸಂಪುಟ ಪುನರ್‌ರಚಿಸಿ ಕೆಲವರಿಗೆ ಅವಕಾಶ ನೀಡುವ ಮೂಲಕ ಭಿನ್ನಮತವನ್ನು ತಣಿಸಲು ಆಸಕ್ತಿ ಹೊಂದಿದ್ದಾರೆ. ಆದರೆ ಅದಕ್ಕೆ ಡಿ.ಕೆ.ಶಿವಕುಮಾರ್ ಒಪ್ಪುತ್ತಿಲ್ಲ. ಡಿ.ಕೆ.ಶಿವಕುಮಾರ್ ಅವರ ಒತ್ತಡದಿಂದಾಗಿ ಹೈಕಮಾಂಡ್ ಕೂಡ ಸಂಪುಟ ಪುನರ್‌ರಚನೆಗೆ ಸಹಮತಿಸುತ್ತಿಲ್ಲ ಎಂದು ಚರ್ಚೆಗಳಿವೆ.

ಸಂಪುಟ ಪುನರ್‌ರಚನೆಯಾಗಿ ಹೊಸಬರಿಗೆ ಅವಕಾಶ ನೀಡದೆ, ಇರುವ ಸಚಿವರನ್ನೆ ಮುಂದುವರೆಸಿದರೆ ನಾಯಕತ್ವ ಬದಲಾವಣೆ ಬಗ್ಗೆ ಕೂಗು ಹೇಳಬಹುದು. ಇದು ಸಿದ್ದರಾಮಯ್ಯ ಅವರಿಗೆ ಇಕ್ಕಟ್ಟಿನ ಪರಿಸ್ಥಿತಿ ನಿರ್ಮಿಸುವುದಷ್ಟೆ ಅಲ್ಲದೇ ಪಕ್ಷದ ಏಕತೆಗೂ ಧಕ್ಕೆ ಉಂಟು ಮಾಡುವ ಸಾಧ್ಯತೆಗಳಿವೆ ಎಂಬ ವ್ಯಾಖ್ಯಾನಗಳಿವೆ.
ಸಂಪುಟ ಪುನರ್‌ರಚನೆಗೆ ಅನುಮತಿಸಬೇಕು ಎಂದು ಸಿದ್ದರಾಮಯ್ಯ ಹಲವು ಬಾರಿ ಹೈಕಮಾಂಡ್‌ಗೆ ಮನವರಿಕೆ ಮಾಡಿಕೊಟ್ಟಿದ್ದಾರೆ. ಆದರೆ ಸದ್ಯಕ್ಕೆ ಬಿಹಾರ ಚುನಾವಣೆ ಮುಗಿಯುವವರೆಗೂ ಯಾವುದೇ ಬದಲಾವಣೆಗೆ ಅವಕಾಶ ಇಲ್ಲ ಎಂದು ವರಿಷ್ಠರು ತಿಳಿಸಿದ್ದಾರೆ ಎನ್ನಲಾಗಿದೆ.

ನಾಯಕತ್ವದ ಬದಲಾವಣೆಯ ವದಂತಿಗಳಲ್ಲಿ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಹುದ್ದೆಯ ಪ್ರಬಲ ಆಕಾಂಕ್ಷಿಯಾಗಿದ್ದರು. ಆದರೆ ಪರಮೇಶ್ವರ್, ಮುನಿಯಪ್ಪ, ಎಂ.ಬಿ.ಪಾಟೀಲ್, ಕೃಷ್ಣಭೈರೇಗೌಡ, ಎಚ್.ಕೆ. ಪಾಟೀಲ್ ಸೇರಿದಂತೆ ಹಲವು ಮುಖಂಡರ ಹೆಸರುಗಳು ವ್ಯಾಪಕವಾಗಿ ಮುಂಚೂಣಿಗೆ ಬಂದಿವೆ.

ಮುಂದಿನ ಮುಖ್ಯಮಂತ್ರಿ ಮುನಿಯಪ್ಪ ಎಂದು ಕಾರ್ಯಕರ್ತರು ನಿನ್ನೆ ಘೋಷಣೆ ಕೂಗಿದಾಗ, ತಬ್ಬಿಬ್ಬಾದ ಮುನಿಯಪ್ಪ, ಆ ರೀತಿ ಮಾತನಾಡಬೇಡಿ ಎಂದು ಕಾರ್ಯಕರ್ತರಿಗೆ ತಿಳಿ ಹೇಳುವ ಪ್ರಯತ್ನ ಮಾಡಿದ್ದಾರೆ. ಆದರೆ ಹುಮಸ್ಸಿನಲ್ಲಿದ್ದ ಕಾರ್ಯಕರ್ತರು ಮುನಿಯಪ್ಪ ಅವರ ಮಾತನ್ನೂ ಲೆಕ್ಕಿಸದೇ ಘೋಷಣೆ ಕೂಗುವುದನ್ನು ಮುಂದುವರೆಸಿದ್ದಾರೆ.

ಎರಡೂವರೆ ವರ್ಷದ ಬಳಿಕ ಸಚಿವ ಸಂಪುಟ ಪುನರ್‌ರಚನೆಯಾಗಬೇಕು.

## ಬೆಂಗಳೂರು : ಡ್ರಗ್ ಪೆಡ್ಲರ್ ಬಳಿ ಇತ್ತು ಪಿಸ್ತೂಲ್ ಹಾಗೂ ನಾಲ್ಕು ಗುಂಡುಗಳು

**ಬೆಂಗಳೂರು:** ಅಕ್ರಮವಾಗಿ ಪಿಸ್ತೂಲ್ ಮತ್ತು ಜೀವಂತ ಗುಂಡುಗಳನ್ನು ಹೊಂದಿದ್ದ ಡ್ರಗ್ ಪೆಡ್ಲರ್‌ನನ್ನು ಸಿಸಿಬಿ ಪೊಲೀಸರು ಬಂಧಿಸಿದ್ದಾರೆ.

ಸುದ್ದಗುಂಟೆಪಾಳ್ಯದ ಇಂಡಿಯನ್ ಆಯಿಲ್ ಪೆಟ್ರೋಲ್ ಬಂಕ್ ಪಕ್ಕದ ಖಾಲಿ ಜಾಗದಲ್ಲಿ ವ್ಯಕ್ತಿಯೊಬ್ಬ ಅಕ್ರಮ ಶಸ್ತ್ರ ಹಾಗೂ ಮದ್ದು ಗುಂಡುಗಳೊಂದಿಗೆ ದುಷ್ಕೃತ್ಯವೆಸಗಲು ಸಜ್ಜಾಗುತ್ತಿರುವ ಬಗ್ಗೆ ಸಿಸಿಬಿ ಪೊಲೀಸರಿಗೆ ಮಾಹಿತಿ ಲಭಿಸಿದೆ.

ಖಚಿತ ಮಾಹಿತಿ ಮೇರೆಗೆ ಸಿಸಿಬಿ ಪೊಲೀಸರು ಸ್ಥಳದ ಮೇಲೆ ದಾಳಿ ಮಾಡಿ ಆರೋಪಿಯನ್ನು ಸುತ್ತುವರೆದು ವಶಕ್ಕೆ ಪಡೆದು ಅಂಗ ಶೋಧನೆ ಮಾಡಿದಾಗ ಆತನ ಬಳಿ ಒಂದು ಪಿಸ್ತೂಲು ಹಾಗೂ ನಾಲ್ಕು ಜೀವಂತ ಗುಂಡುಗಳಿರುವುದು ಕಂಡು ಬಂದಿದೆ.

ಆರೋಪಿಯನ್ನು ಹೆಚ್ಚಿನ ವಿಚಾರಣೆಗೆ ಒಳಪಡಿಸಿದಾಗ ತಾನು ಡ್ರಗ್ ಪೆಡ್ಲಿಂಗ್ ವ್ಯವಹಾರ ಮಾಡುತ್ತಿದ್ದು, ತನಗೆ ಪರಿಚಯವಿರುವ ಮಧ್ಯಪ್ರದೇಶದ ವ್ಯಕ್ತಿಯಿಂದ ಅನಧಿಕೃತವಾಗಿ ಪಿಸ್ತೂಲ್ ಹಾಗೂ ಜೀವಂತ ಗುಂಡುಗಳನ್ನು ಖರೀದಿಸಿದ್ದು, ಈ ಪಿಸ್ತೂಲ್‌ನಿಂದ ತನ್ನ ವಿರೋಧಿಗಳನ್ನು ಹೆದುರಿಸಿ ಮಾದಕ ವಸ್ತುಗಳ ಮಾರಾಟದ ವ್ಯವಹಾರಗಳನ್ನು ಮಾಡುತ್ತಿದ್ದುದಾಗಿ ಹೇಳಿದ್ದಾನೆ. ಆರೋಪಿಯನ್ನು ಪಿಸ್ತೂಲ್ ಹಾಗೂ ಜೀವಂತ ಗುಂಡುಗಳ ಸಮೇತ ಬಂಧಿಸಿ ಮುಂದಿನ ತನಿಖೆಕೈಗೊಂಡಿದ್ದಾರೆ.

ಈ ವಿಶೇಷ ಕಾರ್ಯಾಚರಣೆ ಯನ್ನು ಸಿಸಿಬಿ ಜಂಟಿ ಪೊಲೀಸ್ ಆಯುಕ್ತರ ಮಾರ್ಗದರ್ಶನದಲ್ಲಿ ಉಪ ಪೊಲೀಸ್ ಆಯುಕ್ತರು, ಸಹಾಯಕ ಪೊಲೀಸ್ ಆಯುಕ್ತರು ಹಾಗೂ ಅಧಿಕಾರಿ, ಸಿಬ್ಬಂದಿ ತಂಡ ಯಶಸ್ವಿಯಾಗಿ ಕೈಗೊಂಡಿದೆ.

# ಪ್ರಶಿಕ್ಷಕರ ನವತಂತ್ರಕ್ಕೆ ನೆರವಾದ ಕಾರ್ಯಾಗಾರ



ಸತ್ಯ ಎಜುಕೇರ್ ಕಾಂಪಿಟೆನ್ಸಿ ಟ್ರಸ್ಟ್ ವತಿಯಿಂದ ಕುವೆಂಪು ವಿಶ್ವವಿದ್ಯಾಲಯದ 20 ಬಿ.ಇಡಿ. ಕಾಲೇಜಿನ ಪ್ರಶಿಕ್ಷಕರಿಗೆ "ಪ್ರಶಿಕ್ಷಕರ ವೃತ್ತಿ ಅಭಿವೃದ್ಧಿ ಕಾರ್ಯಕ್ರಮದ" ಯೋಜನೆ ಅಡಿಯಲ್ಲಿ ಅಕ್ಟೋಬರ್ 24 ಮತ್ತು 25ರಂದು ಎರಡು ದಿನಗಳ ಪ್ರಶಿಕ್ಷಕರ ಸಾಮರ್ಥ್ಯ ವರ್ಧನೆಯ ಕಾರ್ಯಾಗಾರವನ್ನು ಶಿವಮೊಗ್ಗದ ವಾಸವಿ ವಿದ್ಯಾಲಯ ಆವರಣದಲ್ಲಿ ಆಯೋಜಿಸಲಾಗಿತ್ತು.

2015ರಲ್ಲಿ ಪ್ರಾರಂಭವಾದ ಸತ್ಯ ಎಜುಕೇರ್ ಕಾಂಪಿಟೆನ್ಸಿ ಟ್ರಸ್ಟ್ ಈಗಾಗಲೇ ಕರ್ನಾಟಕದ ಹಲವಾರು ಭಾಗಗಳಲ್ಲಿ ಶಿಕ್ಷಕರ ಸಾಮರ್ಥ್ಯವನ್ನು ವೃದ್ಧಿಸುವ ಕಾರ್ಯದಲ್ಲಿ ತೊಡಗಿಕೊಂಡಿದ್ದು, ಮೂರು ಆಯಾಮಗಳಾದ ಸೇವಾಪೂರ್ವ ಹಾಗೂ ಸೇವಾ ನಿರತ ಶಿಕ್ಷಕರ ಸಾಮರ್ಥ್ಯ ವೃದ್ಧಿ, ನಾಯಕರ ಸಾಮರ್ಥ್ಯ ವೃದ್ಧಿ ಹಾಗೂ ಮೆಂಟರಿಂಗ್ ಕಾರ್ಯಕ್ರಮದೊಂದಿಗೆ ಶಿಕ್ಷಣ ಕ್ಷೇತ್ರದಲ್ಲಿ ಶಿಕ್ಷಕರ ಸಾಮರ್ಥ್ಯ ವೃದ್ಧಿಯೊಂದಿಗೆ ಬದಲಾವಣೆ ಸಾಧ್ಯ ಎಂಬ ನಿಟ್ಟಿನಲ್ಲಿ ತನ್ನ ಕಾರ್ಯವನ್ನು ತೊಡಗಿಸಿಕೊಂಡಿದೆ.

ಟ್ರಸ್ಟ್‌ನ ನಿರ್ದೇಶಕಿ ಡಾ.ಜಿ. ವಿಜಯಕುಮಾರಿ ಅವರ ನೇತೃತ್ವದಲ್ಲಿ ಮತ್ತು ಮಾರ್ಗದರ್ಶನದಲ್ಲಿ ಎರಡು ದಿನದ ಈ ಕಾರ್ಯಾಗಾರ ಯಶಸ್ವಿಯಾಗಿ ಜರುಗಿತು. ಈ ಸಂಸ್ಥೆಯ ಸಂಪನ್ಮೂಲ ವ್ಯಕ್ತಿಗಳಾಗಿ ಡಾ. ಸುರೇಶ್ ಶೆಟ್ಟಿ, ಗ್ರೂಪ್ ಪ್ರಾಜೆಕ್ಟ್ ಲೀಡರ್ ಮತ್ತು ಕನ್ನಡ ವಿಷಯದ ಮುಖ್ಯಸ್ಥರು ಹಾಗೂ ಶ್ರೀದೇವಿ ಪಿ. ನಾಯಕ್, ಗ್ರೂಪ್ ಪ್ರಾಜೆಕ್ಟ್ ಲೀಡರ್ ಮತ್ತು ಗಣಿತ ವಿಷಯದ ಮುಖ್ಯಸ್ಥರು, ಡಾ. ಹೇಮಲತಾ ಎಸ್. ನಾಯ್ಕ, ಪ್ರಾಜೆಕ್ಟ್ ಲೀಡರ್ ಮತ್ತು ಆಂಗ್ಲ ವಿಷಯದ ಮುಖ್ಯಸ್ಥರು, ಡಾ. ಟಿ.ಎಸ್. ಗೀತಾ ಲಕ್ಷ್ಮಿ, ಸಮಾಜ ವಿಜ್ಞಾನ ವಿಷಯ ಮುಖ್ಯಸ್ಥರು, ರಶ್ಮಿ ಜಿ., ವಿಜ್ಞಾನ ವಿಷಯ ಮುಖ್ಯಸ್ಥರು ಹಾಗೂ ಕುಂಗುಮ ಕೀರ್ತನಾರವರು ಈ ಕಾರ್ಯಾಗಾರದಲ್ಲಿ ಪ್ರಶಿಕ್ಷಕರಿಗೆ ತರಬೇತಿಯನ್ನು ನೀಡಿದರು . "ಶಿಕ್ಷಕರನ್ನು ಸಬಲಗೊಳಿಸಬೇಕು, ಯಾವ ಶಿಕ್ಷಕನು ಹಿಂದೆ ಉಳಿಯಬಾರದು" ಎಂಬುದೇ ಟ್ರಸ್ಟ್‌ನ ಮುಖ್ಯ ಧ್ಯೇಯವಾಗಿದ್ದು, ಅದನ್ನು ಕಾರ್ಯಾಗಾರದಲ್ಲಿ ಪುನರುಚ್ಚರಿಸಲಾಯಿತು.


ಈ ತರಬೇತಿ ಶಿಬಿರದಲ್ಲಿ 21ನೇ ಶತಮಾನ ಶಿಕ್ಷಣದಲ್ಲಿ ನ್ಯೂರೋಸೈನ್ಸ್ ಮಹತ್ವ, ವಿಷಯ ವರ್ಗೀಕರಣ (ಕಾಂಟೆಂಟ್ ಕ್ಯಾಟಗರಿ),

5ಇ ಮಾದರಿಯ ಪಾಠ ಯೋಜನೆ, ಸಹಕಾರಿ ಕಲಿಕಾ ತಂತ್ರಗಳು (ಕೋಆಪರೇಟಿವ್ ಲರ್ನಿಂಗ್ ಸ್ಟ್ರಾಟೆಜೀಸ್) ಕುರಿತು ತಜ್ಞರು ವಿವರವಾಗಿ ತರಬೇತಿ ನೀಡಿದರು. ಪ್ರಶಿಕ್ಷಕರೊಂದಿಗೆ ನೇರ ಪ್ರಾತ್ಯಕ್ಷಿಕೆ ನಡೆಸಿದ ತಜ್ಞರು, ಶಿಕ್ಷಕರಿಗೆ ಸಹಕಾರ ತಂತ್ರಗಳನ್ನು ಅನ್ವಯಿಸುವಲ್ಲಿ ಆತ್ಮವಿಶ್ವಾಸ ತುಂಬಿದರು.

ಕುವೆಂಪು ವಿಶ್ವವಿದ್ಯಾಲಯದ ಒಟ್ಟು 20 ಬಿ.ಇಡಿ., ಕಾಲೇಜುಗಳ 108ಕ್ಕೂ ಹೆಚ್ಚು ಶಿಕ್ಷಕರು ಹಾಗೂ ಪ್ರಾಂಶುಪಾಲರು ಈ ಕಾರ್ಯಾಗಾರದಲ್ಲಿ ಪಾಲ್ಗೊಂಡು ತಮ್ಮ ಅನುಭವ ಹಂಚಿಕೊಂಡರು ಮತ್ತು ನವತಂತ್ರಗಳನ್ನು ಕಾಲೇಜುಗಳಲ್ಲಿ ಅನುಷ್ಠಾನಗೊಳಿಸಲು ಉತ್ಸಾಹವನ್ನು ವ್ಯಕ್ತಪಡಿಸಿದರು.

**ಲೇಖಕರು: ಡಾ.ವಿ.ಎನ್. ಶಿಲ್ಪ, ಪ್ರಾಂಶುಪಾಲರು, ಡಾ.ಜಿ.ಎ. ನಾರಿಬೋಲಿ ಕಾಲೇಜ್ ಆಫ್ ಎಜುಕೇಷನ್, ಸಾಗರ, ಶಿವಮೊಗ್ಗ ಜಿಲ್ಲೆ. ಮೊ: 99801 92676**

# ಭ್ರಷ್ಟಾಚಾರದ ವಿರುದ್ಧ ಜಾಗೃತಿ ಅರಿವು ಸಪ್ತಾಹ



**ಗದಗ :** ಕರ್ನಾಟಕ ಲೋಕಾಯುಕ್ತ ಗದಗ ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಹಾಗೂ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಇವರುಗಳ ಸಹಯೋಗದಲ್ಲಿ ಭ್ರಷ್ಟಾಚಾರದ ವಿರುದ್ಧ ಜಾಗೃತಿ

ಅರಿವು ಸಪ್ತಾಹ-2025ನ್ನು ಸೋಮವಾರ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಶ್ರೀ ಬನಪ್ಪ ಸಂಕಪ್ಪ ಸಂಕಣ್ಣವರ ಸಭಾ ಭವನದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎನ್ ಶಿವನಗೌಡ್ರ ಉದ್ಘಾಟಿಸಿದರು. ಭ್ರಷ್ಟಾಚಾರ ತಡೆಗಟ್ಟುವ ನಿಟ್ಟಿನಲ್ಲಿ ಪ್ರತಿಯೊಬ್ಬ ಜವಾಬ್ದಾರಿಯುತ ನಾಗರಿಕರು ಯಾವ ಯಾವ ಜವಾಬ್ದಾರಿ ಮತ್ತು ಕರ್ತವ್ಯಗಳನ್ನು ನಿರ್ವಹಿಸಬೇಕೆಂದು ಸಿ.ಎಸ್.ಶಿವನಗೌಡ್ರ ವಿವರಿಸಿದರು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಅಧ್ಯಕ್ಷ ಶರಣಬಸಪ್ಪ, ಎಸ್. ಗುಡಿಮನಿ ಅಧ್ಯಕ್ಷತೆ ವಹಿಸಿದ್ದರು.

ಪೊಲೀಸ್ ಉಪಾಧೀಕ್ಷಕ ವಿಜಯ ಬಿರಾದಾರ ಅವರು ಮಾತನಾಡಿ ಭ್ರಷ್ಟಾಚಾರದ ವಿರುದ್ಧ ಜಾಗೃತಿ

ಅರಿವು ಸಪ್ತಾಹವನ್ನು ಆಚರಿಸುವ ಉದ್ದೇಶವನ್ನು ವಿವರಿಸಿದರು. ಭ್ರಷ್ಟಾಚಾರ ತಡೆಗಟ್ಟದೇ ಹೋದರೆ ಸಮಾಜದ ಪ್ರತಿ ವರ್ಗದ ನಾಗರಿಕರು ಸಮಸ್ಯೆಗಳನ್ನು ಅನುಭವಿಸಬೇಕಾಗುತ್ತದೆ. ಮುಂದಿನ ಪೀಳಿಗೆಯವರು ಸಮಾಜದಲ್ಲಿ ಮತ್ತು ಸಾರ್ವಜನಿಕ ಕ್ಷೇತ್ರಗಳಲ್ಲಿ ಹಿನ್ನಡೆ ಅನುಭವಿಸಬೇಕಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಲೋಕಾಯುಕ್ತ ಕಚೇರಿಯ ಅಧಿಕಾರಿ ಪರಮೇಶ್ವರ ಜಿ ಕವಟಗಿ, ಶ್ರೀಮತಿ ಎಸ್ ಎಸ್ ತೇಲಿ, ಪೊಲೀಸ್ ಇನ್ಸಪೆಕ್ಟರ್ ಯು.ಎನ್.ಸಂಗನಾಳ, ನೀಲಕಂಠಪ್ಪ ಪಿ ಅಂಬಿಗೇರ, ಮುತರೆಡ್ಡಿ, ಬಾರಡ್ಡಿ , ಮಂಜುನಾಥ ಎಸ್ ದಿಡಗೂರ, ಚನ್ನವೀರಪ್ಪ ಹುಣಸಿಕಟ್ಟಿ, ಜಯದೇವ ಮೆಣಸಗಿ, ಪ್ರಕಾಶ ಉಗಲಾಟದಿ, ಸಿದ್ರಾಮಪ್ಪ ಉಮಚಗಿ , ರಾಘವೇಂದ್ರ ಕಾಲವಾಡ, ಅಶೋಕ ಎಸ್ ಸಂಕಣ್ಣವರ, ಅರವಿಂದ ಕಾಮತ ಉಪಸ್ಥಿತರಿದ್ದರು.

# ಯುವ ಸಂಸತ್ ಅರ್ಥಪೂರ್ಣ ಕಾರ್ಯಕ್ರಮ : ಕೆ.ಆರ್.ಸುಜಾತ

**ಶಿವಮೊಗ್ಗ:** ಸಂಸತ್ತಿನಲ್ಲಾಗುವ ಚರ್ಚೆ, ವಿಷಯ ಮಂಡನೆ ಹಾಗೂ ಅಲ್ಲಿನ ನೀತಿ ನಿಯಮವನ್ನು ಯುವಕರಿಗೆ ತಿಳಿಸಲು ಯುವ ಸಂಸತ್ ಸ್ಪರ್ಧೆ ಸಹಕಾರಿಯಾಗಿದೆ ಎಂದು ಜಿ.ಪಂ. ಉಪ ಕಾರ್ಯದರ್ಶಿ ಕೆ.ಆರ್. ಸುಜಾತ ತಿಳಿಸಿದರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಉಪ ನಿರ್ದೇಶಕರ ಕಚೇರಿ ಶಾಲಾ ಶಿಕ್ಷಣ ಇಲಾಖೆ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಸೋಮವಾರ ಜಿ.ಪಂ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಆಯೋಜಿಸಿದ್ದ ಸರಕಾರಿ ಪ್ರೌಢಶಾಲಾ ಮಕ್ಕಳ 2025 ನೇ ಸಾಲಿನ ಜಿಲ್ಲಾಮಟ್ಟದ ಯುವ ಸಂಸತ್ ಸ್ಪರ್ಧೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯುವ ಸಂಸತ್ ಅರ್ಥಪೂರ್ಣ ಮತ್ತು ಆಸಕ್ತಿದಾಯಕ ಕಾರ್ಯಕ್ರಮವಾಗಿದ್ದು, ನಮ್ಮ ಜನ ಪ್ರತಿನಿಧಿಗಳು ಸಂಸತ್‌ನಲ್ಲಿ ಹೇಗೆ ಕಾರ್ಯಕಲಾಪಗಳನ್ನು ಮಾಡುತ್ತಾರೆ. ಅಲ್ಲಿ ಯಾವ ವಿಷಯಕ್ಕೆ ಹೆಚ್ಚು ಮಹತ್ವ ಕೊಡುತ್ತಾರೆ. ಆಡಳಿತ ಪಕ್ಷ, ವಿರೋಧ ಪಕ್ಷ ಹಾಗೂ ಸಂಸತ್ತಿನ ಅಧ್ಯಕ್ಷರಾದ ಸ್ಪೀಕರ್‌ನ ಕರ್ತವ್ಯವೇನು ಎಂಬುದು ವಿದ್ಯಾರ್ಥಿಗಳು ಈ ಯುವ ಸಂಸತ್‌ನಲ್ಲಿ ಭಾಗವಹಿಸುವ ಮೂಲಕ ತಿಳಿದುಕೊಳ್ಳಬಹುದು.

ಸಂಸತ್ತನ್ನು ವೀಕ್ಷಣೆ ಮಾಡುವುದಕ್ಕಿಂತ, ಅದರ ರೂಪುರೇಷೆಗಳನ್ನು ಓದುವುದಕ್ಕಿಂತ ಅದನ್ನು ಅನುಭವಿಸಿ ತಿಳಿಯಬೇಕು. ಆಗ ಮಾತ್ರ ಸಂಸತ್ ಅರ್ಥವಾಗುವುದು. ರಾಜ್ಯದಲ್ಲಿನ ಅಭಿವೃದ್ಧಿ, ತೆರಿಗೆ ಪಾವತಿ ಮತ್ತು ಹಂಚಿಕೆ ಕ್ರಮ ಸೇರಿದಂತೆ ಅನೇಕ ವಿಷಯಗಳ ಬಗ್ಗೆ ಚರ್ಚೆ ನಡೆಯುತ್ತದೆ. ಅದರ ಅನುಭವ ಯುವ ಸಂಸತ್ ವಿದ್ಯಾರ್ಥಿಗಳಿಗೆ ನೀಡಲಿದ್ದು, ವಿದ್ಯಾರ್ಥಿಗಳು ಇದನ್ನು ಭಾಗವಹಿಸುವ ಮೂಲಕ ತಮ್ಮ ಸ್ಪರ್ಧಾ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದರು.



ಉಪ ನಿರ್ದೇಶಕರ ಕಚೇರಿಯ ಶಿಕ್ಷಣಾಧಿಕಾರಿಯಾದ ಎಲ್.ಜ್ಯೋತಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಯುವ ಸಂಸತ್ ಒಂದು ವಿಶಿಷ್ಟ ಸ್ಪರ್ಧೆ. ಇದು ನಾಲ್ಕು ಹಂತದಲ್ಲಿ ನಡೆಯುತ್ತದೆ. ತಾಲೂಕು ಹಂತದಲ್ಲಿ ಗೆದ್ದ ಐದು ವಿದ್ಯಾರ್ಥಿಗಳನ್ನು ಜಿಲ್ಲಾ ಹಂತಕ್ಕೆ, ಜಿಲ್ಲಾ ಹಂತದಲ್ಲಿ ಮೂರು ವಿದ್ಯಾರ್ಥಿಗಳನ್ನು ರಾಜ್ಯಮಟ್ಟಕ್ಕೆ ಕಳುಹಿಸಲಾಗುವುದು. ಸಾಹಿತ್ಯ, ಕ್ರೀಡೆ, ವಿಜ್ಞಾನದಂತೆ ಮಕ್ಕಳಲ್ಲಿ ನಾಯಕತ್ವ ಗುಣ ಬೆಳೆಸಬೇಕು. ಇದರಿಂದ ಸಂಸತ್‌ನಲ್ಲಿ ಜನಪ್ರತಿನಿಧಿಗಳು ಹೇಗೆ ವರ್ತಿಸುತ್ತಾರೆ ಎಂಬುದನ್ನು ತಿಳಿಯಲು ಸಾಧ್ಯ. ಆರೋಗ್ಯಕರ ಸ್ಪರ್ಧೆ ಇರಲಿ. ಬಹುಮಾನಕ್ಕಿಂತ ಭಾಗವಹಿಸುವುದು ಮುಖ್ಯ

ಕಾರ್ಯಕ್ರಮದಲ್ಲಿ ಉಪ ನಿರ್ದೇಶಕರ ಕಚೇರಿಯ ವಿಷಯ ಪರಿವೀಕ್ಷಕರು ಜ್ಯೋತಿಕುಮಾರಿ, ಸಂಪನ್ಮೂಲ ಶಿಕ್ಷಕರುಗಳಾದ ಗಂಗಾ ನಾಯಕ್, ಸುರೇಶ್, ಸತೀಶ್ ಕುಮಾರ್, ಹಸನ್‌ಸಾಬ್ ಹಾಜರಿದ್ದರು.

ಸಾಗರ ಸುಭಾಷ್ ನಗರದ ಸರ್ಕಾರಿ ಪ್ರೌಢಶಾಲೆಯ ಭೂದೇವಿ ಪ್ರಥಮ, ಹೊಸನಗರದ ಮಸಗಲ್ಲಿಯ ಸರ್ಕಾರಿ ಪ್ರೌಢಶಾಲೆಯ ಕೆ.ಎನ್.ಸ್ಫೂರ್ತಿ ದ್ವಿತೀಯ ಹಾಗೂ ಕೆ.ಪಿ.ಪೂರ್ಣಿಮ ತೃತೀಯ ಬಹುಮಾನಗಳನ್ನು ಪಡೆದು ಶಿವಮೊಗ್ಗ ಜಿಲ್ಲೆಯಿಂದ ರಾಜ್ಯ ಮಟ್ಟದ ಯುವ ಸಂಸತ್ ಸ್ಪರ್ಧೆ ಆಯ್ಕೆಯಾಗಿದ್ದಾರೆ.

## ನವೆಂಬರ್ 08ಕ್ಕೆ ರಾಜ್ಯ ಸರ್ಕಾರಿ ನೌಕರರಿಗೆ ರಾಜ್ಯಮಟ್ಟದ ಜನಪದ/ ಕನ್ನಡ ಗೀತೆಗಳ ಗುಂಪು ಸ್ಪರ್ಧೆ

**ಗದಗ :** ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಕೇಂದ್ರ ಸಂಘ ಬೆಂಗಳೂರಿನ ಆವರಣದಲ್ಲಿ ಇದೇ ನವೆಂಬರ್ 08 ರಂದು ಕನ್ನಡ ರಾಜ್ಯೋತ್ಸವ ಕಾರ್ಯಕ್ರಮಕ್ಕೆ ಸನ್ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯರವರು ಉದ್ಘಾಟಿಸಲಿದ್ದಾರೆ. ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿಗಳಾದ ಸನ್ಮಾನ್ಯ ಡಿ.ಕೆ.ಶಿವಕುಮಾರ, ಹಾಗೂ ಸಚಿವರಾಗಿರುವ ಸನ್ಮಾನ್ಯ ದಿನೇಶಗುಂಡುರಾವ್, ಸನ್ಮಾನ್ಯ ಸಂತೋಷಲಾಡ್ ರವರು ಭಾಗವಹಿಸಲಿದ್ದಾರೆ. ರಾಜ್ಯಸರ್ಕಾರಿ ನೌಕರರಿಗೆ ರಾಜ್ಯಮಟ್ಟದ ಜನಪದ / ಕನ್ನಡ ಗೀತೆಗಳ ಗುಂಪು ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ. ಸ್ಪರ್ಧೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ರಾಜ್ಯ ಸರಕಾರದ ಖಾಯಂ ನೌಕರರು ಸಂಘವು ನೀಡಿರುವ online link address https//forms,gle/8pRm5nXOwwQZcç9 ನಲ್ಲಿ ನವೆಂಬರ್ 02ರ ಒಳಗಾಗಿ ನೊಂದಾಯಿಸಿಕೊಳ್ಳುವುದು ಕಡ್ಡಾಯವಾಗಿದೆ. ಸ್ಪರ್ಧೆಯಲ್ಲಿ ವಿಜೇತ ತಂಡಗಳಿಗೆ ಪ್ರಥಮ ಬಹುಮಾನ 1ಲಕ್ಷ ರೂ. ದ್ವಿತೀಯ ಬಹುಮಾನ ರೂ.75,000/- ತೃತೀಯ ಬಹುಮಾನ ರೂ.50,000/- ಹಾಗೂ ಸಮಾಧಾನಕರ ಬಹುಮಾನ ರೂ.20,000/- ನೀಡಲಾಗುವುದು. ವಿಜಯನಗರ ಜಿಲ್ಲಾ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ಸರ್ಕಾರಿ ನೌಕರರು ರಾಜ್ಯಮಟ್ಟದ ಸ್ಪರ್ಧೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬಹುದು ಎಂದು ರಾಜ್ಯ ಸರಕಾರಿ ನೌಕರ ಸಂಘದ ವಿಜಯನಗರ ಜಿಲ್ಲಾಧ್ಯಕ್ಷರಾದ ಜಿ.ಮಲ್ಲಿಕಾರ್ಜುನಗೌಡ ರವರು ಹಾಗೂ ರಾಜ್ಯ ಪರಿಷತ್ ಸದಸ್ಯರಾದ ರಾಘವೇಂದ್ರ ಹೆಗಡಿಯಾಳ್, ಜಿಲ್ಲಾ ಖಜಾಂಚಿ ಕೆ.ಮಲ್ಲೇಶಪ್ಪ, ಜಿಲ್ಲಾ ಕಾರ್ಯದರ್ಶಿ ಟಿ.ಪಂಪಣ್ಣ ಹಾಗೂ ಜಿಲ್ಲಾ ಶಾಖೆಯ ಸರ್ವ ಪದಾಧಿಕಾರಿಗಳು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಜಯಂತಿಗಳ ಪೂರ್ವಭಾವಿ ಸಭೆ

**ಚಿಕ್ಕಬಳ್ಳಾಪುರ:** 2025-26ನೇ ಸಾಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನವೆಂಬರ್ 8 ರಂದು ಶ್ರೀ ಕನಕ ಜಯಂತಿ ಮತ್ತು ನವೆಂಬರ್ 11 ರಂದು ವೀರವನಿತೆ ಒನಕೆ ಓಬವ್ವ ಜಯಂತಿಯನ್ನು ಆಚರಿಸಲುವ ಸಲುವಾಗಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 28 ರಂದು ಸಂಜೆ 4 ಗಂಟೆಗೆ ಶ್ರೀ ಕನಕ ಜಯಂತಿಯ ಪೂರ್ವಭಾವಿ ಸಭೆಯನ್ನು ಹಾಗೂ 4:30 ಗಂಟೆಗೆ ವೀರವನಿತೆ ಒನಕೆ ಓಬವ್ವ ಜಯಂತಿಯ ಪೂರ್ವಭಾವಿ ಸಭೆಯನ್ನು ಜಿಲ್ಲಾಧಿಕಾರಿಗಳ ಕಚೇರಿಯ 2ನೇ ಮಹಡಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಸದರಿ ಸಭೆಗೆ ಎಲ್ಲಾ ಸಮುದಾಯದ ಸಂಘ-ಸಂಸ್ಥೆಗಳ ಮುಖಂಡರು, ಪದಾಧಿಕಾರಿಗಳು, ಸಾರ್ವಜನಿಕರು ಹಾಜರಾಗಿ ಸಲಹೆ ಮತ್ತು ಸೂಚನೆಗಳನ್ನು ನೀಡಬಹುದೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಿ.ಎಂ.ರವಿಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿದ್ಧಗಂಗಾ ವಿದ್ಯಾ ಸಂಸ್ಥೆಯ ವಿದ್ಯಾರ್ಥಿ ಗಿರೀಶ್ ಆರ್ ನೇಸರ್ಗಿ ಯಿಂದ ಅದ್ವಿತೀಯ ಸಾಧನೆ

ಸಿದ್ಧಗಂಗಾ ವಿದ್ಯಾ ಸಂಸ್ಥೆಯ ವಿದ್ಯಾರ್ಥಿ ಗಿರೀಶ್ ಆರ್ ನೇಸರ್ಗಿ ಯಿಂದ ಅದ್ವಿತೀಯ ಸಾಧನೆಸಿದ್ಧಗಂಗಾ ವಿದ್ಯಾ ಸಂಸ್ಥೆಯಲ್ಲಿ ಪ್ರಥಮ ಪಿಯುಸಿ ಓದುತ್ತಿರುವ ವಿದ್ಯಾರ್ಥಿ ಗಿರೀಶ್ ಆರ್ ನೇಸರ್ಗಿ




2025-2026 ನೇ ಸಾಲಿನ ಪದವಿ ಪೂರ್ವ ಕಾಲೇಜುಗಳ ಕ್ರೀಡಾಕೂಟದಲ್ಲಿ ಫುಟ್ಬಾಲ್‌ಪಂದ್ಯಾವಳಿಯಲ್ಲಿ ಭಾಗವಹಿಸಿ ಅಪ್ರತಿಮ ಸಾಧನೆ ಮೆರೆದಿದ್ದಾನೆ.

ಈ ವಿದ್ಯಾರ್ಥಿ ಜಿಲ್ಲಾ ಮಟ್ಟದಲ್ಲಿ ಆಡಿ ಸಿದ್ಧಗಂಗಾ ಕಾಲೇಜಿನ ವತಿಯಿಂದ ಜಿಲ್ಲಾ ತಂಡದಲ್ಲಿರಾಜ್ಯಮಟ್ಟಕ್ಕೆ ಆಯ್ಕೆಗೊಂಡಿದ್ದಲ್ಲದೆ ರಾಜ್ಯಮಟ್ಟದಿಂದ ರಾಷ್ಟ್ರಮಟ್ಟಕ್ಕೂ ಆಯ್ಕೆಗೊಂಡು6/10/2025 ರಿಂದ 10/10/2025ರ ವರೆಗೆ ಜಮ್ಮು ಕಾಶ್ಮೀರದಲ್ಲಿ ನಡೆದ 19 ವರ್ಷದಕೆಳಗಿನವರಿಗೆ ಆಡಿಸುವ 69ನೇ ರಾಷ್ಟ್ರ ಮಟ್ಟದ ಶಾಲಾ ಪಂದ್ಯಗಳಲ್ಲಿ ಫುಟ್ಬಾಲ್ ಆಟಗಾರನಾಗಿಕರ್ನಾಟಕ ರಾಜ್ಯವನ್ನು ಪ್ರತಿನಿಧಿಸಿ ನಮ್ಮ ರಾಜಕ್ಕೆ ಜಿಲ್ಲೆಗೆ ಹಾಗೂ ಕಾಲೇಜಿಗೆ ಕೀರ್ತಿತರುವುದರ ಮೂಲಕ ದಾವಣಗೆರೆಯ ಕ್ರೀಡಾ ಇತಿಹಾಸದ ಸುವರ್ಣ ಪುಟಗಳಲ್ಲಿ ದಾಖಲಿಸಲ್ಪಟ್ಟು

ಸಿದ್ಧಗಂಗಾ ಸಂಸ್ಥೆಗೆ ಪೋಷಕರಿಗೆ ಹೆಮ್ಮೆಯ ತುರಾಯಿ ಮುಡಿಸಿದ್ದಾರೆ .ವಿದ್ಯಾರ್ಥಿಯ ಈಸಾಧನೆಗೆ ಸಂಸ್ಥೆಯ ಮುಖ್ಯಸ್ಥರಾದ ಡಾಕ್ಟರ್ ಜಸ್ಟಿನ್ ಡಿಸೋಜಾ, ನಿರ್ದೇಶಕರಾದ ಡಾಕ್ಟರ್‌ಜಯಂತ್ ಡಿ ಎಸ್ ಹಾಗೂ ಆಡಳಿತ ಮಂಡಳಿಯ ಅಧ್ಯಕ್ಷರಾದ ಪ್ರಶಾಂತ್ ಡಿ ಎಸ್‌ಕಾರ್ಯದರ್ಶಿ ಹೇಮಂತ್ ಡಿ ಎಸ್ ಅಭಿನಂದನೆ ಸಲ್ಲಿಸಿದ್ದಾರೆ. ಕಾಲೇಜಿನ ಪ್ರಾಚಾರ್ಯರಾದಶ್ರೀಮತಿ ವಾಣಿಶ್ರೀ ಹಾಗೂ ಉಪನ್ಯಾಸಕ ವರ್ಗ, ಬೋಧಕೇತರ ಸಿಬ್ಬಂದಿ ಹರ್ಷ ವ್ಯಕ್ತಪಡಿಸಿವಿದ್ಯಾರ್ಥಿಯ ಈ ಸಾಧನೆಯನ್ನು ಅಭಿನಂದಿಸಿರುತ್ತಾರೆ.

## ಡಿ.07 ರಂದು ಮಾಜಿ ಸೈನಿಕರ ಕುಂದು ಕೊರತೆ ನಿವಾರಣೆ ಸಭೆ

**ಬಳ್ಳಾರಿ:** ಬೆಳಗಾವಿ ನಗರದ ಮರಾಠಾ ಲೈಟ ಇನಫಂಟ್ರಿ, ಶಿವಾಜಿ ಸ್ಟೇಡಿಯಂನಲ್ಲಿ ಡಿ.07 ರಂದು ಬೆಳಿಗ್ಗೆ 06 ರಿಂದ ಸಂಜೆ 06 ಗಂಟೆವರೆಗೆ ಮಾಜಿ ಸೈನಿಕರು ಮತ್ತು ಅವರ ಅವಲಂಬಿತರುಗಳ ಕುಂದು ಕೊರತೆ ನಿವಾರಣಾ ಶಿಬಿರ ಏರ್ಪಡಿಸಲಾಗಿದೆ.

ಶಿಬಿರದಲ್ಲಿ ಮಾಜಿ ಸೈನಿಕರ ನಿವೃತ್ತಿ ಪಿಂಚಣಿ, ಕುಟುಂಬ ಪಿಂಚಣಿ, ಸ್ಪರ್ಶ ಹಾಗೂ ಇಸಿಎಚ್‌ಎಸ್ ಸಂಬಂಧಿಸಿದ ಸಮಸ್ಯೆಗಳು ಕುರಿತು ಸೂಕ್ತ ಪರಿಹಾರ ಕ್ರಮ ಕೈಗೊಳ್ಳಲಾಗುವುದು.

ಶಿಬಿರದಲ್ಲಿ ಪಾಲ್ಗೊಳ್ಳುವ ಫಲಾನುಭವಿಗಳು ತಮ್ಮ ಸಮಸ್ಯೆ ಕುರಿತು ಹೆಸರುಗಳನ್ನು ನೊಂದಾಯಿಸಿಕೊಂಡು, ನೋಂದಣಿ ಸಂಖ್ಯೆಯನ್ನು ಪಡೆಯಬೇಕಾಗಿರುತ್ತದೆ. ನೊಂದಣಿ ಮಾಡಲು ಬಯಸುವವರು ತಮ್ಮ ಕುಂದು ಕೊರತೆಗಳ ಅರ್ಜಿ ಮತ್ತು ಅದಕ್ಕೆ ಸಂಭಂಧಿಸಿದ ದಾಖಲೆಗಳನ್ನು ಮೊಬೈಲ್ (ವಾಟ್ಸಾಪ್) ಸಂಖ್ಯೆ 8317350584 ಅಥವಾ greatgorill@nic.in ಮೂಲಕ ಅಪ್‌ಲೋಡ್ ಮಾಡಬಹುದು.ಶಿಬಿರದಲ್ಲಿ ಬೆಳಗಾವಿ ಜಿಲ್ಲೆ ಮತ್ತು ಧಾರವಾಡ, ಹಾವೇರಿ, ಗದಗ, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗೆ ಸಂಬಂಧಿಸಿದ ಮಾಜಿ ಸೈನಿಕರು ಹಾಗೂ ಅವರ ಅವಲಂಬಿತರುಗಳು ಶಿಬಿರದಲ್ಲಿ ಪಾಲ್ಗೊಂಡು ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬಹುದಾಗಿದೆ.ಅರ್ಜಿ ಮತ್ತು ಅದಕ್ಕೆ ಸಂಬಂಧಿಸಿದ ದಾಖಲೆಗಳನ್ನು ಮೊಬೈಲ್ (ವಾಟ್ಸಾಪ್) ಸಂಖ್ಯೆ 8317350584 ಗೆ ಅಪ್‌ಲೋಡ್ ಮಾಡಿದ ವಿವರವನ್ನು ತಿಳಿಸಬೇಕು.

### ಮತದಾರರ ನೋಂದಣಿ ಪ್ರಗತಿ ಕಾರ್ಯ ಪರಿಶೀಲಿಸಿ ಜಿಪಂ ಸಿಇಓ ಮಹಮ್ಮದ್ ಹಾರೀಸ್ ಸುಮೇರ್ ಸೂಚನೆ

# ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ನೋಂದಣಿಗೆ ಅಧಿಕಾರಿಗಳು ಮುತುವರ್ಜಿ ವಹಿಸಿ

**ಬಳ್ಳಾರಿ:** ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣಾ ಮತದಾರರ ನೋಂದಣಿ ಪ್ರಕ್ರಿಯೆ ಈಗಾಗಲೇ ಆರಂಭವಾಗಿದ್ದು, ನಿರೀಕ್ಷಿತ ಮಟ್ಟದಲ್ಲಿ ನೋಂದಣಿಗೆ ಅಧಿಕಾರಿಗಳು ಮುತುವರ್ಜಿ ವಹಿಸಬೇಕು ಎಂದು ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರೂ ಆದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಬಳ್ಳಾರಿ ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಕರ್ನಾಟಕ ವಿಧಾನಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ-2026 ಅಂಗವಾಗಿ ವಿಶೇಷ ಮಿಂಚಿನ ನೋಂದಣಿ



ಅಭಿಯಾನ ಪ್ರಗತಿ ಕುರಿತು ಸೋಮವಾರ ಏರ್ಪಡಿಸಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನೋಂದಣಿ ಕಾರ್ಯದಲ್ಲಿ ಎಲ್ಲಾ ಅಧಿಕಾರಿಗಳು, ನೋಡಲ್ ಅಧಿಕಾರಿಗಳು ಪ್ರೌಢಶಾಲೆ, ವಿಶ್ವವಿದ್ಯಾಲಯ, ಕೃಷಿ, ವೈದ್ಯಕೀಯ ಕಾಲೇಜು, ತಾಂತ್ರಿಕ ಕಾಲೇಜು, ಪದವಿಪೂರ್ವ, ಪದವಿ ಕಾಲೇಜುಗಳಲ್ಲಿ ವ್ಯಾಪಕ ಪ್ರಚಾರ ಮಾಡಿ ನೋಂದಣಿ ಸಂಖ್ಯೆಯನ್ನು ಹೆಚ್ಚಿಸಬೇಕು. ಅಗತ್ಯವಿದ್ದಲ್ಲಿ ಭರ್ತಿ ಮಾಡುವ ವಿಧಾನ ಕುರಿತು ತರಬೇತಿ ನೀಡಬೇಕು ಎಂದು ನಿರ್ದೇಶನ ನೀಡಿದರು.

, ನಿಗದಿಪಡಿಸಿದ ಸಮಯದೊಳಗೆ ನಿಯಮಾನುಸಾರ ನಮೂನೆ-19ರ ಅರ್ಜಿಯೊಂದಿಗೆ ಪೂರಕ ದಾಖಲೆಗಳನ್ನು ಸ್ವೀಕರಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು. ಜಿಲ್ಲಾ ಮಟ್ಟದಲ್ಲಿ ಸಂಬಂಧಿಸಿದ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆಯ ಅಧಿಕಾರಿಗಳು, ವಿಶ್ವವಿದ್ಯಾನಿಲಯದ ಕುಲಸಚಿವರು ಹಾಗೂ ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ನೋಡಲ್ ಅಧಿಕಾರಿಗಳೆಂದು ನೇಮಕ ಮಾಡಿ ಆದೇಶಿಸಲಾಗಿದ್ದು, ಈ ಎಲ್ಲಾ ಅಧಿಕಾರಿಗಳು ಕೂಡಲೇ ಅರ್ಹ ಮತದಾರರನ್ನು ಗುರುತಿಸಿ ನೋಂದಣಿಗಾಗಿ ಅರ್ಜಿಗಳನ್ನು ಸ್ವೀಕರಿಸಲು, ಈ ಕುರಿತು ವ್ಯಾಪಕ ಪ್ರಚಾರ ನೀಡಲು ಮತ್ತು ಅರ್ಜಿ ಸ್ವೀಕೃತಿ ಸಂಖ್ಯೆಯನ್ನು ಹೆಚ್ಚಿಸುವಂತೆ ಎಂದು ತಿಳಿಸಿದರು.ಸಂಬಂಧಿಸಿದ ಅಧಿಕಾರಿಗಳು ಪ್ರತಿ ದಿನ ಮಾಹಿತಿಯನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ನೀಡಿ ಅದರ ವರದಿಯನ್ನು ಕಡ್ಡಾಯ ಸಲ್ಲಿಸಬೇಕು ಎಂದ ಅವರು, ಹಾಗೆಯೇ ನೋಂದಣಿಗೆ ಭರ್ತಿಯಾಗದೇ ಉಳಿದ ಅರ್ಜಿ ನಮೂನೆಗಳನ್ನು ಹಿಂದಿರುಗಿಸಬೇಕು ಎಂದರು.ಸಭೆಯಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಬಿ.ಉಮಾದೇವಿ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಗೋಪಾಲಸ್ವಾಮಿ, ಜಿಲ್ಲಾ ಪಂಚಾಯತ್ ಸಹಾಯಕ ನಿರ್ದೇಶಕ ಬಸವರಾಜ್ ಹಿರೇಮಠ ಸೇರಿದಂತೆ ಜಿಲ್ಲೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬಿಆರ್ ಪಿ-ಸಿಆರ್ ಪಿ ಅಧಿಕಾರಿಗಳು, ವಿವಿಧ ಶಾಲಾ-ಕಾಲೇಜು, ವಿದ್ಯಾಸಂಸ್ಥೆಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

### ರಾಜ್ಯದ ಪಾಲಿಟೆಕ್ನಿಕ್‌ಗಳಲ್ಲಿ ಕನಿಷ್ಠ ನಾಲ್ಕು ಕೋರ್ಸ್‌ಗೆ ತೀರ್ಮಾನ

# ಬೇಡಿಕೆಗೆ ಅನುಗುಣವಾಗಿ ಹೆಚ್ಚುವರಿ ಕೋರ್ಸ್: ಸಚಿವ ಡಾ.ಸುಧಾಕರ್

**ಚಿಕ್ಕಮಗಳೂರು, ಅ.28:** ರಾಜ್ಯದ ಎಲ್ಲ ಪಾಲಿಟೆಕ್ನಿಕ್‌ಗಳಲ್ಲಿ ಸಮಾನಾಂತರವಾಗಿ ಕನಿಷ್ಠ ನಾಲ್ಕು ಕೋರ್ಸ್‌ಗಳನ್ನು ಆರಂಭಿಸಲು ಹಾಗೂ ಬೇಡಿಕೆ ಇರುವ ಕಡೆಗಳಲ್ಲಿ ಅಗತ್ಯವಿರುವ ಹೆಚ್ಚುವರಿ ಕೋರ್ಸ್‌ಗಳನ್ನು ಆರಂಭಿಸಲು ತೀರ್ಮಾನಿಸಲಾಗಿದ್ದು, ಸದ್ಯದಲ್ಲೇ ತಾಂತ್ರಿಕ ಶಿಕ್ಷಣ ಇಲಾಖೆಗೆ ಪ್ರಸ್ತಾವನೆ ಸಲ್ಲಿಸುವುದಾಗಿ ರಾಜ್ಯ ಉನ್ನತ ಶಿಕ್ಷಣ ಖಾತೆ ಸಚಿವರಾದ ಡಾ.ಎಂ.ಸಿ.ಸುಧಾಕರ್ ತಿಳಿಸಿದರು.

ತರೀಕೆರೆಯ ಭಾವಿಕೆರೆಯಲ್ಲಿ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ತರೀಕೆರೆಯ ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಬೆಂಗಳೂರಿನ ರೈಟ್ಸ್ ಲಿಮಿಟೆಡ್‌ನ ಸಂಯುಕ್ತ ಆಶ್ರಯದಲ್ಲಿ ಇಂದು ನೂತನ ಸರ್ಕಾರಿ ಪಾಲಿಟೆಕ್ನಿಕ್ ಕಟ್ಟಡದ ಉದ್ಘಾಟನೆ ಹಾಗೂ ಹೆಚ್ಚುವರಿ ಕೊಠಡಿಗಳು ಮತ್ತು ವರ್ಕ್‌ಶಾಪ್ ಕಟ್ಟಡದ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.

ಪಾಲಿಟೆಕ್ನಿಕ್‌ಗಳಲ್ಲಿ ಆಯಾ ಭಾಗಗಳಲ್ಲಿರುವ ಬೇಡಿಕೆಗೆ ಅನುಗುಣವಾಗಿ ಅಗತ್ಯವಿರುವ ಕೋರ್ಸ್‌ಗಳನ್ನು ಆರಂಭಿಸಲು ಕ್ರಮ ಕೈಗೊಳ್ಳಲಾಗಿದ್ದು, ಈ ಬಗ್ಗೆ ಎ.ಐ.ಸಿ.ಟಿ.ಗೆ ಪ್ರಸ್ತಾವನೆ ಕಳುಹಿಸಲಾಗುವುದು. ಈ ಬಗ್ಗೆ ಹಣಕಾಸು ಇಲಾಖೆಯ ಗಮನಕ್ಕೂ ತಂದಿದ್ದು, ಮುಂದಿನ ವರ್ಷದಿಂದಲೇ ಸಮಾನಾಂತರವಾಗಿ ಕೋರ್ಸ್‌ಗಳನ್ನು ಆರಂಭಿಸಲು ಕ್ರಮ ಕೈಗೊಳ್ಳಲಾಗುವುದು. ಹಾಗೆಯೇ ಸ್ಥಳಾವಕಾಶ ಹೊಂದಿರುವ ಹಳೆಯ ಪಾಲಿಟೆಕ್ನಿಕ್‌ಗಳಲ್ಲಿ ಹೆಚ್ಚುವರಿ ಕೋರ್ಸ್‌ಗಳನ್ನು ಹಾಗೂ ಉದಯೋನ್ಮುಖ ಕೋರ್ಸ್‌ಗಳನ್ನು ಕೂಡ ಪ್ರಾರಂಭಿಸಲು ನಿರ್ಧರಿಸಲಾಗಿದೆ ಎಂದರು.

ರಾಜ್ಯದಲ್ಲಿ 107 ಪಾಲಿಟೆಕ್ನಿಕ್‌ಗಳಿದ್ದು, ರಾಜ್ಯದ ಪ್ರಪ್ರಥಮ ಸಂಸ್ಥೆಯಾದ ಶ್ರೀ ಜಯಚಾಮರಾಜೇಂದ್ರ ಪಾಲಿಟೆಕ್ನಿಕ್‌ನಲ್ಲಿ ಮಾತ್ರ 16 ಕೋರ್ಸ್‌ಗಳಿರುವುದನ್ನು ಹೊರತುಪಡಿಸಿದರೆ ತಲಾ 8 ರಿಂದ 9 ಕೋಟಿ ರೂ. ವೆಚ್ಚ ಮಾಡಿ ಪ್ರಾರಂಭಿಸಿದ 3 ಪಾಲಿಟೆಕ್ನಿಕ್‌ಗಳಲ್ಲಿ ಕೇವಲ ಒಂದು ಕೋರ್ಸ್ ಮಾತ್ರ ಇದೆ. ಸುಮಾರು 13 ಪಾಲಿಟೆಕ್ನಿಕ್‌ಗಳಲ್ಲಿ ಎರಡು ಕೋರ್ಸ್‌ಗಳು ಮಾತ್ರ ಇವೆ. ಇನ್ನು 4 ಕೋರ್ಸ್‌ಗಳಿರುವ ಪಾಲಿಟೆಕ್ನಿಕ್‌ಗಳು ಬೇರೆಯೇ ಇವೆ ಎಂದು ಹೇಳಿದರು.

2023ರ ನವೆಂಬರ್‌ನಲ್ಲಿ ತರೀಕೆರೆ ಮತ್ತು ಹಾವೇರಿ ಜಿಲ್ಲೆಯ ಬ್ಯಾಡಗಿ ಪಾಲಿಟೆಕ್ನಿಕ್



ಕಾಲೇಜುಗಳಲ್ಲಿ ನಾಲ್ಕು ವಿಭಾಗಗಳನ್ನು ಆರಂಭಿಸಲು ಎ.ಐ.ಸಿ.ಟಿ.ಗೆ ಪ್ರಸ್ತಾವನೆಯನ್ನು ಸಲ್ಲಿಸಿ ಅನುಮತಿ ದೊರಕಿದ ಬಳಿಕ ಈ ಯೋಜನೆ ಕಾರ್ಯಗತವಾಗಿದೆ. ಈಗಾಗಲೇ ಕಾಲೇಜು ಆರಂಭವಾಗಿ ತಡವಾಗಿದ್ದು, ಇದೀಗ ಉದ್ಘಾಟಿಸಲಾಗಿದೆ. ಕಡೂರಿನಲ್ಲಿ 2023 ರಲ್ಲೇ 3 ಕೋರ್ಸ್‌ಗಳ ಪಾಲಿಟೆಕ್ನಿಕ್ ಪ್ರಾರಂಭವಾಗಿದ್ದು, ಅಧಿಕೃತವಾಗಿ ಇನ್ನೂ ಉದ್ಘಾಟನೆಯಾಗಿಲ್ಲ ಎಂದರು.

ಬಹಳಷ್ಟು ಜಿಲ್ಲೆಗಳಲ್ಲಿ ಪಾಲಿಟೆಕ್ನಿಕ್‌ಗಳು, ಇಂಜಿನಿಯರಿಂಗ್ ಕಾಲೇಜುಗಳಿಗೆ ಬೇಡಿಕೆ ಇರುವುದಾಗಿ ತಿಳಿಸಿದ ಅವರು, ಕೆಲವು ಕಡೆಗಳಲ್ಲಿ ಅಗತ್ಯಕ್ಕಿಂತ ಹೆಚ್ಚು ಪಾಲಿಟೆಕ್ನಿಕ್‌ಗಳು ಹಾಗೂ ಕಾಲೇಜುಗಳು ಇರುವುದು ತಮ್ಮ ಗಮನಕ್ಕೆ ಬಂದಿದೆ. ಉನ್ನತ ಶಿಕ್ಷಣ ಇಲಾಖೆಯಲ್ಲಿ ಒಟ್ಟು ದಾಖಲಾತಿ ಅನುಪಾತ ಎನ್ನಲಾಗುತ್ತದೆ. ಉನ್ನತ ಶಿಕ್ಷಣದ ಸಂಸ್ಥೆಗಳಲ್ಲಿ ದಾಖಲಾತಿ ಪ್ರಮಾಣದಲ್ಲಿ ರಾಷ್ಟ್ರೀಯ ಸರಾಸರಿ ಶೇ.30 ರಷ್ಟಿದೆ. ಬೇರೆ ಬೇರೆ ಕೆಲವು ಸಣ್ಣ ಸಣ್ಣ ರಾಜ್ಯಗಳು, ಕೇರಳ, ತಮಿಳುನಾಡುಗಳಲ್ಲಿ ಶೇ.47 ರಿಂದ ಶೇ.50 ಕ್ಕಿಂತ ಹೆಚ್ಚಿವೆ. ಇನ್ನು ಕೆಲವು ರಾಜ್ಯಗಳಲ್ಲಿ ಇನ್ನೂ ಹೆಚ್ಚಿವೆ. ನೀತಿ ಆಯೋಗದ ಹೊಸ ಅಧ್ಯಯನದ ಪ್ರಕಾರ ದೇಶದ ದಾಖಲಾತಿ ಅನುಪಾತದಲ್ಲಿ ಕರ್ನಾಟಕ ಶೇ.36 ರಷ್ಟಿದೆ. ಆದರೆ ನೀತಿ ಆಯೋಗದಲ್ಲಿ ದೇಶದಲ್ಲಿ ಒಂದು ಲಕ್ಷ ಜನಸಂಖ್ಯೆಗೆ ಇರುವ ಉನ್ನತ ಶಿಕ್ಷಣ ಸಂಸ್ಥೆಗಳ ಮಾಹಿತಿ ಬಹಿರಂಗಪಡಿಸಿದೆ. ರಾಷ್ಟ್ರೀಯ ಸರಾಸರಿ ಒಂದು ಲಕ್ಷ ಜನಸಂಖ್ಯೆಗೆ 30 ಕಾಲೇಜು ಇರಬೇಕೆಂದು

ಶಾಸಕ ಜಿ.ಹೆಚ್.ಶ್ರೀನಿವಾಸ್ ಮಾತನಾಡಿ, ತಾವು 2013–18ರವರೆಗೆ ಶಾಸಕರಾಗಿದ್ದ ಅವಧಿಯಲ್ಲಿ ಉನ್ನತ ಶಿಕ್ಷಣ ಸಚಿವರಾಗಿದ್ದ ಬಸವರಾಜ ರಾಯರೆಡ್ಡಿಯವರು ಇಡೀ ರಾಜ್ಯದಲ್ಲಿ 17 ಕಾಲೇಜುಗಳನ್ನು ಮಂಜೂರು ಮಾಡಿದ್ದರು. ಆ ಹಿನ್ನೆಲೆಯಲ್ಲಿ ಇಲ್ಲಿ ಈ ಕಾಲೇಜು ಸ್ಥಾಪನೆ ಸಂಬಂಧ ಗುದ್ದಲಿಪೂಜೆ ನೆರವೇರಿಸಲಾಗಿತ್ತು. ಇದೀಗ ಕಟ್ಟಡ ನಿರ್ಮಾಣಗೊಂಡು ಉದ್ಘಾಟನೆಯಾಗಿದೆ. ಅದೇ ರೀತಿ ತುಂಬಾ ವರ್ಷಗಳ ಹಿಂದೆ ತರೀಕೆರೆ ಪದವಿ ಕಾಲೇಜು ಮಂಜೂರಾಗಿದ್ದರೂ ಜಾಗದ ಸಮಸ್ಯೆಯಿಂದಾಗಿ ಅರಣ್ಯ ಇಲಾಖೆಯಿಂದ ಜಾಗವನ್ನು ಗುತ್ತಿಗೆಗೆ ಪಡೆದುಕೊಂಡಿದ್ದರೂ 10–15 ವರ್ಷಗಳಾಗಿದ್ದರೂ ಕಾಲೇಜು ಆಗಿರಲಿಲ್ಲ. ಕೊನೆಗೂ ಈ ಯೋಜನೆ ಕಾರ್ಯಗತವಾಗಿದೆ. ಈ ಕಾಲೇಜಿನ ಕಟ್ಟಡದ ಮೇಲ್ಭಾಗದಲ್ಲಿ ಕಟ್ಟಡ ನಿರ್ಮಿಸಲು ಎರಡೂವರೆ ಕೋಟಿ ಹಣವನ್ನು ನೀಡಿದ್ದಾರೆ. ಆ ಕಾಮಗಾರಿಯೂ ಆರಂಭವಾಗಿದೆ ಎಂದು ತಿಳಿಸಿದರು.

ಈ ಕಾಲೇಜಿನ ಕಾಂಪೌಂಡ್, ಹಾಗೆಯೇ ಹೆಚ್ಚಿನ ಕೊಠಡಿಗಳು, ಪ್ರಯೋಗಶಾಲೆ, ಕಂಪ್ಯೂಟರ್ ವ್ಯವಸ್ಥೆಯಾಗಬೇಕಿದ್ದು, ಇವೆಲ್ಲಕ್ಕೂ ಸಚಿವರಾದ ಡಾ.ಸುಧಾಕರ್ ಅವರು 10 ಕೋಟಿ ರೂ.ಗಳನ್ನು ಈ ತಕ್ಷಣಕ್ಕೆ ಅಲ್ಲದಿದ್ದರೂ ಮುಂದಿನ ದಿನಗಳಲ್ಲಿ ಒದಗಿಸಬೇಕೆಂದು ಕೋರಿದರಲ್ಲದೆ, ಈ ಭಾಗಕ್ಕೆ ಇಂಜಿನಿಯರಿಂಗ್ ಕಾಲೇಜು ಒದಗಿಸಬೇಕೆಂಬುದು ಕೂಡ ನಮ್ಮ ಬೇಡಿಕೆಯಾಗಿದೆ. ಇಲ್ಲಿನ ಪದವಿ ಕಾಲೇಜಿನಲ್ಲಿ ಸುಮಾರು 600 ವಿದ್ಯಾರ್ಥಿಗಳಿದ್ದು, ಅಲ್ಲಿನ ಕೊಠಡಿಗಳನ್ನು ನಿರ್ಮಿಸಲು ತಮ್ಮ ಬೇಡಿಕೆಯಂತೆ ಸಚಿವರು ಸುಮಾರು ಒಂದು ಮುಕ್ಕಾಲು ಕೋಟಿ ಹಣವನ್ನು ಒದಗಿಸಿದ್ದು, ಕಟ್ಟಡ ಕಾಮಗಾರಿ ನಡೆಯುತ್ತಿದೆ. ಅದಲ್ಲದೆ 5 ಕೋಟಿ ರೂ.ಗಳನ್ನು ಕೂಡ ಒದಗಿಸಿದ್ದು, ಅವುಗಳ ಆಧಾರದಲ್ಲಿ ಕಾಮಗಾರಿಗಳು ನಡೆಯುತ್ತಿವೆ ಎಂದು ಹೇಳಿದರು.

ಭದ್ರಾ ಕಾಡಾ ಅಧ್ಯಕ್ಷ ಡಾ.ಕೆ.ಪಿ.ಅಂಶುಮಂತ್, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಂ.ಸಿ.ಶಿವಾನಂದಸ್ವಾಮಿ, ಉಪಾಧ್ಯಕ್ಷ ಶಮಿಯುಲ್ಲಾ, ಬಾವಿಕೆರೆ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಬಿ.ವಿ.ಜಯಂತಿ ಮಧುಸೂದನ್ ಗೌಡ, ರಾಜ್ಯ ಕಾಲೇಜು ಶಿಕ್ಷಣ ಇಲಾಖೆಯ ಜಂಟಿ ನಿರ್ದೇಶಕ ಕೇಶವ ಮೂರ್ತಿ, ಕುವೆಂಪು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯ ಅರವಿಂದ್, ಮುಖಂಡರಾದ ಫಾರುಖ್, ದಯಾನಂದ್, ಜಿಲ್ಲಾ ಕೆ.ಡಿ.ಪಿ. ಸದಸ್ಯ ಸಿರಾಜ್, ಬಗರ್ ಹುಕುಂ ಸಮಿತಿ ಸದಸ್ಯ ಜಗದೀಶ್, ತಹಸೀಲ್ದಾರ್ ವಿಶ್ವಜಿತ್ ಮೆಹ್ತಾ, ಮಂಜುನಾಥ್,

## ಕೀನ್ಯಾದಲ್ಲಿ ವಿಮಾನ ಅಪಘಾತ; 11 ಮಂದಿ ಸಾವು



**ನೈರೋಬಿ:** (ಅಕ್ಟೋಬರ್ 28) ಬೆಳಗ್ಗೆ ಕೀನ್ಯಾದ ಕರಾವಳಿ ಪ್ರದೇಶ ಕ್ವಾಲೆಯಲ್ಲಿ ಮಾಸಾಯಿ ಮಾರಾ ರಾಷ್ಟ್ರೀಯ ಅಭಯಾರಣ್ಯಕ್ಕೆ ತೆರಳುತ್ತಿದ್ದ ಸಣ್ಣ ವಿಮಾನವೊಂದು ಅಪಘಾತಕ್ಕೀಡಾಗಿದ್ದು, 11 ಜನರು ಸಾವನ್ನಪ್ಪಿರುವ ಶಂಕೆ ವ್ಯಕ್ತವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಡಯಾನಿ ವಾಯುನೆಲೆಯಿಂದ ಸುಮಾರು 40 ಕಿಲೋ ಮೀಟರ್ ದೂರದಲ್ಲಿರುವ ಗುಡ್ಡಗಾಡು ಪ್ರದೇಶದಲ್ಲಿ ಅಪಘಾತ ಸಂಭವಿಸಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಕ್ವಾಲೆ ಕೌಂಟಿ ಆಯುಕ್ತ ಸ್ಟೀಫನ್ ಒರಿಂಡೆ ಅಸೋಸಿಯೇಟೆಡ್ ಈ ಬಗ್ಗೆ ಮಾತನಾಡಿ, ಪ್ರಯಾಣಿಕರೆಲ್ಲರೂ ವಿದೇಶಿ ಪ್ರವಾಸಿಗರು ಎಂದು ತಿಳಿಸಿದ್ದಾರೆ.

ಮೃತರ ಪೈಕಿ 8 ಮಂದಿ ಹಂಗೇರಿ ಪ್ರಜೆಗಳು, ಇಬ್ಬರು ಜರ್ಮನ್ ಪ್ರಯಾಣಿಕರು ಮತ್ತು ಕೀನ್ಯಾದ ಕ್ಯಾಪ್ಟನ್ ಎಂದು ಗುರಿತಿಸಲಾಗಿದೆ. ಅಪಘಾತದ ಬಳಿಕ ವಿಮಾನದಲ್ಲಿ ಬೆಂಕಿ ಕಾಣಿಸಿಕೊಂಡು ಸಂಪೂರ್ಣ ಸುಟ್ಟು ಭಸ್ಮವಾಗಿದೆ. ಅಪಘಾತಕ್ಕೆ ಕಾರಣ ಇನ್ನೂ ಸ್ಪಷ್ಟವಾಗಿಲ್ಲ. ಈ ಬಗ್ಗೆ ಅಧಿಕಾರಿಗಳಿ ತನಿಖೆ ಕೈಗೆತ್ತಿಕೊಂಡಿದ್ದಾರೆ. ಕೆಟ್ಟ ಹವಾಮಾನದ ಕಾರಣದಿಂದ ಅಪಘಾತ ಸಂಭವಿಸಿರುವ ಸಾಧ್ಯತೆ ಇದೆ ಎಂದು ಊಹಿಸಲಾಗಿದೆ.

## ರೈಲ್ವೆ ನೇಮಕಾತಿ ಮಂಡಳಿಯಿಂದ 5,810 ಹುದ್ದೆಗಳ ಭರ್ತಿಗೆ ಅರ್ಜಿ ಆಹ್ವಾನ

**ದೆಹಲಿ:** ಕೇಂದ್ರ ಸರ್ಕಾರದ ಉದ್ಯೋಗ ಪಡೆದುಕೊಳ್ಳಬೇಕು ಎನ್ನುವುದು ಬಹುತೇಕರ ಕನಸು. ಇದೀಗ ಅಂತಹ ಕನಸು ನನಸಾಗುವ ದಿನ ಬಂದಿದೆ. ಖಾಲಿ ಇರುವ ಬರೋಬ್ಬರಿ 5,810 ಹುದ್ದೆಗಳ ಭರ್ತಿಗೆ ರೈಲ್ವೆ ಸಚಿವಾಲಯದ ರೈಲ್ವೆ ನೇಮಕಾತಿ ಮಂಡಳಿ ಅರ್ಜಿ ಆಹ್ವಾನಿಸಿದೆ ಸ್ಟೇಷನ್ ಮಾಸ್ಟರ್, ಸೀನಿಯರ್ ಕ್ಲರ್ಕ್ & ಟೈಪಿಸ್ಟ್ ಮುಂತಾದ ಹುದ್ದೆಗಳಿದ್ದು, ಪದವಿ ವಿದ್ಯಾರ್ಹತೆ ಹೊಂದಿದವರು ಅರ್ಜಿ ಸಲ್ಲಿಸಬಹುದು ಉದ್ಯೋಗದ ಸ್ಥಳ: ದೇಶಾದ್ಯಂತ ಆಸಕ್ತರು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಿದ್ದು, ಕೊನೆಯ ದಿನ ನವೆಂಬರ್ 20.


# ರಾಜ್ಯ ಸರ್ಕಾರ ಆರ್ಥಿಕ ಬಿಕ್ಕಟ್ಟಿನಲ್ಲಿದೆ, ಮರೆಮಾಚಲು ಬಿಜೆಪಿಯನ್ನು ದೂಷಿಸುತ್ತಿದೆ: ಬಸವರಾಜ ಬೊಮ್ಮಾಯಿ

**ಬೆಂಗಳೂರು:** ರಾಜ್ಯದ ಆಡಳಿತಾರೂಢ ಕಾಂಗ್ರೆಸ್ ಸರ್ಕಾರ ಆರ್ಥಿಕ ಬಿಕ್ಕಟ್ಟಿನಲ್ಲಿದ್ದು, ಅದನ್ನು ಮುಚ್ಚಿಹಾಕಲು ಬಿಜೆಪಿ ಸಂಸದರ ವಿರುದ್ಧ ಆರೋಪಗಳನ್ನು ಮಾಡುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಮತ್ತು ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ಅವರು ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆರ್‌ಎಸ್‌ಎಸ್ ವಿರುದ್ಧ ರಾಜ್ಯ ಸರ್ಕಾರ ಮೂಲ ಸಂವಿಧಾನಕ್ಕೆ ವ್ಯತಿರಿಕ್ತವಾಗಿ ಆದೇಶ ಮಾಡಿದೆ. ಇದು ಕೋರ್ಟ್‌ನಲ್ಲಿ ನಿಲ್ಲುವುದಿಲ್ಲ ಎಂದು ಹೇಳಿದರು.

ನಾವು ಆರ್‌ಎಸ್‌ಎಸ್ ಕಾರ್ಯಕ್ರಮಗಳಿಂದ ದೂರ ಉಳಿಯುವ ಪ್ರಶ್ನೆಯೇ ಇಲ್ಲ. ಇದು ಸ್ವತಂತ್ರ ದೇಶ – ನಮಗೆ ವಾಕ್ ಸ್ವಾತಂತ್ರ್ಯ, ವೈಯಕ್ತಿಕ ಸ್ವಾತಂತ್ರ್ಯ, ಸಾಮಾಜಿಕ ಮತ್ತು ಧಾರ್ಮಿಕ ಸ್ವಾತಂತ್ರ್ಯವಿದೆ. ಆರ್‌ಎಸ್‌ಎಸ್ ವಿರುದ್ಧದ ರಾಜ್ಯ ಸರ್ಕಾರದ ಆದೇಶವು ಮೂಲ ಸಂವಿಧಾನಕ್ಕೆ ವಿರುದ್ಧವಾಗಿದೆ ಯಾವುದೇ ನ್ಯಾಯಾಲಯದಲ್ಲಿ ನಿಲ್ಲುವುದಿಲ್ಲ ಎಂದು ತಿಳಿಸಿದರು.

ಬೇರೆ ಸಂಘಟನೆಗಳು ಪಥ ಸಂಚಲನಕ್ಕೆ ಅವಕಾಶ ಕೇಳಿರುವ ಕುರಿತ ಪ್ರಶ್ನೆಗೆ ಪ್ರತಿಕ್ರಿಯಿಸಿ, ಯಾರು ಪಥ ಸಂಚಲನ ಕಾರ್ಯಕ್ರಮ ಮಾಡುತ್ತಾರೆ ಅವರಿಗೆ ಅವಕಾಶ ಇದೆ. ಬೇರೆ ಸಂಘಟನೆಗಳು ಪಥ ಸಂಚಲನ ಮಾಡುವುದಿದ್ದರೆ ಮಾಡಲಿ. ಇದು ದೊಡ್ಡ ದೇಶ. ಇಲ್ಲಿ ಎಲ್ಲ ಸಂಘಟನೆಗಳಿಗೆ ಅವಕಾಶ ಕೊಡಬೇಕು. ಪಥ ಸಂಚಲನಕ್ಕೆ ಅವಕಾಶ ಕೊಡುವ ವಿಚಾರದಲ್ಲಿ ಕೋರ್ಟ್ ಸರಿಯಾದ ತೀರ್ಮಾನ ಮಾಡಿದೆ.



ನವೆಂಬರ್ 2ಕ್ಕೆ ಪಥ ಸಂಚಲನಕ್ಕೆ ಮುಂಜಾಗ್ರತೆ ಕ್ರಮದ ಬಗ್ಗೆ ಸರ್ಕಾರಕ್ಕೆ ಎಚ್ಚರಿಸಿದೆ. ಶಾಂತಿ ಸುವ್ಯವಸ್ಥೆ ಕಾಪಾಡಿ ಅವಕಾಶ ಕಲ್ಪಿಸಬೇಕು ಎಂದು ಸೂಚಿಸಿದೆ. ಪಥ ಸಂಚಲನ ಎಲ್ಲ ಕಡೆ ನಡೆದಿದೆ. ಎಲ್ಲಿ ಆಕ್ಷೇಪ ಇದೆಯೋ ಅಲ್ಲಿ ತೊಂದರೆಯಾಗಿದೆ. ಸರ್ಕಾರದ ಆದೇಶದಿಂದ ಗೊಂದಲ ಉಂಟಾಗಿದೆ ಎಂದರು.

ಪಥ ಸಂಚಲನದಲ್ಲಿ ದೊಣ್ಣೆಗಳನ್ನು ಬಳಸುವ ಬಗ್ಗೆ ಸಚಿವರು ಆಕ್ಷೇಪ ಎತ್ತುತ್ತಾರೆ ಎನ್ನುವ ಕುರಿತು ಪ್ರಶ್ನೆಗೆ ಉತ್ತರಿಸಿ, ಪಥ ಸಂಚಲನದಿಂದ ಯಾರಿಗಾದರೂ ತೊಂದರೆಯಾಗಿದೆಯಾ? ಸರ್ಕಾರ ಸಮಾಜದಲ್ಲಿ ಕ್ಷೋಭೆ ಉಂಟುಮಾಡುವ ಕೆಲಸ ಮಾಡುತ್ತಿದೆ. ಇಷ್ಟು ವರ್ಷದಿಂದ ಸಂಘ ಪಥ ಸಂಚಲನ ಮಾಡುತ್ತಿದೆ. ಯಾರಿಗಾದರೂ ತೊಂದರೆಯಾಗಿದೆಯಾ?. ಮೊಹರಂನಲ್ಲಿ ಕಬ್ಬಿಣದ ಚಾಟಿಯಿಂದ ಹೊಡೆದುಕೊಳ್ಳುತ್ತಾರೆ ಅದು ಸರಿನಾ? ಜಗತ್ತಿನಲ್ಲಿ ಎಲ್ಲರಿಗೂ ಅವರದೇ ಆದ ನಂಬಿಕೆಗಳಿವೆ. ಸರ್ಕಾರ ಅವುಗಳಿಗೆ ಧಕ್ಕೆ ತರುವ ಕೆಲಸ ಮಾಡುವುದು ಸರಿಯಲ್ಲ. ಸರ್ಕಾರದ ಎದುರು ಸಾಕಷ್ಟು ಸಮಸ್ಯೆಗಳಿವೆ. ಸಾಕಷ್ಟು ಮಳೆಯಾಗಿದೆ, ಅದಕ್ಕೆ ಪರಿಹಾರ ಕೊಡುವುದನ್ನು ಬಿಟ್ಟು ಜನರ ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ರಾಜ್ಯ ಸರ್ಕಾರ ಆರ್ಥಿಕ ದುಸ್ಥಿತಿಯಲ್ಲಿದೆ. ಅದನ್ನು ಮುಚ್ಚಿಕೊಳ್ಳಲು ಆರೋಪ ಮಾಡುತ್ತಿದ್ದಾರೆ. ಕೋವಿಡ್ ಸಂದರ್ಭದಲ್ಲಿ ರಾಜ್ಯಕ್ಕೆ ಕೇಂದ್ರದಿಂದ ಬರುವಷ್ಟು ಹಣ ಬಂದಿದೆ. ರಾಜ್ಯದ ರೈಲ್ವೆ ಯೋಜನೆಗಳಿಗೆ ಯುಪಿಎ ಅವಧಿಯಲ್ಲಿ 5 ಸಾವಿರ ಕೋಟಿ ರೂ. ಘೋಷಣೆ ಆಗಿತ್ತು, ಆದರೆ, ಅದು ಬಿಡುಗಡೆ ಆಗಿರಲಿಲ್ಲ. ನಮ್ಮ ಅವಧಿಯಲ್ಲಿ ಪ್ರತಿ ವರ್ಷ ಅದಕ್ಕಿಂತ ಹೆಚ್ಚು ಹಣ ರಾಜ್ಯಕ್ಕೆ ಬಂದಿದೆ. ರಾಜ್ಯ ಸರ್ಕಾರ ತಮ್ಮ ಲೋಪ ಮುಚ್ಚಿಕೊಳ್ಳಲು ಎಂಪಿಗಳ ವಿರುದ್ಧ ಆರೋಪ ಮಾಡುತ್ತಿದ್ದಾರೆ ಎಂದು ತಿರುಗೇಟು ನೀಡಿದರು.

## ಗಾಂಧಿನಗರ ಕ್ಷೇತ್ರದಲ್ಲಿ 11,200 ನಕಲಿ ಮತದಾರರು

### ಚುನಾವಣಾ ಆಯೋಗಕ್ಕೆ ಬೆಂಗಳೂರು ಸೆಂಟ್ರಲ್‌ನ 'ವೋಟ್ ಚೋರಿ' ಡೇಟಾ ಸಲ್ಲಿಕೆ

**ಬೆಂಗಳೂರು:** ಗಾಂಧಿನಗರ ಕ್ಷೇತ್ರದಲ್ಲಿ 11,200 ನಕಲಿ ಮತದಾರರಿದ್ದಾರೆ. ಮತಗಳ್ಳತನ ನಡೆಯದಿದ್ದರೆ ಬೆಂಗಳೂರು ಸೆಂಟ್ರಲ್ ಕ್ಷೇತ್ರಕ್ಕೆ ಕಾಂಗ್ರೆಸ್ ಸಂಸದರು ಆಯ್ಕೆ ಆಗುತ್ತಿದ್ದರು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಗಾಂಧಿನಗರ ವಿಧಾನಸಭಾ ಕ್ಷೇತ್ರದ ಸನ್ ರೈಸ್ ಸರ್ಕಲ್‌ನಲ್ಲಿ ಮತಗಳ್ಳತನ (ವೋಟ್ ಚೋರಿ) ವಿರುದ್ಧ ನಡೆಯುತ್ತಿರುವ 'ಮತದಾರರ ಹಕ್ಕುಗಳಿಗಾಗಿ ಸಹಿ ಸಂಗ್ರಹ ಅಭಿಯಾನ'ಕ್ಕೆ ಚಾಲನೆ ನೀಡಿ ಅವರು ಮಾತನಾಡಿದ ಅವರು, ನಕಲಿ ಮತದಾರರ ಪಟ್ಟಿಯನ್ನು ದಾಖಲೆ ಸಮೇತ ಚುನಾವಣಾ ಆಯೋಗಕ್ಕೆ ಸಲ್ಲಿಸಿದ್ದರೂ, ಇನ್ನು ಯಾವುದೇ ಕ್ರಮ ಆಗಿಲ್ಲ. ನಕಲಿ ಮತಗಳ ಅಳಿಸುವ ಪ್ರಕ್ರಿಯೆಗೆ ಚುನಾವಣಾ ಆಯೋಗ ಇನ್ನೂ ಮೀನಮೇಷ ಎಣಿಸುತ್ತಿರುವುದು ಏಕೆ ಎಂದು ಪ್ರಶ್ನಿಸಿದರು.

ದೇಶದಲ್ಲಿ ಈಗಾಗಲೇ ಮತಗಳ್ಳತನ ವಿರುದ್ಧ ಲೋಕಸಭೆ ವಿಪಕ್ಷ ನಾಯಕ



ರಾಹುಲ್ ಗಾಂಧಿಯವರು ಸವಿಸ್ತಾರವಾಗಿ ದೇಶದ ಜನತೆಗೆ ದಾಖಲೆಯ ಸಮೇತವಾಗಿ ನಿರೂಪಿಸಿದ್ದಾರೆ. ಇದು ಇಡೀ ದೇಶವೇ ಆತಂಕಪಡುವ ಸ್ಥಿತಿಯಲ್ಲಿದೆ. ಸಾಂವಿಧಾನಿಕ ಪೀಠಗಳನ್ನು ಬಿಜೆಪಿ ತಮ್ಮ ಮತ ಬ್ಯಾಂಕ್ ಮಾಡಿಕೊಂಡಿರುವುದು ಖಂಡನೀಯ ಎಂದು ದಿನೇಶ್ ಗುಂಡೂರಾವ್ ಟೀಕಿಸಿದರು.

ಕರ್ನಾಟಕ ರಾಜ್ಯದ ಮಹದೇವಪುರ ಕ್ಷೇತ್ರದಲ್ಲಿ ಸುಮಾರು 1 ಲಕ್ಷಕ್ಕೂ ಹೆಚ್ಚು ನಕಲಿ ಮತದಾರರನ್ನು ಸೃಷ್ಟಿಸಿ, ಅವರಿಂದ ಮತದಾನ ಪಡೆದುಕೊಂಡು ಅಧಿಕಾರಕ್ಕೆ ಬಂದ ಬಿಜೆಪಿ ಸರಕಾರಕ್ಕೆ ಜನರು ಪ್ರಶ್ನೆ ಮಾಡಬೇಕಾಗಿದೆ.

ಇದು ಸಂಪೂರ್ಣ ಪ್ರಜಾಪ್ರಭುತ್ವದ ಕಗ್ಗೊಲೆ. ಆಯೋಗವನ್ನು ತಮ್ಮ ಕೈಗೊಂಬೆಯಾಗಿಸಿಕೊಂಡು ಇಲ್ಲದೇ ಇರುವ ಮತದಾರರನ್ನು ಸೃಷ್ಟಿಸಿ, ಸಾಂವಿಧಾನಿಕ ಮೌಲ್ಯಗಳನ್ನು ಮೂಲೆಗುಂಪು ಮಾಡಿ ಮತಗಳ್ಳತನ ನಡೆಸಿ ಅಧಿಕಾರಕ್ಕೆ ಬಂದಿರುವುದು ಶೋಚನೀಯ. ನಾವು ನಡೆಸುತ್ತಿರುವ ಮತಗಳ್ಳತನ 'ವೋಟ್ ಚೋರಿ' ವಿರುದ್ಧ ನಡೆಯುತ್ತಿರುವ ಮತದಾರರ ಹಕ್ಕುಗಳಿಗಾಗಿ ಸಹಿ ಸಂಗ್ರಹ ಅಭಿಯಾನ ಕಾರ್ಯಕ್ರಮವನ್ನು ಯಶ್ವಸಿಯಾಗಿ ನಡೆಸಿ ಕಣ್ಣಿಗೆ ಕಪ್ಪುಪಟ್ಟಿ ಕಟ್ಟಿಕೊಂಡು ನಿದ್ರೆ ಮಾಡುತ್ತಿರುವ ಅಧಿಕಾರಿಗಳನ್ನು ಎಚ್ಚರಿಸಬೇಕಾಗಿದೆ.

ದೇಶಾದ್ಯಂತ ಈ ಸಹಿ ಸಂಗ್ರಹ ನಡೆಯುತ್ತಿದ್ದು ಗಾಂಧಿನಗರ ಕ್ಷೇತ್ರದಿಂದಲೂ ಸುಮಾರು 1 ಲಕ್ಷಕ್ಕೂ ಅಧಿಕ ಸಹಿ ಸಂಗ್ರಹ ಮಾಡುವ ಗುರಿಯನ್ನು ಹೊಂದಿದೆ ಎಂದರು.

## ಅಕ್ರಮವಾಗಿ ಶ್ರೀಗಂಧದ ಮರ ಸಾಗಿಸುತ್ತಿದ್ದ ನಾಲ್ವರ ಬಂಧನ

**ಬೆಂಗಳೂರು:** 1.12 ಕೋಟಿ ರೂ. ಮೌಲ್ಯದ ಶ್ರೀಗಂಧದ ಮರದ ದಿಮ್ಮಿಗಳನ್ನು ಅಕ್ರಮವಾಗಿ ಸಾಗಿಸುತ್ತಿದ್ದ ಆರೋಪದ ಮೇಲೆ ಅಂತರರಾಜ್ಯ ಗ್ಯಾಂಗ್‌ನ ನಾಲ್ವವರನ್ನು ಬಂಧಿಸಲಾಗಿದೆ ಎಂದು ಪೊಲೀಸರು ಸೋಮವಾರ ತಿಳಿಸಿದ್ದಾರೆ.

ಬಂಧಿತ ಆರೋಪಿಗಳಿಂದ 750 ಕೆಜಿ ಶ್ರೀಗಂಧದ ಮರವನ್ನು ವಶಪಡಿಸಿಕೊಂಡಿದ್ದೇವೆ ಎಂದು ಪೊಲೀಸರು ಹೇಳಿದ್ದಾರೆ.

ಆರೋಪಿಗಳನ್ನು ಆಂಧ್ರಪ್ರದೇಶದ ಕರ್ನೂಲ್ ನಿವಾಸಿಗಳಾದ ಅಬ್ದುಲ್ ಕಲಾಂ(47), ರಾಮ ಭೋಪಾಲ್(40), ಶೇಖ್ ಶಾರುಖ್(31) ಮತ್ತು ಪರಮೇಶ್(30) ಎಂದು ಗುರುತಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸರ ಪ್ರಕಾರ, ಖಚಿತ ಮಾಹಿತಿ ಮೇರೆಗೆ ಕಾರ್ಯಾಚರಣೆ ನಡೆಸಿದ ಅಧಿಕಾರಿಗಳು ಅಕ್ಟೋಬರ್ 16 ರ ಮಧ್ಯರಾತ್ರಿಯ ಸುಮಾರಿಗೆ ಸಿದ್ದಾಪುರ ಪ್ರದೇಶಕ್ಕೆ ಧಾವಿಸಿದರು. ಅಲ್ಲಿ ದೆಹಲಿ ನೋಂದಣಿ ಸಂಖ್ಯೆಯ ಮಹೀಂದ್ರಾ ಎಕ್ಸ್‌ಯುವಿ ಮತ್ತು ಆಂಧ್ರಪ್ರದೇಶ ನೋಂದಣಿ ಹೊಂದಿರುವ ಮಹೀಂದ್ರಾ ಬೊಲೆರೊ ಹೋಟೆಲ್ ಬಳಿ ಅನುಮಾನಾಸ್ಪದವಾಗಿ ನಿಂತಿರುವುದು ಕಂಡುಬಂದಿದೆ.

ವಾಹನಗಳಿಂದ ನಾಲ್ವರನ್ನು ಬಂಧಿಸಲಾಯಿತು ಮತ್ತು ತಪಾಸಣೆಯ ಸಮಯದಲ್ಲಿ ಕೊಳೆತ ಈರುಳ್ಳಿ ತುಂಬಿದ ಚೀಲಗಳು ಕಂಡುಬಂದಿವೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ."ಹೆಚ್ಚಿನ ಪರಿಶೀಲನೆ ನಡೆಸಿದಾಗ, ಚೀಲಗಳ ಒಳಗೆ ಶ್ರೀಗಂಧದ ಮರದ ದಿಮ್ಮಿಗಳನ್ನು ಮರೆಮಾಡಿರುವುದು ಕಂಡುಬಂದಿತು" ಎಂದು ಅಧಿಕಾರಿ ಹೇಳಿದ್ದಾರೆ.

## ನ.2 ಹಸಿರು ಭಾನುವಾರ ಅಭಿಯಾನಕ್ಕೆ ಚಾಲನೆ : ರೋಹನ್ ಭಾರ್ಗವಪುರಿ

**ಚಿಕ್ಕಮಗಳೂರು:** ಐಸಿರಿ ಫೌಂಡೇಶನ್ ವತಿಯಿಂದ



ಐಸಿರಿ ಸಸ್ಟೈನಿಬಿಲಿಟಿ ಅಂಗವಾಗಿ ಹಸಿರು ಸಮರ್ಥನೀಯ ಭವಿಷ್ಯಕ್ಕಾಗಿ ನ.2 ಭಾನುವಾರದಿಂದ "ಹಸಿರು ಭಾನುವಾರ"ಅಭಿಯಾನಕ್ಕೆ ಚಾಲನೆ ನೀಡುತ್ತಿರುವುದಾಗಿ ಐಸಿರಿ ಫೌಂಡೇಶನ್ ಅಧ್ಯಕ್ಷ ರೋಹನ್ ಭಾರ್ಗವಪುರಿ ತಿಳಿಸಿದ್ದಾರೆ.

ಪತ್ರಿಕಾ ಹೇಳಿಕೆಯಲ್ಲಿ ಈ ವಿಷಯ ತಿಳಿಸಿರುವ ಅವರು, ಪ್ರತೀ ಭಾನುವಾರ ಒಂದು ಗ್ರಾಮಕ್ಕೆ ಭೇಟಿನೀಡಿ ಒಂದು ಮನೆ, ಒಂದು ಪೂಜ್ಯನೀಯ ಸಸ್ಯ ನೆಡುವ ಕಾರ್ಯಕ್ರಮ ಇದಾಗಿದೆ ಎಂದು ತಿಳಿಸಿದ್ದಾರೆ.

ನಾಗರಿಕರು ತಮ್ಮ ಮನೆಯಲ್ಲಿ ಒಂದು ಭಾನುವಾರ ಐಸಿರಿಯೊಂದಿಗೆ ಹಸಿರು ಭಾನುವಾರ ಅಭಿಯಾನಕ್ಕೆ ಕೈಜೋಡಿಸಲು ಮನೆಯ ಹೆಸರು, ವಿಳಾಸ ಹಾಗೂ ಗ್ರಾಮದ ಹೆಸರಿನ ವಿವರಣೆಯನ್ನು ಈ ವಾಟ್ಸಾಪ್ ನಂಬರ್–7975408162 ಸಂಖ್ಯೆಗೆ ಕಳುಹಿಸುವಂತೆ ಮನವಿ ಮಾಡಿದ್ದಾರೆ.

ಪ್ರತೀ ಭಾನುವಾರ ಇನ್ನಷ್ಟು ಹಸಿರು ಸಂದೇಶ ಕೊಡುವ ಸಕಾರಾತ್ಮಕ, ಸಾತ್ವಿಕ ಹಾಗೂ ಸದುದ್ದೇಶದಿಂದ ಐಸಿರಿ ತಂಡ ನಿಮ್ಮ ಮನೆಗೆ ಬರಲಿದೆ ಎಂದು ತಿಳಿಸಿದ್ದಾರೆ.

ಈ ಅಭಿಯಾನ ಹಸಿರೇ ಉಸಿರು ಹಾಗೂ ಭವಿಷ್ಯದ ಸುಧಾರಣೆಗೆ ಹಸಿರು ಭಾನುವಾರ ನಿಮಗಾಗಿ ಎಂದು ಹೇಳಿದ್ದಾರೆ.

### ನ.16 ತಾಲ್ಲೂಕು ಜನಪದ ಸಮ್ಮೇಳನ :

## ಸರ್ವಾಧ್ಯಕ್ಷರಾಗಿ ವಿದ್ವಾಂಸ ಗಿರೀಶ್ ಆಯ್ಕೆ



**ಚಿಕ್ಕಮಗಳೂರು:** ಕರ್ನಾಟಕ ಜಾನಪದ ಪರಿಷತ್ತಿನಿಂದ ಕಡೂರು ತಾಲ್ಲೂಕಿನ ಯಗಟಿಯಲ್ಲಿ ನ.16ರಂದು ತಾಲೂಕು ಜಾನಪದ ಸಮ್ಮೇಳನ ನಡೆಯಲಿದ್ದು, ಸಮ್ಮೇಳನಾಧ್ಯಕ್ಷರಾಗಿ ಹರಿಕಥೆ ವಿದ್ವಾಂಸ, ಜಾನಪದ, ರಂಗಭೂಮಿಕಲಾವಿದ ಗಿರೀಶ್ ಆಯ್ಕೆಯಾಗಿದ್ದಾರೆ.

ಕಡೂರು ತಾಲ್ಲೂಕಿನ ಗರ್ಜೆಯಲ್ಲಿ ಭಾನುವಾರ ನಡೆದ ಕರ್ನಾಟಕ ಜಾನಪದ ಪರಿಷತ್ತಿನ ಪೂರ್ವಭಾವಿ ಸಭೆಯಲ್ಲಿ ಈ ಆಯ್ಕೆ ಮಾಡಲಾಯಿತು, ಸಮ್ಮೇಳನದ ರೂಪುರೇಷೆಯನ್ನು ತಯಾರಿಸಲಾಯಿತು.

ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಕರ್ನಾಟಕ ಜಾನಪದ ಪರಿಷತ್ತಿನ ಜಿಲ್ಲಾಧ್ಯಕ್ಷ ಜಿ.ಬಿ.ಸುರೇಶ್ ಪಾಶ್ಚಾತ್ಯ ಸಂಗೀತದ ಗುಂಗಿನಲ್ಲಿರುವ ಯುವಜನತೆ ಜಾನಪದ ಕಲೆ, ಸಾಹಿತ್ಯ, ಸಂಗೀತಗಳಿಂದ, ದೂರ ಸರಿಯುತ್ತಿರುವ ಈ ಸಂದರ್ಭದಲ್ಲಿ ಗ್ರಾಮಾಂತರ ಪ್ರದೇಶಗಳಲ್ಲಿ ಜಾನಪದ ಸಮ್ಮೇಳನ, ಜಾನಪದ ಕಲೋತ್ಸವ, ಜಾನಪದ ಕಲೆಗಳ ತರಬೇತಿ ಶಿಬಿರ, ಜಾನಪದ ವಿಚಾರ ಸಂಕಿರಣಗಳು, ಉಪನ್ಯಾಸಗಳು, ಜಾನಪದ ಗೀತೆಗಾಯನತರಬೇತಿ ಶಿಬಿರಗಳನ್ನು ಆಗಾಗ ನಡೆಸುವ ಮೂಲಕ ಅವರಲ್ಲಿ ಜಾನಪದದ ಬಗ್ಗೆ ಆಸಕ್ತಿಯನ್ನು ಮೂಡಿಸಬೇಕಾಗಿದೆ ಎಂದರು.

ಸಮಾಜದ ಲೋಪ ದೋಷಗಳನ್ನು, ಅಂಕುಡೊಂಕುಗಳನ್ನು ತಿದ್ದುವ ಶಕ್ತಿ ಜಾನಪದಕ್ಕಿದೆ ಎಂದ ಅವರು ಇಂದಿನ ಮಕ್ಕಳು ಮತ್ತು ಯುವಜನತೆಯಲ್ಲಿ ನಮ್ಮ ಸಂಸ್ಕೃತಿ, ಸಂಸ್ಕಾರ, ಆಚಾರ ವಿಚಾರ, ಉಡುಗೆತೊಡುಗೆ, ಧರ್ಮ, ಭಾಷೆ, ಆಹಾರಪದ್ಧತಿ, ಧಾರ್ಮಿಕಸಹಿಷ್ಣುತೆ, ಮುಂತಾದವುಗಳ ಬಗ್ಗೆ ಅರಿವು ಮೂಡಿಸಬೇಕಾದರೆ ಶಾಲಾ ಕಾಲೇಜುಗಳಲ್ಲಿ ಜಾನಪದದ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸಬೇಕು ಎಂದು ಹೇಳಿದರು.

ಯಗಟಿಯಲ್ಲಿ ತಾಲ್ಲೂಕು ಜಾನಪದ ಸಮ್ಮೇಳನವನ್ನು ಅದ್ದೂರಿಯಾಗಿ ನಡೆಸಲಿದ್ದು ಅದರ ಯಶಸ್ಸಿಗೆ ಎಲ್ಲರೂ ಸಹಕರಿಸಬೇಕು ಎಂದು ಮನವಿ ಮಾಡಿದರು.

ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಪರಿಷತ್ತಿನ ತಾಲ್ಲೂಕು ಅಧ್ಯಕ್ಷ ಯಗಟಿ ಜಗದೀಶ್ವರಾಚಾರ್ ಜಾನಪದ ಲೋಕ ರಾಜ್ಯಾದ್ಯಂತ ಶಾಖೆಗಳನ್ನು ಹೊಂದಿದ್ದು ಜಿಲ್ಲೆ, ತಾಲ್ಲೂಕು, ಹೋಬಳಿ, ಗ್ರಾಮ ಮಟ್ಟದಲ್ಲಿ ಜಾನಪದ ಸಮ್ಮೇಳನವನ್ನು ನಿರಂತರವಾಗಿ ನಡೆಸುತ್ತಿದೆ ಎಂದು ತಿಳಿಸಿದರು.

ತಾಲ್ಲೂಕು ಸಮ್ಮೇಳನದ ದಿನ ಯಗಟಿಯಲ್ಲಿ ವೀರಗಾಸೆ, ಡೊಳ್ಳುಕುಣಿತ ಪಟಕುಣಿತ, ಪೂಜಾಕುಣಿತ, ಸುಗ್ಗಿಕುಣಿತ, ಗಾರುಡಿ ಗೊಂಬೆ ಕುಣಿತ ಕೋಲಾಟ. ಜಾನಪದ ನೃತ್ಯ, ಜಾನಪದ ಗೀತೆಗಳು, ಗೀಗಿಪದ, ಒಗಟುಗಾದೆ, ಮುಂತಾದ ಕಲೆಗಳ ಪ್ರದರ್ಶನಕ್ಕೆ ಸಮ್ಮೇಳನದ ವೇದಿಕೆಯಲ್ಲಿ ಅವಕಾಶ ಕಲ್ಪಿಸಲಾಗುವುದು, ತಾಲ್ಲೂಕಿನ ಹಿರಿಯಕಲಾವಿದರನ್ನು ಗೌರವಿಸಲಾಗುವುದು ಎಂದು ಹೇಳಿದರು.

ಕಲಾವಿದ ಚಿಕ್ಕನಲ್ಲೂರು ಜಯಣ್ಣ ಮಾತನಾಡಿ ಕಡೂರು ತಾಲ್ಲೂಕು ಜಾನಪದ ಕಲೆಗಳಿಗೆ ಹೆಸರುವಾಸಿಯಾಗಿದ್ದು, ಹೆಚ್ಚು ಕಲಾವಿದರನ್ನು ಹೊಂದಿದೆ ಜಾನಪದ ಕಲೆಗಳಿಗೆ ಹೆಚ್ಚು ಪ್ರೋತ್ಸಾಹ ನೀಡುತ್ತಿದೆ ಹಾಗಾಗಿ ಯಗಟಿಯಲ್ಲಿ ತಾಲೂಕು ಮಟ್ಟದ ಸಮ್ಮೇಳನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಜಾನಪದ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ವೈ.ಟಿ.ನಾಗರಾಜಪ್ಪ, ಕಲಾವಿದ ಮಲಿಯಪ್ಪ, ಯಗಟಿ ಹೋಬಳಿ ಅಧ್ಯಕ್ಷ ಪರಮೇಶ್ವರಪ್ಪ, ಗ್ರಾಮ ಪಂಚಾಯಿತಿ ಸದಸ್ಯ ರಾಜು, ಕಜಾಪ ಸಹ ಕಾರ್ಯದರ್ಶಿ ಚಿಕ್ಕನಲ್ಲೂರು ತಿಪ್ಪೇಶ್ ಉಪಸ್ಥಿತರಿದ್ದರು, ಗ್ರಾಮದ ಎಲ್ಲಾ ಕಲಾವಿದರು ಪಾಲ್ಗೊಂಡಿದ್ದರು.

## ಸಂಗೀತದಲ್ಲಿ ಕಾಡುವ ಗೀತೆಗಳು ವಿಶೇಷ: ಡಾ. ಜೆ.ಪಿ.ಕೃಷ್ಣೇಗೌಡ



**ಚಿಕ್ಕಮಗಳೂರು:** ಸರ್ವರಿಗೂ ಅಗತ್ಯವಾದ ಸಂಗೀತದಲ್ಲಿ ಕಾಡುವ ಗೀತೆಗಳು ವಿಶೇಷವಾದವು. ಅರ್ಥಗರ್ಭಿತವಾದ ಗೀತೆ ರಚನೆ ಮಾಡುವುದು ಎಷ್ಟು ಕಷ್ಟವೋ ಅವುಗಳಿಗೆ ರಾಗ ಸಂಯೋಜಿಸಿ ಭಾವತುಂಬಿ, ಹಾಡುವುದುಕೂಡ ಕಷ್ಟದ ಕೆಲಸವೇ ಆಗಿದೆ ಎಂದು ಸುಗಮ ಸಂಗೀತ ಗಂಗಾದ ಅಧ್ಯಕ್ಷ ಡಾ.ಜೆ.ಪಿ.ಕೃಷ್ಣೇಗೌಡ ವಿಶ್ಲೇಷಿಸಿದರು.

ಪೂರ್ವಿ ಸುಗಮ ಸಂಗೀತ ಅಕಾಡೆಮಿ ಟ್ರಸ್ಟ್, ಯುರೇಕಾ ಅಕಾಡೆಮಿ, ಲಯನ್ಸ್ ಸಂಸ್ಥೆ ಹಾಗೂ ಕಲ್ಕಟ್ಟೆ ಪುಸ್ತಕದ ಮನೆ ಸಹಯೋಗದಲ್ಲಿ ಭಾನುವಾರ ಸಂಜೆ ನಗರದ ಎಂ.ಇ.ಎಸ್. ಕಾಲೇಜಿನ ಆವರಣದಲ್ಲಿ ಆಯೋಜಿಸಿದ್ದ ಆಯ್ದ ಶ್ರೋತೃಗಳ ಆಯ್ಕೆಯ ಕಾಡುವ ಗೀತೆಗಳ ಗಾಯನ ಹಾಗೂ ನಮ್ಮೂರ ಪ್ರತಿಭೆ, 'ಪರಸಯ್ಯನಪ್ರೇಮ ಪ್ರಸಂಗ' ಚಲನಚಿತ್ರ ಖ್ಯಾತಿಯ ನಾಯಕ ನಟಿ ರಶ್ಮಿತಾ ಆರ್.ಗೌಡ ಅವರಿಗೆ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಪಶುಗಳಿಗೆಸಹ ಸಂಗೀತ ಪ್ರಿಯವಾಗಿದ್ದು, ಕೊಳಲುವಾದನವನ್ನು ಅವು ಆಸ್ವಾದಿಸುತ್ತವೆ ಎಂದರು.

ಲಯನ್ಸ್ ಸಂಸ್ಥೆಯ ಸಂಯೋಜಕರಾದ ಅಣ್ಣಾವೇಲು ಮಾತನಾಡಿ, ಸಂಗೀತದಲ್ಲಿ ಪ್ರತಿಭೆ ಹೊಂದಿರುವುದು ದೇವರು ನೀಡಿದ ಕೊಡುಗೆ. ಇಲ್ಲಿರುವ ಗಾಯಕರ ಸುಮಧುರ ಪ್ರಸ್ತುತಿಯನ್ನು ಆಲಿಸುವುದೇ ಒಂದು ಉತ್ತಮ ಅವಕಾಶ ಎಂದು ಹೇಳಿದರು.

'ಪರಸಯ್ಯನ ಪ್ರೇಮ ಪ್ರಸಂಗ' ಚಿತ್ರಉತ್ತಮ ಸಂದೇಶಗಳನ್ನು ಹೊತ್ತು ಅತ್ಯುತ್ತಮವಾಗಿ ಮೂಡಿ ಬಂದಿದೆ. ಚಿತ್ರ ಬಿಡುಗಡೆಯಾಗುವ ಮೊದಲೇ ಚಿಕ್ಕಮಗಳೂರಿನ ಪ್ರತಿಭೆ ರಶ್ಮಿತಾ ಆರ್.ಗೌಡ ಈ ಚಿತ್ರದಲ್ಲಿ ನಾಯಕ ನಟಿ ಎನ್ನುವುದು ಗೊತ್ತಾಗಿದ್ದರೆ ಇಲ್ಲಿನ ಜನತೆ ಹೆಚ್ಚಿನ ಸಂಖ್ಯೆಯಲ್ಲಿಚಿತ್ರ ವೀಕ್ಷಿಸಿ ಪ್ರೋತ್ಸಾಹ ನೀಡಲು ಸಾಧ್ಯವಾಗುತ್ತಿತ್ತು ಎಂದರು.

ಕಲ್ಕಟ್ಟೆ ಪುಸ್ತಕದ ಮನೆಯ ಅಧ್ಯಕ್ಷೆ ರೇಖಾ ನಾಗರಾಜರಾವ್ ಮಾತನಾಡಿ, ಎಂಥವರ ಮನಸ್ಸನ್ನು ಕೂಡ ಪರಿವರ್ತನೆ ಮಾಡುವ ಶಕ್ತಿ ಸಂಗೀತಕ್ಕಿದೆ. ತಾಯಿಯ ಗರ್ಭದಲ್ಲಿರುವಾಗ ಹಾಗೂ ರೋಗಗುಣಪಡಿಸಲು ಸಂಗೀತವನ್ನು ಆರೈಕೆ, ಚಿಕಿತ್ಸೆಯಾಗಿ ಬಳಸುವ ಕ್ರಮವೂ ಇದೆ. ಅಷ್ಟೊಂದು ದೊಡ್ಡ ಶಕ್ತಿ ಸಂಗೀತಕ್ಕಿದೆ ಎಂದರು.

ಪೈಲಟ್ ಆಗಬೇಕೆಂದಿದ್ದ ರಶ್ಮಿತಾ ಆರ್.ಗೌಡ ಕನಸು ಕಂಡು ಚಿತ್ರರಂಗದ ನಾಯಕ ನಟಿಯಾಗಿ ಹೊರಹೊಮ್ಮಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**